ಬೆಂಗಳೂರು ಸಂಪುಟ: 16 ಸಂಚಿಕೆ: 42 ಪುಟ: 06 ಶನಿವಾರ 04-01-2025

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh



ಡಯಟ್ ಮಾಡೋದೇ ಇಲ್ಲ... ಆದ್ರೂ ರಾಧಿಕಾ ಫಿಟ್

ಮಂತ್ರವಾದಿ ಗೋಲ್ಡನ್ ಸ್ಟಾರ್

ತೂಫಾನ್ ಬ್ಯಾಟಿಂಗ್ ಪುಟ 6

# ಪರಿಹಾರಕ್ಕೆ ಆಗ್ರಹ

## ರಾಜ್ಯದಲ್ಲಿನ ಬಾಣಂತಿಯರ ಸಾವಿನ ನೈತಿಕ ಹೊಣೆ ಸರ್ಕಾರವೇ ಹೊರಬೇಕು: ವಿಜಯೇಂದ್ರ



**ಶಿವಮೊಗ್ಗ:** ಮುಖ್ಯಮಂತ್ರಿಗಳೇ ನಿಮಗೆ ಮನುಷ್ಯತ್ವ ಇದ್ದರೆ ಈ ರಾಜ್ಯದ ಸಿಎಂ ಸ್ಥಾನಕ್ಕೆ ಗೌರವ ತರುವ ಕಿಂಚಿತ್ತು ಕಾಳಜಿ ಇದ್ದರೆ ಮೃತ ಬಾಣಂತಿಯರ ಕುಟುಂಬಕ್ಕೆ ಕನಿಷ್ಠ 25 ಲಕ್ಷ ರೂ. ಪರಿಹಾರವನ್ನು ತಕ್ಷಣ ಘೋಷಿಸಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ಆಗ್ರಹಿಸಿದರು.

ಇಲ್ಲಿ ಬಿಜೆಪಿ ಮಹಿಳಾ ಮೋರ್ಚಾ ವತಿಯಿಂದ ಇಂದು ನಡೆದ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರ ರಾಜೀನಾಮೆ ಪಡೆದುಕೊಳ್ಳಿ ಎಂದು ಮುಖ್ಯಮಂತ್ರಿಗಳನ್ನು ಒತ್ತಾಯಿಸಿದರು.

ಅನಾಥ ಮಕ್ಕಳನ್ನು ರಾಜ್ಯ ಸರಕಾರ ದತ್ತು ತೆಗೆದುಕೊಳ್ಳಬೇಕು; ಆಗ ಮಾತ್ರ ಭಗವಂತ ನಿಮ್ಮನ್ನು ಕ್ಷಮಿಸಲು ಸಾಧ್ಯ ಎಂದು ತಿಳಿಸಿದರು. ಕಾಂಗ್ರೆಸ್ಸಿನ ದುಷ್ಟ ಸರಕಾರ ಅಧಿಕಾರದ ಅಮಲಿನಲ್ಲಿ ತೇಲುತ್ತಿದೆ. ಈ ಭ್ರಷ್ಟಾಚಾರದ ವಿರುದ್ಧ ಬಿಜೆಪಿ ನಿರಂತರ ಹೋರಾಟ ಮಾಡುತ್ತಿದೆ ಎಂದು ವಿವರಿಸಿದರು. ಬಾಣಂತಿಯರು, ನವಜಾತ ಶಿಶುಗಳ ಸಾವಿನ ವಿಚಾರಕ್ಕೆ ಸಂಬಂಧಿಸಿ ಮಹಿಳಾ ಮೋರ್ಚಾದಿಂದ ರಾಜ್ಯಾದ್ಯಂತ ಹೋರಾಟ ನಡೆದಿದೆ ಎಂದು ತಿಳಿಸಿದರು.

ತಡ ಮಾಡದೇ 25 ಲಕ್ಷ ಪರಿಹಾರ ಘೋಷಿಸಿ; ಮಕ್ಕಳ ಜೀವನೋಪಾಯಕ್ಕೆ ವ್ಯವಸ್ಥೆಯನ್ನೂ ರಾಜ್ಯ ಸರಕಾರವೇ ಮಾಡಬೇಕು ಎಂದು ಅವರು ಒತ್ತಾಯಿಸಿದರು. ಈ ಲಜ್ಜೆಗೆಟ್ಟ ಸರಕಾರಕ್ಕೆ ಬಿಜೆಪಿ ತನ್ನ ಹೋರಾಟದ ಮೂಲಕ ಪಾಠ ಕಲಿಸಬೇಕಿದೆ ಎಂದು ಅವರು ಹೇಳಿದರು.ಈ ಸಾವುಗಳ ಸಂಬಂಧ ಮಾಹಿತಿಯನ್ನು ಕೇಂದ್ರ ಮಾನವ ಹಕ್ಕುಗಳ ಆಯೋಗಕ್ಕೆ ಪತ್ರ ಮೂಲಕ ತಿಳಿಸಿ ರಾಜ್ಯ ಪುಟ 2



ಕರ್ನಾಟಕ ಪ್ರಾಂತ ರೈತ ಸಂಘದ ರಾಜ್ಯಾಧ್ಯಕ್ಷ ಹಿರಿಯ ಕಮ್ಯುನಿಸ್ಟ್ ಹೋರಾಟಗಾರ ಜಿ.ಸಿ.ಬಯ್ಯಾರೆಡ್ಡಿ ಅವರ ಅಂತಿಮ ದರ್ಶನ ಪಡೆದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕುಟುಂಬದ ಮತ್ತು ಕಾಮ್ರೇಡ್ ಗಳ ದುಃಖದಲ್ಲಿ ಭಾಗಿಯಾದರು.

## ಎತ್ತಿನ ಬಂಡಿ ಗ್ಯಾರಂಟಿ

**ಬೆಂಗಳೂರು:** ಬಸ್ ದರ ಏರಿಕೆ ಖಂಡಿಸಿ ರಾಜ್ಯ ಸರ್ಕಾರದ ವಿರುದ್ಧ ಆಮ್ ಆದ್ಮಿ ಪಕ್ಷ ಇಂದಿಲ್ಲಿ ಪ್ರತಿಭಟನೆ ನಡೆಸಿದೆ.15% ದರ ಏರಿಕೆಯನ್ನು ವಿರೋಧಿಸಿ ನಗರದ ಫ್ರೀಡಂ ಪಾರ್ಕಿನಲ್ಲಿ ಆಮ್ ಆದ್ಮಿ ಪಕ್ಷ ನೂರಾರು ಕಾರ್ಯಕರ್ತರು ಎತ್ತಿನ ಬಂಡಿ ಎಳೆಯುವ ಮೂಲಕ ವಿಶಿಷ್ಟ ರೀತಿಯ ಪ್ರತಿಭಟನೆ ನಡೆಸಿದರು. ಕಾಂಗ್ರೆಸ್ ಸರ್ಕಾರದ "ಎತ್ತಿನ ಬಂಡಿ ಗ್ಯಾರಂಟಿ", "ಸರ್ಕಾರ ಜಾಲಿ ಜಾಲಿ, ಜನರ ಜೇಬು ಖಾಲಿ ಖಾಲಿ" ಎಂದು ಘೋಷಣೆ ಕೂಗುವಮೂಲಕ ಸರ್ಕಾರದ ಕ್ರಮವನ್ನು ತೀವ್ರವಾಗಿ ವಿರೋಧಿಸಿದರು.

ಪ್ರತಿಭಟನೆಗೆ ನೇತೃತ್ವವನ್ನು ವಹಿಸಿದ್ದ ಬೆಂಗಳೂರು ನಗರ ಪ್ರಧಾನ ಕಾರ್ಯದರ್ಶಿ ಜಗದೀಶ್ ಚಂದ್ರ ಸುದ್ದಿಗಾರರೊಂದಿಗೆ ಮಾತನಾಡಿ, " ಕಾಂಗ್ರೆಸ್ ಸರ್ಕಾರವು ಆಮ್ ಆದ್ಮಿ ಪಕ್ಷದ ಪುಟ 2

## ರಾಜೀನಾಮೆಗೆಹೋರಾಟ



**ಕಲಬುರಗಿ:** ಗುತ್ತಿಗೆದಾರ ಸಚಿನ್ ಪಾಂಚಾಳ್ ಆತ್ಮಹತ್ಯೆ ಪ್ರಕರಣದ ಸಿಬಿಐ ತನಿಖೆಗೆ ಆಗ್ರಹಿಸಿ ಹಾಗೂ ಸಚಿವ ಪ್ರಿಯಾಂಕ್ ಖರ್ಗೆ ಅವರ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ಇಂದು ಕಲಬುರಗಿಯ ಜಗತ್ ಸರ್ಕಲ್ ಬಳಿ ಬೃಹತ್ ಪ್ರತಿಭಟನೆ ನಡೆಸಿತು.

ಕಲಬುರಗಿಂಯಲ್ಲಿರುವ ಸಚಿವ ಪ್ರಿಯಾಂಕ್ ಖರ್ಗೆ ಅವರ ನಿವಾಸಕ್ಕೆ ಮುತ್ತಿಗೆ ಹಾಕುವ ಯತ್ನ ನಡೆಸಿದರು.

ಪ್ರತಿಪಕ್ಷ ನಾಯಕರಾದ ಆರ್. ಅಶೋಕ್, ಚಲವಾದಿ ನಾರಾಯಣಸ್ವಾಮಿ, ಬಿಜೆಪಿ ಮುಖಂಡ ಸಿ.ಟಿ ರವಿ, ರವಿಕುಮಾರ್ ಸೇರಿದಂತೆ ಹಲವು ಬಿಜೆಪಿ ನಾಯಕರುಗಳು, ನೂರಾರು ಕಾರ್ಯಕರ್ತರುಗಳು ಈ ಪ್ರತಿಭಟನೆಯಲ್ಲಿ ಭಾಗಿಯಾಗಿ, ಗುತ್ತಿಗೆದಾರ ಸಚಿನ್ ಪಾಂಚಾಳ್ ಆತ್ಮಹತ್ಯೆ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಬೇಕು ಹಾಗೂ ಸಚಿವ ಪ್ರಿಯಾಂಕ್‌ಖರ್ಗೆ ಅವರ ರಾಜೀನಾಮೆ ಪಡೆಯಬೇಕು ಇಲ್ಲವೆ ಸಂಪುಟದಿಂದ ವಜಾ ಮಾಡಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆ ಬಳಿಕ ಬಿಜೆಪಿ ನಾಯಕರುಗಳು ಕಲಬುರಗಿಯಲ್ಲಿರುವ ಸಚಿವ ಪ್ರಿಯಾಂಕ್ ಖರ್ಗೆ ಅವರ ನಿವಾಸಕ್ಕೆ ಮುತ್ತಿಗೆ ಹಾಕಲು ಯತ್ನಿಸಿದರಾದರೂ ಅದಕ್ಕೆ ಪೊಲೀಸರು ಅವಕಾಶ ಕೊಡದೆ ಎಲ್ಲರನ್ನು ವಶಕ್ಕೆ ಪಡೆದರು.


ಗುತ್ತಿಗೆದಾರ ಪಾಂಚಾಳ್ ಆತ್ಮಹತ್ಯೆಗೆ ಸಚಿವ ಪ್ರಿಯಾಂಕ್‌ಖರ್ಗೆ ಅವರ ಆಪ್ತ ರಾಜುಕಪನೂರ್ ಕಾರಣ. ಡೆತ್‌ನೋಟ್‌ನಲ್ಲಿ ಪಾಂಚಾಳ್ ಇದನ್ನು ಉಲ್ಲೇಖಿಸಿದ್ದಾರೆ. ಹಾಗಾಗಿ, ಸಚಿವ ಪ್ರಿಯಾಂಕ್‌ಖರ್ಗೆ ಅವರು ರಾಜೀನಾಮೆ ನೀಡಿ ತನಿಖೆ ನಡೆಸಬೇಕು ಎಂದುಪ್ರತಿಭಟನಾಕಾರರು ಆಗ್ರಹಿಸಿ, ಘೋಷಣೆಗಳನ್ನು ಕೂಗಿ ಭಿತ್ತಿ ಪತ್ರಗಳನ್ನು ಪ್ರದರ್ಶಿಸಿದರು.

ಬಿಜೆಪಿ ನಾಯಕರ ಪ್ರತಿಭಟನೆ ಹಿನ್ನೆಲೆಯಲ್ಲಿ ಪುಟ 2

## ಪ್ರಗತಿಪರ ಚಿಂತಕ ಮುಜಾಫರ್ ಅಸ್ಸಾದಿ ನಿಧನ

ಮೈಸೂರು: ಮೈಸೂರು ವಿ.ವಿ ವಿಶ್ರಾಂತ ಹಂಗಾಮಿ ಕುಲಪತಿ ಹಾಗೂ ಪ್ರಗತಿಪರ ಚಿಂತಕ ಮುಜಾಫರ್ ಅಸ್ಸಾದಿ(63) ನಿಧನರಾಗಿದ್ದು ಸಿಎಂ ಸಿದ್ದರಾಮಯ್ಯ ಸೇರಿ ಹಲವರು ಸಂತಾಪ ಸೂಚಿಸಿದ್ದಾರೆ.

ಹೃದಯ ಸಂಬಂಧಿ ಖಾಯಿಲೆಯಿಂದ ಬಳಲುತ್ತಿದ್ದ ಮುಜಾಫರ್ ಅಸ್ಸಾದಿ ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಮಧ್ಯರಾತ್ರಿ ನಿಧನರಾಗಿದ್ದಾರೆ. ಮೈಸೂರು ಸರಸ್ವತಿ ನಿವಾಸದಲ್ಲಿ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ. ಇಂದು 3 ರಿಂದ 5 ಗಂಟೆ ವರಗೆ ಮುಸ್ಲಿಂ ಹಾಸ್ಟೆಲ್ ಬಳಿ ಸಾರ್ವಜನಿಕ್ಕೆ ಅವಕಾಶ ಪುಟ 2



ನೀಡಲಾಗಿದೆ. ನಂತರ ನಗರದ ಟಿಪ್ಪು ಸರ್ಕಲ್ ಬಳಿ ಇರುವ ಮುಸ್ಲಿಂ ಬರಿಯಲ್ ಸಮಾಧಿಯಲ್ಲಿ ಅಂತ್ಯ ಸಂಸ್ಕಾರ ನೆರವೇರಲಿದೆ ಎಂದು ಕುಟುಂಬಸ್ಥರು ಮಾಹಿತಿ ನೀಡಿದ್ದಾರೆ. ಮೈಸೂರು ವಿ.ವಿ ಯ ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾಗಿ, ಕಲಾ ವಿಭಾಗದ ಡೀನ್ ಮತ್ತು ಪ್ರಭಾರ ಕುಲಪತಿಗಳಾಗಿ ಮುಜಾಫರ್ ಅಸ್ಸಾದಿ ಸೇವೆ ಸಲ್ಲಿಸಿದ್ದರು.

**ಸಿಎಂ ಸಿದ್ದರಾಮಯ್ಯ ಸಂತಾಪ:**

ಮುಜಾಫರ್ ಅಸ್ಸಾದಿ ಅವರ ನಿಧನಕ್ಕೆ ಟ್ವೀಟ್ ಮಾಡಿ ಸಂತಾಪ ಸೂಚಿಸಿರುವ ಸಿಎಂ ಸಿದ್ದರಾಮಯ್ಯ, ನಮ್ಮೆಲ್ಲರಿಗೆ ಪ್ರೀತಿಪಾತ್ರರಾಗಿದ್ದ ಹಿರಿಯ ವಿದ್ವಾಂಸ ಮತ್ತು ಸಾಮಾಜಿಕ ಚಿಂತಕ ಪ್ರೊ.ಮುಝಾಫರ್ ಅಸ್ಸಾದಿ ಅವರ ಅನಿರೀಕ್ಷಿತ ಸಾವಿನಿಂದ ಆಘಾತಕ್ಕೀಡಾಗಿದ್ದೇನೆ. ಪುಟ 2

## ಮನೆಗೆ ಬಿಜೆಪಿ ಮುತ್ತಿಗೆ ಹಾಕಲು ಬಂದ್ರೆ ಸ್ವಾಗತ

**ಕಲಬುರಗಿ:** ಸಚಿನ್ ಆತ್ಮಹತ್ಯೆ ಪ್ರಕರಣ ಸಂಬಂಧ ಕಲಬುರಗಿಯಲ್ಲಿ ಬಿಜೆಪಿ ಬೃಹತ್ ಪ್ರತಿಭಟನೆಗೆ



ಮುಂದಾಗಿದ್ದು ಈ ಕುರಿತು ಪ್ರತಿಕ್ರಿಯಿಸಿರುವ ಗ್ರಾಮೀಣಾಭಿವೃದ್ಧಿ ಇಲಾಖೆ ಸಚಿವ ಪ್ರಿಯಾಂಕ್ ಖರ್ಗೆ, ನಮ್ಮ ಮನೆಗೆ ಬಿಜೆಪಿ ಮುತ್ತಿಗೆ ಹಾಕಲು ಬಂದ್ರೆ ಸ್ವಾಗತ ಎಂದಿದ್ದಾರೆ.

ಈ ಕುರಿತು ಇಂದು ಮಾತನಾಡಿದ ಪ್ರಿಯಾಂಕ್ ಖರ್ಗೆ, ಬಿಜೆಪಿಯವರು ತಮ್ಮ ಹೇಳಿಕೆ ಬದಲಾಯಿಸುತ್ತಿದ್ದಾರೆ. ಏನು ಬೇಕು ಅಂತ ಸ್ಪಷ್ಟವಾಗಿ ಹೇಳುತ್ತಿಲ್ಲ. ನಾನು ಸಚಿನ್ ಕುಟುಂಬದ ಜತೆ ಮಾತನಾಡಿದ್ದೇನೆ ಬಿಜೆಪಿಯವರು ಹೇಳಿದಂತೆ ಕುಣಿಯಲು ಆಗಲ್ಲ. ಸಚಿನ ಕುಟುಂಬಸ್ಥರಿಗೆ ಭರವಸೆ ನೀಡಿದ್ದೇನೆ ಎಂದರು.ಬಿಜೆಪಿಗೆ ಸಿಬಿಐ ಮೇಲೆ ಯಾಕೆ ಇಷ್ಟು ಪ್ರೀತಿ. ಹೆಣಬಿದ್ದರೆ ಸಾಕು ಬಿಜೆಪಿ ಪುಟ 2

## ಮುಡಾದ ಕೆಸರೆ ಗ್ರಾಮಕ್ಕೆ ಸಿದ್ದರಾಮಯ್ಯ ಹೆಸರಿಡಿ



**ಮೈಸೂರು:** ಮೈಸೂರಿನ ಕೆಆರ್ ಎಸ್ ರಸ್ತೆಗೆ ಸಿಎಂ ಸಿದ್ದರಾಮಯ್ಯ ಹೆಸರಿಡುವ ವಿಚಾರಕ್ಕೆ ಸಂಬಂಧಿಸಿದಂತೆ ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ ವ್ಯಂಗ್ಯವಾಡಿದ್ದಾರೆ.

ಈ ಕುರಿತು ಮಾತನಾಡಿರುವ ಹೆಚ್.ಡಿ ಕುಮಾರಸ್ವಾಮಿ, ದೇವನೂರು ಬಡಾವಣೆಗೆ ಸಿಎಂ ಸಿದ್ದರಾಮಯ್ಯ ಹೆಸರಿಡಲಿ. ಕೆಸರೆ ಗ್ರಾಮಕ್ಕೆ ಸಿದ್ದರಾಮಯ್ಯ ಹೆಸರಿಡಿ ಎಂದು ಲೇವಡಿ ಮಾಡಿದರು.ರಸ್ತೆಯಲ್ಲಿ ಯಾಕೆ ಪ್ರತಿಭಟನೆ ಮಾಡ್ತಿರಾ ಅಂತ ಬಿಜೆಪಿ ಅವರಿಗೆಹೇಳಿದ್ದೇನೆ. ಪ್ರಿನ್ಸೆಸ್ ರಸ್ತೆ ಬದಲಾವಣೆ ಮುನ್ನಲೆಗೆ ಬಂದಾಗಲೂ ಸಿಎಂ ಮೌನವಾಗಿದ್ದಾರೆ. ಸಿಎಂ ರಸ್ತೆ ವಿಷಯದಲ್ಲಿ ಜಾಣ ಮೌನವಾಗಿದ್ದಾರೆ. ಮುಡಾದ ಕೆಸರೆ ಗ್ರಾಮ ಬಂತಲ್ಲ ಅದಕ್ಕೆ ಸಿದ್ದರಾಮಯ್ಯ ಹೆಸರನ್ನು ಇಡಿ. ಅದನ್ನು ಬಿಟ್ಟು ರಾಜಮನೆತನದ ಹೆಸರು ಯಾಕೆ ತೆಗಿತೀರಾ ಎಂದು ಹೆಚ್.ಡಿ ಕುಮಾರಸ್ವಾಮಿ ಟಾಂಗ್ ಕೊಟ್ಟರು.

ದರ ಹೆಚ್ಚಳ ಜನಕ್ಕೆ ತಾನೇ ಮಂತ್ರಿಗಳಿಗೆ ಅಲ್ವಾಲ್ಲ..? ಕೆ ಎಸ್ ಆರ್‌ಟಿಸಿ ಬಸ್ ಪ್ರಯಾಣ ದರ ಹೆಚ್ಚಳ ವಿಚಾರ ಕುರಿತು ಪ್ರತಿಕ್ರಿಯಿಸಿದ ಹೆಚ್.ಡಿ ಕುಮಾರಸ್ವಾಮಿ, ದರ ಹೆಚ್ಚಳ ಜನಕ್ಕೆ ತಾನೇ. ಮಂತ್ರಿಗಳಿಗೆ ಅಲ್ವಾಲ್ಲ. ಅವರಿಗೇನು ? ಜನರ ಜೋಬಿಗೆ ಕೈ ಹಾಕಿ ಲೂಟಿ ಮಾಡುತ್ತಿದ್ದಾರೆ. ಜನರಿಗೆ ಕಷ್ಟ ಕೊಟ್ಟು ಖುಷಿ ಪಡುವ ಸರ್ಕಾರ ಇದು. ಗ್ಯಾರಂಟಿಗಳಿಗೆ ಇಬ್ಬರು ಮಹನೀಯರು ಸಹಿ ಹಾಕಿದರು. ಪುಟ 2

## ಕಾರ್ಖಾನೆಯಲ್ಲಿ ಸ್ಫೋಟ: 6 ಮಂದಿ ಸಾವು



**ಚೆನ್ನೈ:** ತಮಿಳುನಾಡಿನ ವಿರುದುನಗರ ಜಿಲ್ಲೆಯ ಸಾಯಿನಾಥ್ ಪಟಾಕಿ ಕಾರ್ಖಾನೆಯಲ್ಲಿ ಇಂದು ಭಾರೀ ಸ್ಫೋಟ ಸಂಭವಿಸಿ ಆರು ಮಂದಿ ಸಾವನ್ನಪ್ಪಿ, ಏಳು ಮಂದಿ ಗಂಭೀರವಾಗಿ ಗಾಯಗೊಂಡಿದ್ದಾರೆ.ಪಟಾಕಿ ತಯಾರಿಕೆ ವೇಳೆ ರಾಸಾಯನಿಕ ಬೆರೆಸುವ ಪ್ರಕ್ರಿಯೆಯಲ್ಲಿ ಈ ಸ್ಫೋಟ ಸಂಭವಿಸಿದೆ ಎಂದು ಶಂಕಿಸಲಾಗಿದೆ. ಇದರಿಂದ ಕಾರ್ಖಾನೆಯ ಒಂದು ಕೊಠಡಿ ಧ್ವಂಸವಾಗಿದೆ. ಬೆಂಕಿ ಹೊತ್ತಿಕೊಂಡ ಕಾರಣ ಪುಟ 2

## ವರ್ಷಕ್ಕೆ 2,000 ಕೋಟಿ ರೂ. ನೀಡಿದರೆ ಪರಿಸ್ಥಿತಿ ಸುಧಾರಣೆ

**ಬೆಂಗಳೂರು:** ಸರ್ಕಾರ ವಾರ್ಷಿಕ 2,000 ಕೋಟಿ ರೂ. ಅನುದಾನ ನೀಡಿದರೆ ರಸ್ತೆ ಸಾರಿಗೆ ನಿಗಮಗಳ ಪರಿಸ್ಥಿತಿ ಸುಧಾರಣೆಯಾಗಲಿದೆ ಎಂದು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ತಿಳಿಸಿದರು.

ವಿಧಾನಸೌಧದಲ್ಲಿ ಮಾಧ್ಯಮಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಸರ್ಕಾರ ವಾರ್ಷಿಕ ರಸ್ತೆ ಸಾರಿಗೆ ನಿಗಮಗಳಿಗೆ 2,000 ಕೋಟಿ ಅನುದಾನ ನೀಡಿದರೆ ಪರಿಸ್ಥಿತಿ ಸುಧಾರಣೆ ಆಗಲಿದೆ. ಈಗ ವಾರ್ಷಿಕ 500-300 ಕೋಟಿ ರೂ. ವರೆಗೆ ಅನುದಾನ ನೀಡಲಾಗುತ್ತಿದೆ. ರಸ್ತೆ ಸಾರಿಗೆ ನಿಗಮಗಳ ಸುಧಾರಣೆ ಕ್ರಮಗಳ ಬಗ್ಗೆ ಆಯೋಗ ವರದಿ ನೀಡಿದೆ. ಇದರಲ್ಲಿ ಕೆಲವು ಪೂರಕವಾಗಿದ್ದರೆ, ಇನ್ನೂ ಕೆಲವು ಅನುಷ್ಠಾನ ಕಷ್ಟಸಾಧ್ಯ. ಹೀಗಾಗಿ ಎರಡು ಸಾವಿರ ಕೋಟಿ ರೂ. ವಾರ್ಷಿಕ ಅನುದಾನ ನೀಡಿದರೆ ಸಮಸ್ಯೆ ಬಗೆಹರಿಯುತ್ತದೆ. ಈ ಬಗ್ಗೆ ಸಿಎಂಗೆ ಮನವಿ ಸಲ್ಲಿಸಲಾಗುವುದು ಎಂದು ತಿಳಿಸಿದರು.

ನಾಲ್ಕು ರಸ್ತೆ ಸಾರಿಗೆ ನಿಗಮಗಳದವರು ಆರೇಳು ತಿಂಗಳಿಂದ ದರ ಪರಿಷ್ಕರಣೆಗೆ ಬೇಡಿಕೆ ಇಟ್ಟಿದ್ದರು. ಬಿಎಂಟಿಸಿಯಲ್ಲಿ 2014ರಲ್ಲಿ ದರ ಏರಿಕೆ ಮಾಡಲಾಗಿತ್ತು. ಆಗಿನಿಂದ ದರ ಪರಿಷ್ಕರಣೆ ಮಾಡಿರಲಿಲ್ಲ. 2020ರಲ್ಲಿ ಬಿಎಂಟಿಸಿ ಹೊರತುಪಡಿಸಿ ಇತರ ರಸ್ತೆ ಸಾರಿಗೆ ನಿಗಮಗಳು ಶೇ.12 ದರ ಹೆಚ್ಚಳ ಮಾಡಿತ್ತು. ಆಗ ಡೀಸೆಲ್ ಬೆಲೆ ನಿತ್ಯ  9.16 ಕೋಟಿ ಖರ್ಚು ಆಗುತ್ತಿತ್ತು. ಈಗ ನಿತ್ಯ  13.21 ಕೋಟಿ ಖರ್ಚಾಗುತ್ತಿದೆ. 2020ರಲ್ಲಿ ದಿನಕ್ಕೆ 12.85 ಕೋಟಿ ಖರ್ಚಾಗಿತ್ತು. ಈಗ ದಿನಕ್ಕೆ 18.36 ಕೋಟಿ ಖರ್ಚಾಗುತ್ತಿದೆ. ಬಿಜೆಪಿಯವರೇ ಇದ್ದಾಗ ಸುಮಾರು 5,900



ಕೋಟಿ ರೂ. ಸಾಲ ಇತ್ತು ಎಂದರು.

2006ರಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿ ಸರ್ಕಾರ 8.02% ಹೆಚ್ಚಿಸಲಾಗಿದೆ. ಆರ್. ಅಶೋಕ್ ಸಾರಿಗೆ ಸಚಿವರಾಗಿದ್ದಾಗ ಒಟ್ಟು 7 ಬಾರಿ ಒಟ್ಟು 47.8% ರಷ್ಟು ಪ್ರಯಾಣ ದರವನ್ನು ಹೆಚ್ಚಿಸಲಾಗಿತ್ತು. ಕಾಂಗ್ರೆಸ್ ಅವಧಿ 2013-2015ರಲ್ಲಿ 18.46% ದಷ್ಟು ದರ ಹೆಚ್ಚಳ ಮಾಡಲಾಗಿತ್ತು. ಬಳಿಕ ನಾನು ಸಾರಿಗೆ ಸಚಿವನಾಗಿದ್ದಾಗ 2% ದರ ಕಡಿಮೆ ಮಾಡಿದ್ದೆ. ಯಡಿಯೂರಪ್ಪ ಸಿಎಂ ಆಗಿದ್ದಾಗ 2020ರಲ್ಲಿ 12% ಎಷ್ಟು ದರ ಹೆಚ್ಚಳ ಮಾಡಲಾಗಿತ್ತು ಎಂದು ಅಂಕಿಅಂಶ ನೀಡಿದರು.

8,800 ಕೋಟಿ ರೂ. ಈವರೆಗೆ ಶಕ್ತಿ ಯೋಜನೆಗಾಗಿ ಬಿಡುಗಡೆ ಮಾಡಲಾಗಿದೆ. 1,700 ಕೋಟಿ ರೂ. ಶಕ್ತಿ ಯೋಜನೆಗೆ ಪಾವತಿ ಬಾಕಿ ಇದೆ. ಬಿಜೆಪಿಯವರು ಮಹಿಳಾ ವಿರೋಧಿಗಳಾಗಿದ್ದಾರೆ. ಅವರು ಇದ್ದಾಗ ಎರಡು ತಿಂಗಳು ತಡವಾಗಿ ವೇತನ ಕೊಡುತ್ತಿದ್ದರು.

ಈಗ ಬಿಜೆಪಿಯವರು ಅಪಪ್ರಚಾರ ಮಾಡುತ್ತಿದ್ದಾರೆ. ನಾವು ಬಂದ ಬಳಿಕ ಒಟ್ಟು 10,000 ಸಿಬ್ಬಂದಿಯನ್ನು ನೇಮಕಾತಿ ಮಾಡಲಾಗುತ್ತಿದೆ. ಈಗ ಎರಡು ಸಾವಿರ ಕೋಟಿ ರೂಪಾಯಿ ಸಾಲ ಪಡೆಯಲು ಒಪ್ಪಿಗೆ ನೀಡಲಾಗಿದೆ. ಸರ್ಕಾರನೇ ಆ ಸಾಲದ ಬಡ್ಡಿ ಹಾಗೂ ಅಸಲು ಪಾವತಿ ಮಾಡಲಿದೆ ಎಂದು ಸಚಿವರು ಮಾಹಿತಿ ನೀಡಿದರು.

ಈ ದರ ಪರಿಷ್ಕರಣೆಯಿಂದ ವಾರ್ಷಿಕ ಸುಮಾರು 1200 ಕೋಟಿ ಆದಾಯ ಹೆಚ್ಚಾಗುವ ನಿರೀಕ್ಷೆ ಇದೆ. ಎಸ್ ಟಿಯುಗಳನ್ನು ಯಾರೂ ಯಾವ ಲಾಭದ ದೃಷ್ಟಿಯಿಂದ ಮಾಡುವುದಿಲ್ಲ. 70% ಬಸ್ ಗಳಿಂದ ಯಾವುದೇ ಲಾಭ ಇಲ್ಲ ಎಂದು ತಿಳಿಸಿದರು. ಶಕ್ತಿ ಯೋಜನೆ ಜಾರಿಯಾದ ಬಳಿಕ 4340 ಹೊಸ ಬಸ್ ಗಳನ್ನು ಖರೀದಿಸಲಾಗಿದೆ ಎಂದು ತಿಳಿಸಿದರು.




# ಬಂಡಿ ಗ್ಯಾರಂಟಿ

## ಮೊದಲ ಪುಟದಿಂದ

ಗ್ಯಾರೆಂಟಿಗಳನ್ನು ನಕಲು ಮಾಡಿ ಅಧಿಕಾರ ಹಿಡಿದಿದೆ. ಆದರೆ ಭ್ರಷ್ಟಾಚಾರ ನಿಲ್ಲಿಸದೆ ಗ್ಯಾರೆಂಟಿ ಯೋಜನೆಗಳನ್ನು ಸಮರ್ಪಕವಾಗಿ ನೀಡಲಾಗುತ್ತಿಲ್ಲ. ಇದಕ್ಕಾಗಿ ದರ ಏರಿಕೆಗಳನ್ನು ಮಾಡುತ್ತಿರುವುದು ಎಂದಿಗೂ ಸಹಿಸಲು ಸಾಧ್ಯವಿಲ್ಲ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕಳೆದ ಎರಡು ಬಜೆಟ್‌ಗಳಲ್ಲಿ 2 ಲಕ್ಷ ಕೋಟಿ ಸಾಲ ಮಾಡಿದ್ದಾರೆ. ಈ ದುಡ್ಡು ಯಾರ ಜೇಬು ಸೇರುತ್ತಿದೆ ಎಂಬುದನ್ನು ಜನತೆಗೆ ತಿಳಿಸಬೇಕು. ಈಗಾಗಲೇ ಸ್ಟ್ಯಾಂಪ್ ಡ್ಯೂಟಿ, ಅಬಕಾರಿ ಸುಂಕ, ವಿದ್ಯುತ್ ದರ, ಹಾಲಿನ ದರ ಎಲ್ಲವನ್ನು ಗಗನಕ್ಕೆ ಮುಟ್ಟಿಸಿದ್ದಾರೆ. ಈಗ ಬಸ್ ದರ ಏರಿಸಿದ್ದಾರೆ, ಮುಂದಿನ ದಿನಗಳಲ್ಲಿ ನೀರಿನ ದರವನ್ನು ಏರಿಸುತ್ತಿದ್ದಾರೆ. ಈ ರೀತಿಯ ಜನ ಪರ ಕಾಳಜಿ ಇಲ್ಲದ ಕಾಂಗ್ರೆಸ್ ಸರ್ಕಾರವು ಆರ್ಥಿಕ ದಿವಾಳಿಯಾಗುವ ಹಂತಕ್ಕೆ ತಲುಪಿರುವ ಅನುಮಾನ ಜನತೆಯಲ್ಲಿ ಕಾಡುತ್ತಿದೆ ಎಂದು ಟೀಕಿಸಿದರು. ಬಸ್ ದರ ಏರಿಕೆಯನ್ನು ಈ ಕೂಡಲೇ ಹಿಂಪಡೆಯದಿದ್ದಲ್ಲಿ ಪಕ್ಷವು ರಾಜ್ಯಾದ್ಯಂತ ತೀವ್ರ ಪ್ರತಿಭಟನೆಯನ್ನು ನಡೆಸುತ್ತದೆ ಎಂದು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಪಕ್ಷದ ಹಿರಿಯ ಮುಖಂಡರುಗಳಾದ ನಂಜಪ್ಪ ಕಾಳೇಗೌಡ, ಲೋಹಿತ್, ಗೋಪಾಲ್ , ಸುರೇಶ್ , ಡಾ. ಕೇಶವ್ , ವೀಣಾ , ಭಾನುಪ್ರಿಯ, ಪುಷ್ಪ ಕೇಶವ್, ಶಶಿಧರ ಆರಾಧ್ಯ , ಅಶೋಕ್ ಮೃತ್ಯುಂಜಯ, ನವೀನ್ ,ಪುಟ್ಟಣ್ಣ, ಮುನೇಶ್ ಸರವಣ , ಶಾಶವಲಿ ಇನ್ನಿತರ ನಾಯಕರು ಭಾಗವಹಿಸಿದ್ದರು.

# ರಂಗ ಪರಿಷೆ ಅರ್ಥಪೂರ್ಣವಾಗಿ ನಡೆಸಿ

**ಬೆಂಗಳೂರು:** ರಂಗ ಪರಿಷೆ ಅರ್ಥಪೂರ್ಣವಾಗಿ ನಡೆಸಿ. ರಂಗಭೂಮಿಯ ಸಮಗ್ರ ಮಾಹಿತಿ ಬೆರಳ ತುದಿಯಲ್ಲಿ ಸಿಗುವಂತಾಗಲಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಲಹೆ ನೀಡಿದರು. ಕರ್ನಾಟಕ ನಾಟಕ ಅಕಾಡೆಮಿಯ ವೆಬ್ ಸೈಟ್ ಲೋಕಾರ್ಪಣೆಗೊಳಿಸಿ ಮಾತನಾಡಿದರು. ಅಕಾಡೆಮಿಗಳು ಸಕ್ರಿಯವಾಗಿ ಕೆಲಸ ಮಾಡಬೇಕು. ಬದುಕು ಪೂರ್ಣ ಆಗಲು ಕಲೆ, ಸಾಂಸ್ಕೃತಿಕ ಚಟುವಟಿಕೆಗಳು ಅಗತ್ಯ. ಈ ದಿಕ್ಕಿನಲ್ಲಿ ಎಲ್ಲಾ ಅಕಾಡೆಮಿಗಳು ಕಾರ್ಯ ನಿರ್ವಹಿಸಬೇಕು ಎಂದರು.

ಏನೇ ಹೊಸ ಪ್ರಯತ್ನ ಮಾಡಿದರೂ ಸರ್ಕಾರ ಬೆಂಬಲವಾಗಿ ನಿಲ್ಲುತ್ತದೆ. ಅಕಾಡೆಮಿಗೆ ಅಗತ್ಯವಾದ ಹಣಕಾಸಿನ ನೆರವನ್ನು ಒದಗಿಸಲು ಸರ್ಕಾರ ಸಿದ್ಧವಿದೆ ಎಂದರು.



# ನ್ಯಾಯಾಂಗ ತನಿಖೆಗೆ ಒತ್ತಾಯ

**ಕಲಬುರಗಿ:** ಗುತ್ತಿಗೆದಾರ ಸಚಿನ್ ಪಾಂಚಾಳ ಆತ್ಮಹತ್ಯೆ ಪ್ರಕರಣದ ತನಿಖೆಯನ್ನು ನ್ಯಾಯಾಂಗ ತನಿಖೆ ಅಥವಾ ಸಿಬಿಐಗೆ ವಹಿಸಬೇಕೆಂದು ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಒತ್ತಾಯಿಸಿದರು.

ನಗರದಲ್ಲಿ ಇಂದು ಬೆಳಗ್ಗೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಂತೋಷ್ ಪಾಟೀಲ್ ಡೆತ್‌ನೋಟ್ ನಲ್ಲಿ ಸಚಿವ ಈಶ್ವರಪ್ಪ ಹೆಸರಿದೆ ಎಂದ ಮೇಲೆ ಅವರು ರಾಜೀನಾಮೆ ನೀಡಬೇಕು. ಇಷ್ಟಕ್ಕೂ ಒಬ್ಬ ಮನುಷ್ಯ ಆತ್ಮಹತ್ಯೆ ಮಾಡಿಕೊಳ್ಳಬೇಕಾದರೆ ಆತ ಎಂತಹ ಹತಾಶ ಸ್ಥಿತಿಗೆ ತಲುಪಿದ್ದ



ಎಂಬುದನ್ನು ಅರ್ಥ ಮಾಡಿಕೊಳ್ಳಬೇಕಾಗುತ್ತದೆ ಎಂದಿದ್ದ ಪ್ರಿಯಾಂಕ್, ಈಗ ಸಚಿನ್ ಆತ್ಮಹತ್ಯೆ ಪ್ರಕರಣದಲ್ಲಿ ತಮ್ಮದೇ ಹೇಳಿಕೆ ನೆನಪಿಸಿಕೊಳ್ಳಲು ಸಿದ್ಧರಿಲ್ಲ ಎಂದು ಅಚ್ಚರಿ ವ್ಯಕ್ತಪಡಿಸಿದರು.

ಈ ಹಿಂದೆ ರಾಜ್ಯದಲ್ಲಿ ಬಿಜೆಪಿ ಸರಕಾರದ ಅವಧಿ ವೇಳೆ ಗುತ್ತಿಗೆದಾರ ಸಂತೋಷ್ ಪಾಟೀಲ್ ಆತ್ಮಹತ್ಯೆ ಮಾಡಿಕೊಂಡಿದ್ದ ಸಂದರ್ಭದಲ್ಲಿ ಅಂದಿನ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಕೆ.ಎಸ್.ಈಶ್ವರಪ್ಪ ಅವರ ವಿರುದ್ಧ ಸಚಿವ ಪ್ರಿಯಾಂಕ್ ಖರ್ಗೆ ಏನು ಹೇಳಿಕೆ ನೀಡಿದ್ದರು ಎಂಬುದನ್ನು ಸ್ವತಃ ನೆನಪಿಸಿಕೊಳ್ಳಲಿ ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಸವಾಲು ಹಾಕಿದರು.

ಸಚಿನ್ ಆತ್ಮಹತ್ಯೆ ಪ್ರಕರಣದ ನ್ಯಾಯ ಸಮ್ಮತ ತನಿಖೆ ನಡೆಯಬೇಕಾದರೆ ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ರಾಜೀನಾಮೆ ಕೊಟ್ಟರೆ ಮಾತ್ರ ನ್ಯಾಯಯುತ ತನಿಖೆ ನಡೆಸಲು ಸಾಧ್ಯವಾಗುತ್ತದೆ ಎಂದು ನುಡಿದರು.

ಬಿಜೆಪಿ ಮುಖಂಡರ ಹತ್ಯೆಗೆ ಸುಪಾರಿ ನೀಡಲಾಗಿದೆ ಎಂದು ಸಚಿನ್ ತಮ್ಮ ಡೆತ್‌ನೋಟ್‌ನಲ್ಲಿ ಬರೆದಿದ್ದಾರೆ. ಹಾಗಾದರೆ, ಬಿಜೆಪಿ ಮುಖಂಡರ ಹತ್ಯೆಗೆ ಸುಪಾರಿ ಕೊಟ್ಟವರು ಯಾರು? ಎಂಬುದರ ಬಗ್ಗೆಯೂ ತನಿಖೆಯಾಗಬೇಕು ಎಂದು ರವಿ ಆಗ್ರಹಿಸಿದರು.

ಇನ್ನು, ಮುತ್ತಿಗೆ ಹಾಕಲು ಬರುವ ಬಿಜೆಪಿ ಮುಖಂಡರಿಗೆ ತಮ್ಮ ಮನೆಯಲ್ಲಿ ಆತಿಥ್ಯ ನೀಡುವುದಾಗಿ ಹೇಳಿದ್ದ ಸಚಿವ ಪ್ರಿಯಾಂಕ್ ಖರ್ಗೆ ಮಾತನ್ನು ಪ್ರಸ್ತಾಪಿಪಿಸಿದ ಸಿ.ಟಿ.ರವಿ, 'ನಾವು ಸಂಬಂಧ ಬೆಳೆಸಲು ಬಂದಿಲ್ಲ ನ್ಯಾಯ ಕೇಳಲು ಬಂದಿದ್ದೇವೆ. ಸಂಬಂಧ ಬೆಳೆಸಲು ಬಂದಾಗ ಅವರ ಮನೆಯಲ್ಲಿ ಟೀ ಕಾಫಿ ಕುಡಿಯುತ್ತೇವೆ.

ಇಂತಹ ಕುಚೋದ್ಯ ಹೇಳಿಕೆಗಳ ಮೂಲಕ ಪ್ರಿಯಾಂಕ್ ಅವರು ಸಚಿನ್ ಸಾವಿಗೆ ಅಪಮಾನ ಮಾಡುತ್ತಾ, ದುರಂತ ಸಾವನ್ನು ಸಂಭ್ರಮಿಸುತ್ತಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು.

# ಡಿಎಂಕೆ ಸಂಸದರ ಮನೆ-ಕಾಲೇಜಿನ ಮೇಲೆ ಇಡಿ ದಾಳಿ

ತಮಿಳುನಾಡು: ಡಿಎಂಕೆ ಸಂಸದ ಕತಿರ್ ಆನಂದ್ ಅವರ ಇಂಜಿನಿಯರಿಂಗ್ ಕಾಲೇಜ್ ಸೇರಿದಂತೆ ಅವರಿಗೆ ಸಂಬಂಧಿಸಿದ ಇತರೆ ಸ್ಥಳಗಳಲ್ಲಿ ಶನಿವಾರ ಕೂಡ ಇಡಿ ಅಧಿಕಾರಿಗಳ ದಾಳಿ ಮುಂದುವರೆದಿದೆ.ಶುಕ್ರವಾರ ಆರಂಭವಾದ ಇಡಿ ದಾಳಿ ಶನಿವಾರ ಕೂಡ ಮುಂದುವರೆದಿದ್ದು, ಕಟಪಾಡಿಯ ಕ್ರಿಶ್ಚಿಯನ್ ಪೇಟೆಯಲ್ಲಿರುವ ಕಿಂಗ್ಸ್‌ನ್ ಇಂಜಿನಿಯರಿಂಗ್ ಕಾಲೇಜಿನಲ್ಲಿ ಇಡಿ ಪರಿಶೀಲನೆಯಲ್ಲಿ 18ಕ್ಕೂ ಹೆಚ್ಚು ಅಧಿಕಾರಿಗಳು ಭಾಗಿಯಾಗಿದ್ದಾರೆ.

ಕತೀರ್ ಆನಂದ್ ಡಿಎಂಕೆ ಪ್ರಧಾನ ಕಾರ್ಯದರ್ಶಿ ಮತ್ತು ಸಚಿವ ನಾಯಕ ದುರೈಮುರುಗನ್ ಅವರ ಪುತ್ರನಾಗಿದ್ದು, ವೆಲ್ಲೂರು ಲೋಕಸಭಾ ಕ್ಷೇತ್ರವನ್ನು ಪ್ರತಿನಿಧಿಸುತ್ತಿದ್ದಾರೆ. ಶುಕ್ರವಾರ ಕಾಲೇಜಿನಲ್ಲಿ ದಾಳಿ ಮತ್ತು ಕಡತಗಳ ಪರಿಶೀಲನೆ ವೇಳೆ ಲಾಕರ್‌ನಲ್ಲಿ ಸಿಕ್ಕಿದ್ದ ಲೆಕ್ಕವಿಲ್ಲದ ಹಣವನ್ನು ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ. ಕಾಲೇಜಿಗೆ ಸಂಬಂಧಿಸಿದ ಪ್ರಮುಖ ದಾಖಲೆಗಳ ಪರಿಶೀಲನೆ ಇಂದು ಕೂಡ ಮುಂದುವರೆದಿದೆ. ಇತ್ತ ಕಟಪಾಡಿಯ ಗಾಂಧಿನಗರದಲ್ಲಿರುವ ನಿವಾಸ ಮೇಲೂ ಇಡಿ ಶೋಧ ಮುಂದುವರೆದಿದ್ದು,

ಶುಕ್ರವಾರ ಮಧ್ಯಾಹ್ನ 2ಗಂಟೆಗೆ ಆರಂಭವಾದ ಪರಿಶೀಲನೆ ಶನಿವಾರ ನಸಕಿನಜಾವ 1.35ರ ವರೆಗೆ ಸತತ 11 ಗಂಟೆಗಳ ಕಾಲ ಸಾಗಿತು.

ಈ ದಾಳಿ ವೇಳೆ ಅಧಿಕಾರಿಗಳು ಕತೀರ್ ಆನಂದ್ ತಂದೆ ಡಿಎಂಕೆ ಪ್ರಧಾನ ಕಾರ್ಯದರ್ಶಿ ಮತ್ತು ತಮಿಳುನಾಡು ಸಚಿವ ಎಸ್. ದುರೈಮುರುಗನ್ ಅವರ ಕೋಣೆಯನ್ನು ತೆರೆಯಲು ಹರಸಾಹಸಪಟ್ಟರು. ಇದು ವೇಳೆ ನೆರೆಹೊರೆಯವರಲ್ಲಿ ಗದ್ದಲ ಉಂಟಾಯಿತು.

ಈ ದಾಳಿಯು ರಾಜಕೀಯ ಆರೋಪ ಮತ್ತು ಪ್ರತ್ಯಾರೋಪಗಳಿಗೂ ಗುರಿಯಾಗಿದೆ. ಇಡಿ ಬಳಕೆ ಮಾಡಿ ರಾಜಕೀಯ ಒತ್ತಡ ಹೇರಲಾಗುತ್ತಿದೆ ಎಂದು ಡಿಎಂಕೆ ನಾಯಕರು ಆರೋಪಿಸಿದ್ದಾರು.

ದಾಳಿಯ ಕುರಿತಾಗಿ ಇಡಿ ಇನ್ನೂ ಅಧಿಕೃತ ಹೇಳಿಕೆ ಮತ್ತು ಸಾಕ್ಷ್ಯಗಳ ವಿವರ ನೀಡಿಲ್ಲ. ಆದಾಗ್ಯೂ ದೀರ್ಘ ಕಾಲದ ಈ ಕಾರ್ಯಾಚರಣೆ ಹಾಗೂ ನಗದು ಮತ್ತು ದಾಖಲಾತಿ ವಶದ ಹಿಂದೆ ಅಕ್ರಮ ಹಣಕಾಸಿನ ಶಂಕೆ ವ್ಯಕ್ತವಾಗಿದೆ.



**ಕಮಲಾನಗರದ ಶಕ್ತಿ ಗಣಪತಿ ನಗರ ವಾರ್ಡ್ನಲ್ಲಿರುವ ಗಂಗಾಧರೇಶ್ವರ ಶಾಲೆಯಲ್ಲಿ ಇಂದು ಕೇಂದ್ರ ಸರ್ಕಾರದ ರಾಷ್ಟ್ರೀಯ ಗ್ರಾಮೀಣ ಸಾಕ್ಷರತಾ ಮಿಷನ್ ಸಹಯೋಗದೊಂದಿಗೆ ಸಮೃದ್ಧಿ ಭಾರತ ಫೌಂಡೇಶನ್ ಆಯೋಜಿಸಿದ್ದ ಶಾಲಾ ಬ್ಯಾಗ್ ವಿತರಣಾ ಕಾರ್ಯಕ್ರಮದಲ್ಲಿ ಮಕ್ಕಳಿಗೆ ಸ್ಥಳೀಯ ಶಾಸಕರಾದ ಕೆ ಗೋಪಾಲಯ್ಯನವರು ಬ್ಯಾಂಕ್ ವಿತರಿಸಿದರು.**

# ಪರಮಾಣು ವಿಜ್ಞಾನಿ ರಾಜ ಗೋಪಾಲ್ ಚಿದಂಬರಂ ವಿಧಿವಶ

**ದೇಶದ** ಹಿರಿಯ ಮಹಾರಾಷ್ಟ್ರ: ದೇಶದ ಹಿರಿಯ ಪರಮಾಣು ವಿಜ್ಞಾನಿ ರಾಜಗೋಪಾಲ್ ಚಿದಂಬರಂ ಅವರು ಕೊನೆಯುಸರೆಳೆದಿದ್ದಾರೆ. ಅವರಿಗೆ 88 ವರ್ಷ ವಯಸ್ಸಾಗಿತ್ತು. ಅವರು 1975 ಮತ್ತು 1998 ರ ಪರಮಾಣು ಪರೀಕ್ಷೆಗಳಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ಅಣುಶಕ್ತಿ ಇಲಾಖೆಯ ಅಧಿಕಾರಿಯೊಬ್ಬರು ಈ ಕುರಿತು ಮಾಹಿತಿ ನೀಡಿದ್ದಾರೆ. ಪರಮಾಣು ಶಸ್ತ್ರಾಸ್ತ್ರಗಳ ಕಾರ್ಯಕ್ರಮದೊಂದಿಗೆ ಸಂಬಂಧ ಹೊಂದಿದ್ದ ಚಿದಂಬರಂ ಅವರು ಮುಂಬೈನ ಜಸ್ಲೋಕ್ ಆಸ್ಪತ್ರೆಯಲ್ಲಿ ಶನಿವಾರ ಮುಂಜಾನೆ 3.20 ಕ್ಕೆ ಕೊನೆಯುಸಿರೆಳೆದರು ಎಂದು ಅಧಿಕಾರಿ ತಿಳಿಸಿದ್ದಾರೆ. ಅವರು ಪರಮಾಣು ಶಕ್ತಿ ಆಯೋಗದ ಅಧ್ಯಕ್ಷರಾಗಿ ಮತ್ತು ಭಾರತ ಸರ್ಕಾರದ ಪ್ರಧಾನ ವೈಜ್ಞಾನಿಕ ಸಲಹೆಗಾರರಾಗಿ ಸೇವೆ ಸಲ್ಲಿಸಿದ್ದರು. ಚಿದಂಬರಂ ಅವರಿಗೆ 1975 ಮತ್ತು 1999 ರಲ್ಲಿ ಪದ್ಮಶ್ರೀ ಮತ್ತು ಪದ್ಮವಿಭೂಷಣ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗಿತ್ತು.

ಅಣುಶಕ್ತಿ ಇಲಾಖೆಯ ಕಾರ್ಯದರ್ಶಿಯಾಗಿ ಕೆಲಸ : ಕಳೆದ ಕೆಲವು ದಿನಗಳಿಂದ ಅವರ ಆರೋಗ್ಯ ಸರಿ ಇರಲಿಲ್ಲ. ವಿಜ್ಞಾನಿಯಾಗಿ ತಮ್ಮ ವೃತ್ತಿ ಜೀವನದಲ್ಲಿ, ಡಾ. ಚಿದಂಬರಂ ಅವರು ಬಾಬಾ ಪರಮಾಣು ಸಂಶೋಧನಾ ಕೇಂದ್ರದ (ಃಂಖಅ) ನಿರ್ದೇಶಕರಾಗಿ, ಪರಮಾಣು ಶಕ್ತಿ ಆಯೋಗದ (ಂಇಅ) ಅಧ್ಯಕ್ಷರಾಗಿ ಮತ್ತು ಪರಮಾಣು ಶಕ್ತಿ ಇಲಾಖೆ (ಆಂಇ) ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿದರು. ಅವರು 1994–95ರ ಅವಧಿಯಲ್ಲಿ ಇಂಟರ್ನ್ಯಾಷನಲ್ ಅಟಾಮಿಕ್ ಎನರ್ಜಿ ಏಜೆನ್ಸಿಯ (ಐಂಇಂ) ಆಡಳಿತ ಮಂಡಳಿಯ ಅಧ್ಯಕ್ಷರಾಗಿದ್ದರು.ಡಾ. ಚಿದಂಬರಂ ಅವರು ಭಾರತ ಸರ್ಕಾರದ ಪ್ರಧಾನ ವೈಜ್ಞಾನಿಕ ಸಲಹೆಗಾರರೂ ಆಗಿದ್ದರು. ಅವರು ಭಾರತದ ಪರಮಾಣು ಶಸ್ತ್ರಾಸ್ತ್ರಗಳ ಕಾರ್ಯಕ್ರಮದಲ್ಲಿ ಪ್ರಮುಖ ಪಾತ್ರ ವಹಿಸಿದರು. ಪೋಖ್ರಾನ್–ಐ (1975) ಮತ್ತು ಪೋಖ್ರಾನ್–ಐಐ (1998) ಗಾಗಿ ಪರೀಕ್ಷಾ ಸಿದ್ಧತೆಗಳನ್ನು ನಡೆಸಿದರು.

ಪದ್ಮಶ್ರೀ ಸೇರಿದಂತೆ ಹಲವು ಪ್ರಶಸ್ತಿಗಳು : ಪರಮಾಣು ಶಕ್ತಿಯ ಶಾಂತಿಯುತ ಬಳಕೆಯ ಸಮರ್ಥಕಾರದ ಅವರು ಭಾರತದ ಪರಮಾಣು ಶಕ್ತಿ ಕಾರ್ಯಕ್ರಮವನ್ನು ಮುನ್ನಡೆಸಿದರು.

ಡಾ. ಚಿದಂಬರಂ ಅವರು ಪದ್ಮಶ್ರೀ (1975) ಮತ್ತು ಪದ್ಮವಿಭೂಷಣ (1999) ಸೇರಿದಂತೆ ಹಲವು ಪ್ರಶಸ್ತಿಗಳನ್ನು ಮುಡಿಗೇರಿಸಿಕೊಂಡಿದ್ದರು.

## ಮೊದಲ ಪುಟದಿಂದ

# ಪರಿಹಾರಕ್ಕೆ ಆಗ್ರಹ

ಸರಕಾರಕ್ಕೆ ಬಿಸಿ ಮುಟ್ಟಿಸುವ ಕೆಲಸ ಮಾಡಲಿದ್ದೇವೆ ಎಂದು ಅವರು ಪ್ರಕಟಿಸಿದರು. ಆ ಕುಟುಂಬಗಳಿಗೆ ನ್ಯಾಯ ದೊರಕಿಸಿಕೊಡುವ ಕೆಲಸವನ್ನು ಬಿಜೆಪಿ ಮಾಡಲಿದೆ ಎಂದು ಅವರು ತಿಳಿಸಿದರು.ಭ್ರಷ್ಟ– ಲಜ್ಜೆಗೆಟ್ಟ ಸರಕಾರದ ವಿರುದ್ಧ ಹೋರಾಡುವ ಕರ್ತವ್ಯವನ್ನು ಬಿಜೆಪಿ ಮಾಡುತ್ತಿದೆ. ರಾಜ್ಯ ಸರಕಾರವು

ಈಗಲಾದರೂ ಎಚ್ಚತ್ತುಕೊಂಡು ನಮ್ಮ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಅವರು ಒತ್ತಾಯವನ್ನು ಮುಂದಿಟ್ಟರು.

ಈ ಸಂದರ್ಭದಲ್ಲಿ ಶಾಸಕ ಚನ್ನಬಸಪ್ಪ, ವಿಧಾನ ಪರಿಷತ್ ಸದಸ್ಯ ಧನಂಜಯ ಸರ್ಜಿ, ವಿವಿಧ ಪ್ರಕೋಷ್ಠಕಗಳ ರಾಜ್ಯ ಸಂಚಾಲಕ ದತ್ತಾತ್ರಿ, ಜಿಲ್ಲಾಧ್ಯಕ್ಷ ಟಿ.ಡಿ ಮೇಘರಾಜ್, ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷರಾದ ಶ್ರೀಮತಿ ಗಾಯತ್ರಿ ದೇವಿ, ವೈದ್ಯಕೀಯ ಪ್ರಕೋಷ್ಠದ ಸಂಚಾಲಕರಾದ ಹೇಮತ್ ಸೇರಿದಂತೆ ಮಹಿಳಾ ಮೋರ್ಚಾ ಪದಾಧಿಕಾರಿಗಳು, ಪಕ್ಷದ ಪ್ರಮುಖರು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

# ರಾಜೀನಾಮೆಗೆ ಹೋರಾಟ

ಜಗತ್ ಸರ್ಕಲ್ ಹಾಗೂ ಸಚಿವ ಪ್ರಿಯಾಂಕ್‌ಖರ್ಗೆ ಅವರ ನಿವಾಸಕ್ಕೆ ಬಿಗಿ ಭದ್ರತೆಯನ್ನು ಒದಗಿಸಲಾಗಿತ್ತು. ವಿಜಯೇಂದ್ರ ಗೈರು, ಶಿವಮೊಗ್ಗ ಪ್ರತಿಭಟನೆಯಲ್ಲಿ ಭಾಗಿ

ಇಂದಿನ ಪ್ರತಿಭಟನೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಅವರು ಭಾಗಿಯಾಗಬೇಕಿತ್ತಾದರೂ ಶಿವಮೊಗ್ಗದಲ್ಲಿ ಬಾಣಂತಿಯರ ಸಾವಿನ ವಿರುದ್ಧ ಬಿಜೆಪಿ ಮಹಿಳಾ ಮೋರ್ಚಾ ಆಯೋಜಿಸಿದ್ದ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರಿಂದ ಕಲಬುರಗಿಯ ಪ್ರತಿಭಟನೆಯಲ್ಲಿ ಅವರು ಭಾಗಿಯಾಗಲಿಲ್ಲ. ಅವರ ಅನುಪಸ್ಥಿತಿಯಲ್ಲೇ ಬಿಜೆಪಿ ಪ್ರತಿಭಟನೆ ನಡೆಯಿತು.

**ಕಾಂಗ್ರೆಸ್ ಗಾಂಧಿಗಿರಿ:** ಸಚಿವ ಪ್ರಿಯಾಂಕ್‌ಖರ್ಗೆ ಅವರ ನಿವಾಸಕ್ಕೆ ಮುತ್ತಿಗೆ ಹಾಕಲು ಬರುವ ಬಿಜೆಪಿ ನಾಯಕರಿಗೆ ಕಾಂಗ್ರೆಸ್ ಖಡಕ್ ಠಕ್ಕರ್ ನೀಡಿದ್ದು, ಖರ್ಗೆ ಅವರ ನಿವಾಸದ ಬಳಿ ಬಿಜೆಪಿ ನಾಯಕರಿಗೆ ಕಾಂಗ್ರೆಸ್ ಮುಖಂಡರು ಎಳನೀರು, ಚಹಾ ಸೇರಿದಂತೆ ಇತರ ಪಾನೀಯಗಳ ವ್ಯವಸ್ಥೆ ಮಾಡಿ ಆತಿಥ್ಯ ನೀಡುವ ಮೂಲಕ ತಿರುಗೇಟು ನೀಡಿದ್ದಾರೆ.

ಕಾಂಗ್ರೆಸ್ ಯುವ ಮುಖಂಡರಾದ ಪ್ರವೀಣ ಹರವಾಳ್, ರಾಜು ಜಾನೆ, ಸಚಿನ್ ಶಿರವಾಳ, ಬ್ಲಾಕ್ ಅಧ್ಯಕ್ಷ ಶಿವು ಹೊನಗುಂಟಿ ಇನ್ನಿತರರ ನೇತೃತ್ವದಲ್ಲಿ ಪ್ರಿಯಾಂಕ್ ನಿವಾಸದ ಎದುರು ಬಿಜೆಪಿ ಮುಖಂಡರಿಗಾಗಿ ಎಳನೀರು, ಚಹಾ ಸೇರಿದಂತೆ ಇತರ ಪಾನೀಯಗಳನ್ನು ಇಟ್ಟು ಆತಿಥ್ಯ ನೀಡುವ ವ್ಯವಸ್ಥೆ ಮಾಡಿಕೊಳ್ಳಲಾಗಿತ್ತು.

ಒಂದುವೇಳೆ, ಬಿಜೆಪಿ ಮುಖಂಡರು ತಮ್ಮ ನಿವಾಸಕ್ಕೆ ಮುತ್ತಿಗೆ ಹಾಕಲು ಯತ್ನಿಸುವುದಕ್ಕೂ ಮೊದಲು ಎಷ್ಟು ಮಂದಿ ಬರುತ್ತಿರುವುದಾಗಿ ಮೊದಲೇ ಹೇಳಿದರೆ ಅವರಿಗೆ ಚಹಾ–ಬಿಸ್ಕಿಟ್ ವ್ಯವಸ್ಥೆ ಮಾಡಿಸುವುದಾಗಿ ಸಚಿವ ಪ್ರಿಯಾಂಕ್ ಖರ್ಗೆ ಬಿಜೆಪಿ ಮುಖಂಡರಿಗೆ ಟಾಂಗ್ ನೀಡಿರುವ ಹಿನ್ನೆಲೆಯಲ್ಲಿ ಕಾಂಗ್ರೆಸ್ ಯುವ ಮುಖಂಡರು ಇಂಥದ್ದೊಂದು 'ಆತಿಥ್ಯ ಸೇವೆ' ಮೂಲಕ ಬಿಜೆಪಿ ಮುಖಂಡರಿಗೆ ಪ್ರತ್ಯುತ್ತರ ನೀಡಿದರು.

**ಸಿಬಿಐ ತನಿಖೆಗೆ ಅಶೋಕ್ ಆಗ್ರಹ:** ಗುತ್ತಿಗೆದಾರ ಸಚಿವ ಪಾಂಚಾಳ್ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಬೇಕು. ರಾಜ್ಯ ಸರ್ಕಾರದ ಮೇಲೆ ನಮಗೆ ನಂಬಿಕೆ ಇಲ್ಲ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ಹೇಳಿದರು.

ಸಚಿನ್ ಪಾಂಚಾಳ್ ಸಹೋದರಿ ಈಗಾಗಲೇ ಕೇಂದ್ರ ಸರ್ಕಾರಕ್ಕೂ ಪತ್ರ ರೆದಿದ್ದಾರೆ. ಈ ಪ್ರಕರಣದಲ್ಲಿ ಸಚಿವ ಪ್ರಿಯಾಂಕ್‌ಖರ್ಗೆ ಅವರದ್ದು ಹೊಣೆಗಾರಿಕೆ ಇದೆ. ಹಾಗಾಗಿ, ಅವರು ರಾಜೀನಾಮೆ ನೀಡಲೇಬೇಕು. ಅವರು ರಾಜೀನಾಮೆ

ನೀಡುವವರೆಗೂ ನಮ್ಮ ಹೋರಾಟ ನಿಲ್ಲದು ಎಂದರು.

# ಸಿದ್ದರಾಮಯ್ಯ ಹೆಸರಿಡಿ

ಸಿದ್ದರಾಮಯ್ಯ ಸಹಿ ಹಾಕಿದ್ರು. ಇನ್ನೊಬ್ಬ ಮಹಾನ್ ವ್ಯಕ್ತಿ ಬಗ್ಗೆ ನಾನು ಹೇಳಲ್ಲ. ದೇಶದಲ್ಲಿ ಮನಮೋಹನ್ ಸಿಂಗ್ ಬಳಿಕ ಸಿದ್ದರಾಮಯ್ಯ ದೊಡ್ಡ ಆರ್ಥಿಕ ತಜ್ಞರು ಅವರೇ ಅಲ್ಲವೇ ಸಹಿ ಹಾಕಿರೋದು. ಮಂತ್ರಿಗಳ ಅಭಿವೃದ್ಧಿ ಆಗುತ್ತಿದೆ. ಜನಗಳ ಅಭಿವೃದ್ಧಿ ಯಾರಿಗೆ ಬೇಕು. ಎಲ್ಲದಕ್ಕೂ ಕೂಡ ಪರ್ಸಂಟೇಜ್ ಕೇಳುತ್ತಾರೆ. ಆಶ್ರಯ ಮನೆಗಳಿಗೂ ವಿಧಾನಸಭೆಯಲ್ಲಿ ವಸೂಲಿ ಶುರು ಆಗಿದೆಯಂತೆ ಎಂದು ಆರೋಪಿಸಿದರು.

ಅಪರೇಷನ್ ಹಸ್ತದ ವಿಚಾರ ಕುರಿತು ಪ್ರತಿಕ್ರಿಯಿಸಿದ ಹೆಚ್.ಡಿ ಕುಮಾರಸ್ವಾಮಿ, ಅದು ನಡೀತಾನೆ ಇದೆ. ನಮ್ಮಲ್ಲಿ 18 ಜನ ಶಾಸಕರಿದ್ದಾರೆ. ಒಟ್ಟಗಿದ್ದಾರೆ ಅದನ್ನೇ ಹರೀಶ್ ಗೌಡ ಹೇಳಿರೋದು. ಒತ್ತಡ ಅಂತೂ ಇರತ್ತೆ ಅದನ್ನೇ ಬೆಳಗಾವಿಯಲ್ಲಿ ಶಾಸಕರು ಕೂತು ಮಾತನಾಡಿದ್ದಾರೆ ಅಷ್ಟೇ. ನಮ್ಮ ಶಾಸಕರು ನಮ್ಮ ಜೊತೆ ಇರುತ್ತಾರೆ ಎಂದರು.

2006–2007 ರಲ್ಲಿ ನಾನು ಮೈಸೂರಿಗೆ ಸಾಕಷ್ಟು ಅನುದಾನ ಕೊಟ್ಟಿದ್ದೇನೆ. ನಾನು ಬಂಬು ಬಜಾರ್ ಅಲ್ಲಿ ಎಷ್ಟು ಮನೆ ಕಟ್ಟಿದ್ದೇನೆ. ರಾಜ ಕಾಲುವೆ ಕೆಲಸ ಮಾಡಿದ್ದೇನೆ. ಅದೆಲ್ಲ ನಾನು ಮಾಡಿದ್ದು ಅಂತ ನನ್ನ ಹೆಸರಿಡಿ ಅಂತ ಹೇಳಿದ್ದೀನಾ. ನಾನು ಜನರ ಹೃದಯದಲ್ಲಿರಬೇಕು ಅಷ್ಟೆ ಎಂದು ಹೆಚ್. ಡಿಕೆ ಹೇಳಿದರು.

ಮನೆ ಎಂದ ಮೇಲೆ ಮುನಿಸು ಇರೋದಿಲ್ಲವೇ?

ಶಾಸಕ ಜಿ.ಟಿ.ದೇವೇಗೌಡರ ನಡುವಿನ ಮುನಿಸು ವಿಚಾರ ಕುರಿತು ಪ್ರತಿಕ್ರಿಯಿಸಿದ ಹೆಚ್.ಡಿಕೆ, ಮನೆ ಎಂದ ಮೇಲೆ ಮುನಿಸು ಇರೋದಿಲ್ಲವೇ? ಗಂಡ– ಹೆಂಡತಿ ಜಗಳ ಉಂಡು ಮಲಗುವ ತನಕ. ನಮ್ಮಲ್ಲಿ ಇರುವ ಭಿನ್ನಾಭಿಪ್ರಾಯ ದೂರ ಆಗುತ್ತವೆ. ಎಲ್ಲವೂ ಕೂಡ ಸರಿ ಹೋಗುತ್ತದೆ. ಸಂಜೆಯ ಜೆಡಿಎಸ್ ಸಭೆಗೆ ಜಿಟಿದೇವೇಗೌಡರು ಬರುತ್ತಾರೆ ಎಂದರು.

# ಮನೆಗೆ ಬಂದ್ರೆ ಸ್ವಾಗತ

ನಾಯಕರಿಗೆ ಸಂಭ್ರಮ. ಏನೇದರೂ ನಾವು ನ್ಯಾಯ ಕೊಡುತ್ತೇವೆ ಎಂದು ಪ್ರಿಯಾಂಕ್ ಖರ್ಗೆ ತಿಳಿಸಿದರು.

ಗುತ್ತಿಗೆದಾರ ಸಚಿನ್ ಪಾಂಚಾಳ್ ಆತ್ಮಹತ್ಯೆ ಪ್ರಕರಣ ಸಂಬಂಧ ಬಿಜೆಪಿ ನಡೆಸಿರುವ ಹೋರಾಟಕ್ಕೆ ಕಿಡಿಕಾರಿರುವ ಗ್ರಾಮೀಣಾಭಿವೃದ್ಧಿ, ಪಂಚಾಯತ್‌ರಾಜ್ ಹಾಗೂ ಐಟಿ–ಬಿಟಿ ಸಚಿವ ಪ್ರಿಯಾಂಕ್ ಖರ್ಗೆಯವರು ನಾವು ಬೀದಿಗಿಳಿದರೆ ಬಿಜೆಪಿಯವರು ಮನೆ ಸೇರಬೇಕಾಗುತ್ತದೆ ಎಂದು ಗುಡುಗಿದ್ದಾರೆ.

, ಈ ಪ್ರಕರಣವನ್ನು ಸಿಬಿಐ ತನಿಖೆಗೆ ಕೊಡಬೇಕು ಎಂದು ಬಿಜೆಪಿಯವರು ಹೇಳಿದಾಗಲೆಲ್ಲಾ ಕೇಳಲು ಆಗಲ್ಲ. ಗಂಗಾಕಲ್ಯಾಣ, ಪಿಎಸ್‌ಐ ಹಗರಣಗಳನ್ನು ಬಿಜೆಪಿಯವರು ಸಿಬಿಐ ತನಿಖೆಗೆ ಕೊಟ್ಟಿದ್ದರಾ, ಇವರ ಅವಧಿಯಲ್ಲಿ ಎಷ್ಟು ಪ್ರಕರಣ ಸಿಬಿಐ ತನಿಖೆಗೆ ಒಪ್ಪಿಸಿದ್ದರು ಎಂದು ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು.

ವಿರೋಧ ಪಕ್ಷದಲ್ಲಿ ಇರುವವರು ಜವಾಬ್ದಾರಿಯುತವಾಗಿ ನಡೆದುಕೊಳ್ಳಬೇಕು. ಪ್ರತಿಭಟನೆಗೆ ಬನ್ನಿ ಸಚಿನ್ ಪಾಂಚಾಳ್ ಕುಟುಂಬದವರ ಮೇಲೆ ಒತ್ತಡ ಹಾಕುತ್ತಿದ್ದಾರೆ. ಪದೇ ಪದೇ ಕರೆ ಮಾಡಿ ಸರ್ಕಾರದ ವಿರುದ್ಧ ಹೇಳಿಕೆ ಕೊಡುವಂತೆಯೂ ಒತ್ತಾಯಿಸುತ್ತಿದ್ದಾರೆ ಎಂದು ಅವರು ದೂರಿದರು.

ಸಚಿನ್ ಪಾಂಚಾಳ್ ಪ್ರಕರಣದಲ್ಲಿ ಬಿಜೆಪಿ ರಾಜಕೀಯ ಬೆರೆಸುತ್ತಿದೆ. ಇದು ತಪ್ಪು. ಹೆಣ ಬಿದ್ದರೆ ಸಾಕು, ಬಿಜೆಪಿಯವರಿಗೆ ಸಂಭ್ರಮ ಎಂದು ಕಿಡಿಕಾರಿದ ಅವರು, ಏನೇ ಇರಲಿ ಸಚಿನ್ ಕುಟುಂಬಕ್ಕೆ ನ್ಯಾಯ ಕೊಡಿಸುವ ಜವಾಬ್ದಾರಿ ನಮ್ಮದು ಎಂದರು.

ಗುತ್ತಿಗೆದಾರ ಸಚಿನ್ ಕುಟುಂಬದವರ ಜತೆ ನಾನು ಮಾತನಾಡಿದ್ದೇನೆ. ಬಿಜೆಪಿಯವರು ಹೇಳಿದಂತೆ ನಾವು ಕುಣಿಯಲು ಆಗಲ್ಲ. ಸಚಿನ್ ಕುಟುಂಬದವರಿಗೆ ನಾನು ಭರವಸೆ ನೀಡಿದ್ದೇನೆ, ಪಾರದರ್ಶಕವಾಗಿ ತನಿಖೆ ಮಾಡಿಸುವುದು ಸರ್ಕಾರದ ಜವಾಬ್ದಾರಿ. ಈಗಾಗಲೇ ಸಿಬಿಐ ತನಿಖೆ ನಡೆದಿದೆ ಎಂದು ಅವರು ಹೇಳಿದರು.

ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಅವರದ್ದು ಅತಿಯಾಗುತ್ತಿದೆ ಎಂದು ಅವರು ಹರಿಹಾಯ್ದು, ರಾಜಕೀಯ ಬೆರೆಸದೆ ಸಚಿನ್ ಕುಟುಂಬಕ್ಕೆ ನ್ಯಾಯ ಕೊಡಿಸುವುದು ನಮ್ಮ ಜವಾಬ್ದಾರಿ ಎಂದು ಪುನರುಚ್ಚರಿಸಿದರು.

# 6 ಮಂದಿ ಸಾವು

ದು ಕೊಠಡಿ ಧ್ವಂಸವಾಗಿದೆ. ಬೆಂಕಿ ಹೊತ್ತಿಕೊಂಡ ಕಾರಣ ಕಾರ್ಮಿಕರು ಸಾವಿಗೀಡಾಗಿದ್ದಾರೆ ಎಂದು ಪ್ರಾಥಮಿಕ ಮಾಹಿತಿ ಸಿಕ್ಕಿದೆ.

ಗಾಯಾಳುಗಳನ್ನು ಆಸ್ಪತ್ರೆಗೆ ಕರೆದೊಯ್ಯ ಲಾಯಿತು. ಪೊಲೀಸರು ಸ್ಥಳಕ್ಕೆ ಧಾವಿಸಿ ರಕ್ಷಣಾ ಕಾರ್ಯಾಚರಣೆ ಆರಂಭಿಸಿದ್ದಾರೆ. ಪಟಾಕಿ ಸಿಡಿತದ ರಭಸಕ್ಕೆ ಕಾರ್ಮಿಕರು ಕೆಲ ಮೀಟರ್ ದೂರಕ್ಕೆ ಎಸೆಯಲ್ಪಟ್ಟರು. ಇದಲ್ಲದೆ, ಸ್ಫೋಟದಿಂದ ನಾಲ್ಕು ಕಟ್ಟಡಗಳು ನಾಶವಾದವು.

ಅವಶೇಷಗಳಡಿ ಸಿಲುಕಿರುವ ಯಾರನ್ನಾದರೂ ರಕ್ಷಿಸಲು ಪೊಲೀಸರು ಮತ್ತು ಅಗ್ನಿಶಾಮಕ ಸಿಬ್ಬಂದಿ ರಕ್ಷಣಾ ಕ್ರಮಗಳನ್ನು ಕೈಗೊಂಡಿದ್ದಾರೆ. ಪಟಾಕಿ ಕಾರ್ಖಾನೆಯ ಕಚ್ಚಾ ವಸ್ತುಗಳ ಸಂಗ್ರಹ ಕೊಠಡಿಯಲ್ಲಿ ಸ್ಫೋಟ ಸಂಭವಿಸಿದ್ದು, ರಕ್ಷಣಾ ಕಾರ್ಯಾಚರಣೆ ಪೂರ್ಣಗೊಂಡ ನಂತರ ಅಪಘಾತಕ್ಕೆ ಕಾರಣ ತಿಳಿಯಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕಳೆದ ವರ್ಷ ಅಕ್ಟೋಬರ್‌ನಲ್ಲಿಯೂ ತಿರುವುರು ಜಿಲ್ಲೆಯಲ್ಲಿ ಪಟಾಕಿ ಗೋದಾಮಿನಲ್ಲಿ ಸ್ಫೋಟ ಸಂಭವಿಸಿತ್ತು. ಈ ಘಟನೆಯಲ್ಲಿ ಮೂವರು ಸಾವನ್ನಪ್ಪಿದ್ದಾರೆ. ಅವರಲ್ಲಿ 9 ತಿಂಗಳ ಮಗುವೂ ಸೇರಿದೆ.

ಇತರ ನಾಲ್ವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಸ್ಫೋಟದಿಂದಾಗಿ 10ಕ್ಕೂ ಹೆಚ್ಚು ಮನೆಗಳು ಹಾನಿಗೊಳಗಾಗಿದ್ದವು.

# ಅಸ್ಸಾದಿ ನಿಧನ

ಪ್ರೊ.ಅಸ್ಸಾದಿ ಕೇವಲ ಒಬ್ಬ ಪ್ರಾಧ್ಯಾಪಕ ಆಗಿರಲಿಲ್ಲ. ನಾಡಿನ ಜನಪರ ಹೋರಾಟವನ್ನು ವೈಚಾರಿಕ ಚಿಂತನೆಯ ಮಾರ್ಗದರ್ಶನದೊಂದಿಗೆ ಮುನ್ನಡೆಸಿದವರು. ಅವರ ಅಗಲಿಕೆಯಿಂದ ನಾಡು ಬಡವಾಗಿದೆ, ಅವರ ಅಗಲಿಕೆಯಿಂದ ಸೃಷ್ಟಿಯಾಗಿರುವ ನಿರ್ವಾತವನ್ನು ತುಂಬುವುದು ಕಷ್ಟ.

ನಿರಂತರವಾದ ಅಧ್ಯಯನ ಮತ್ತು ಸಂಶೋಧನೆಗಳಿಂದಾಗಿ ಕರ್ನಾಟಕದಲ್ಲಿ ಮಾತ್ರವಲ್ಲ ದೇಶ–ವಿದೇಶಗಳಲ್ಲಿಯೂ ತಮ್ಮ ವಿದ್ವತ್‌ಪೂರ್ಣ ಬರವಣಿಗೆ ಮತ್ತು ಉಪನ್ಯಾಸಗಳ ಮೂಲಕ ಜನಪ್ರಿಯರಾಗಿದ್ದ ಪ್ರೊ.ಅಸ್ಸಾದಿ ಅವರು ಕನ್ನಡದ ಹೆಮ್ಮೆಯ ಪುತ್ರ. ವರ್ಷಗಳಿಂದ ನನ್ನ ಹಿತೈಷಿಯಾಗಿ ರಾಜಕೀಯವಾಗಿ ಸದಾ ನನ್ನ ಏಳಿಗೆಯನ್ನು ಹಾರೈಸುತ್ತಿದ್ದ ಪ್ರೊ.ಅಸ್ಸಾದಿ ಅವರ ಸಾವು ವೈಯಕ್ತಿಕವಾಗಿಯೂ ನನ್ನ ಪಾಲಿಗೆ ದೊಡ್ಡ ನಷ್ಟ. ಪ್ರೊ.ಅಸ್ಸಾದಿ ಅವರನ್ನು ಕಳೆದುಕೊಂಡ ಅವರ ಕುಟುಂಬ ಮತ್ತು ಅಪಾರ ಅಭಿಮಾನಿಗಳ ದು:ಖದಲ್ಲಿ ನಾನೂ ಭಾಗಿಯಾಗಿದ್ದೇನೆ ಎಂದಿದ್ದಾರೆ.

ಮೈಸೂರು ವಿವಿ ವಿಶ್ರಾಂತ ಕುಲಪತಿ ಪ್ರೊ.ಕೆ.ಎಸ್ ರಂಗಪ್ಪ ಅವರು ಕೂಡ ಮುಜಾಫರ್ ಅಸ್ಸಾದಿ ನಿಧನಕ್ಕೆ ಸಂತಾಪ ಸೂಚಿಸಿದ್ದಾರೆ.

ಮಾಧ್ಯಮ ಪ್ರಕಟಣೆ ಮೂಲಕ ಅಸ್ಸಾದಿ ಅವರ ನಿಧನಕ್ಕೆ ಕಂಬನಿ ಮಿಡಿದಿರುವ ಕೆಪಿಸಿಸಿ ವಕ್ತಾರ ಹೆಚ್.ಎ ವೆಂಕಟೇಶ್, ಪ್ರೊ. ಮುಜಾಫರ್ ಅಸಾದಿ ಅವರು ಮೈಸೂರು ವಿಶ್ವವಿದ್ಯಾನಿಲಯದ ರಾಜ್ಯಶಾಸ್ತ್ರ ವಿಭಾಗದ ಪ್ರಾಧ್ಯಾಪಕರಾಗಿ, ವಿಭಾಗದ ಮುಖ್ಯಸ್ಥರಾಗಿ, ನಾಡಿನ ಚಿಂತಕರಾಗಿ, ಅತ್ಯುತ್ತಮ ಸಂಶೋಧಕರಾಗಿ, ಮೈಸೂರು ವಿಶ್ವವಿದ್ಯಾನಿಲಯದ ನಿಲಯದ ಅಂಗಾಮಿ ಕುಲಪತಿಗಳಾಗಿ ಸೇವೆ ಸಲ್ಲಿಸಿದ್ದಾರೆ . ವಿದ್ಯಾರ್ಥಿಗಳಿಗೆ ಅತ್ಯುತ್ತಮ ಮಾರ್ಗದರ್ಶನ ರ ನೀಡಿ ಅನುಕರಣೆಯ ವ್ಯಕ್ತಿತ್ವ ಉಳ್ಳವರಾಗಿದ್ದರು.

ಪ್ರಸ್ತುತ ಪ್ರಸ್ತುತ ರಾಜಕಾರಣವನ್ನು ವಿಮರ್ಶಿಸಿ ಬರಹದ ಮೂಲಕ ಚಿರಪರಿಚಿತರಾಗಿದ್ದರು. ರಾಜಕೀಯ ಮತ್ತು ಸಾಮಾಜಿಕವಾಗಿ ತಮ್ಮ ಭಾಷಣದ ಮೂಲಕ ಹೊಸ ಆಲೋಚನೆ ಮೂಡಿಸುತ್ತಿದ್ದರು.

ಶ್ರೀಯುತರ ನಿಧನವು ಶಿಕ್ಷಣ ಕ್ಷೇತ್ರಕ್ಕೆ ತುಂಬಲಾರದ ನಷ್ಟವಾಗುವುದರ ಜೊತೆಗೆ ಪ್ರಗತಿಪರ ಆಲೋಚನೆ ಉಳ್ಳ ವ್ಯಕ್ತಿ ಒಬ್ಬರನ್ನು ಕಳೆದುಕೊಂಡಂತಾಗಿದೆ ಎಂದಿದ್ದಾರೆ.


# ವರ್ಷಾಂತ್ಯದಲ್ಲಿ ಪರಿಸರದ ವನ್ಯಜೀವಿ ಲೋಕದಲ್ಲಿ ಸವಾರಿ ಮಾಡಿದ ಪ್ರವಾಸಿಗರು

**ನಾ.ಅಶ್ವಥ್ ಕುಮಾರ್**

**ಚಾಮರಾಜನಗರ:** ಕರ್ನಾಟಕ ತಮಿಳುನಾಡು ಮತ್ತು ಕೇರಳ ರಾಜ್ಯಗಳ ಗಡಿ ಜಿಲ್ಲೆಯಲ್ಲಿ ವರ್ಷಾಂತ್ಯದಲ್ಲಿ ವನ್ಯಜೀವಿ ಲೋಕದಲ್ಲಿ ಸಂಚರಿಸಿದ ಪರಿಸರ ಪ್ರೇಮಿಗಳ ವಿಹಾರ ಜೋರಾಗಿತ್ತು.

ಕರ್ನಾಟಕ – ಕೇರಳ–ತಮಿಳುನಾಡು ಗಡಿಯಲ್ಲಿರುವ ಚಾಮರಾಜನಗರ ಭಾಗಶಃ ಅರಣ್ಯ ಪ್ರದೇಶದಿಂದ ಕೂಡಿದೆ. ಚಾಮರಾಜನಗರ ಜಿಲ್ಲೆಯ ಬಂಡೀಪುರ ಮತ್ತು ಬಿಳಿಗಿರಿರಂಗನಾಥ ಹುಲಿ ಸಂರಕ್ಷಿತಾರಣ್ಯ ಪ್ರದೇಶ, ಮಲೆ ಮಹದೇಶ್ವರ ಹಾಗೂ ಕಾವೇರಿ ವನ್ಯಜೀವಿಧಾಮಗಳ ನೆಲೆಯಾಗಿದೆ. ಇಲ್ಲಿಗೆ ಬರುವ ಪ್ರವಾಸಿಗರು ಕಾಡು ಮತ್ತು ವನ್ಯಪ್ರಾಣಿಗಳನ್ನು ನೋಡಲು ಅರಣ್ಯ ಇಲಾಖೆ ಇಂತಿಷ್ಟು ಶುಲ್ಕಗಳೊಂದಿಗೆ ಸಾರಿ ಸೌಲಭ್ಯ ಒದಗಿಸುತ್ತಿದೆ.

2024ರ ವರ್ಷಾಂತ್ಯದಲ್ಲಿ ಸಾಲು ಸಾಲು ರಜೆಗಳಿದ್ದ ಹಿನ್ನೆಲೆಯಲ್ಲಿ ಜಿಲ್ಲೆಯ ಅರಣ್ಯ ಪ್ರದೇಶಗಳಿಗೆ ಪ್ರವಾಸಿಗರ ದಂಡು ಹರಿದು ಬಂದಿತ್ತು.



> ವರ್ಷಾಂತ್ಯದ ಕೊನೆಯ ವಾರದಲ್ಲಿ ರಜೆಗಳಿದ್ದ ಕಾರಣ ಬಂಡೀಪುರಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರು ಆಗಮಿಸಿದ್ದರು. ಇದಕ್ಕೆ ಬೇಕಾದ ಸಿದ್ಧತೆಗಳನ್ನು ನಾವೂ ಸಹ ಮಾಡಿಕೊಂಡಿದ್ದೆವು. ಸಾರಿ ಒಂದರಲ್ಲೇ ಪ್ರತಿದಿನ 6ರಿಂದ 10 ಲಕ್ಷ ರೂ. ಆದಾಯ ಬಂದಿತು.
>
> **ಎನ್.ಪಿ.ನವೀನ್‌ಕುಮಾರ್ । ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಬಂಡೀಪುರ**

ಇದರಿಂದ ಅರಣ್ಯ ಇಲಾಖೆಗೂ ಉತ್ತಮ ಆದಾಯ ದೊರಕಿದೆ. ದೇಶದಲ್ಲಿರುವ ಪ್ರಸಿದ್ಧ ಹುಲಿ ಸಂರಕ್ಷಿತಾರಣ್ಯ ಪ್ರದೇಶಗಳಲ್ಲಿ ಚಾಮರಾಜನಗರ ಜಿಲ್ಲೆಯ ಬಂಡೀಪುರವೂ ಒಂದು.

ಕರ್ನಾಟಕ ಕೇರಳ ಮತ್ತು ತಮಿಳುನಾಡಿನ ಗಡಿಯಲ್ಲಿರುವ ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಬಂಡೀಪುರ ವನ್ಯಜೀವಿ ಪ್ರೇಮಿಗಳ ಪಾಲಿಗೆ ಕುತೂಹಲ, ಆಸಕ್ತಿದಾಯಕ ಪ್ರದೇಶ. ಇಲ್ಲಿಗೆ ವರ್ಷಾಂತ್ಯದಲ್ಲಿ ಪ್ರವಾಸಿಗರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಸಾರಿಗೆ ಹೋಗಿದ್ದರು. ಅರಣ್ಯ ಇಲಾಖೆ ನೀಡಿರುವ ಮಾಹಿತಿ ಪ್ರಕಾರ, ಡಿ.29ರಲ್ಲಿ 10,03800 ರೂ., ಡಿ.30ರಲ್ಲಿ 10,02,200, ಡಿ.31ರಲ್ಲಿ 6,71,309 ರೂ. ಆದಾಯ ಬಂದಿದೆ.

ವರ್ಷಾಂತ್ಯದಲ್ಲಿ ಮಲೆ ಮಹದೇಶ್ವರ ವನ್ಯಜೀವಿಧಾಮ ವ್ಯಾಪ್ತಿಯ ಪಿ.ಜಿ ಪಾಳ್ಯ ಅರಣ್ಯ ಪ್ರದೇಶದ ಸಾರಿಗೂ ಪ್ರವಾಸಿಗರು ಆಗಮಿಸಿದ್ದಾರೆ. ಅರಣ್ಯ ಇಲಾಖೆ ನೀಡಿರು ಅಂಕಿ–ಅಂಶದ ಪ್ರಕಾರ, ಡಿ.28ರಲ್ಲಿ ವಯಸ್ಕರು ಮತ್ತು ಮಕ್ಕಳು ಸೇರಿ 57 ಡಿ.29ರಲ್ಲಿ 62, ಡಿ.30ರಲ್ಲಿ 33, ಡಿ.31ರಲ್ಲಿ 51 ಪ್ರವಾಸಿಗರು ಸಾರಿ ಮಾಡಿದ್ದಾರೆ. ಇದರಿಂದ ಡಿ.28ರಲ್ಲಿ 23,400 ರೂ., ಡಿ.29ರಲ್ಲಿ 24,400 ರೂ., ಡಿ.30ರಲ್ಲಿ 13,000 ರೂ., ಡಿ.31ರಲ್ಲಿ 19,600 ರೂ. ಆದಾಯ ಹರಿದುಬಂದಿದೆ.

ಕಾವೇರಿ ವನ್ಯಜೀವಿ ಧಾಮ ವ್ಯಾಪ್ತಿಯಲ್ಲಿರುವ ಗೋಪಿನಾಥಂ ಸಾರಿಗೆ ಡಿಸೆಂಬರ್ ತಿಂಗಳಲ್ಲಿ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಸಾರಿದಿಂದ 65 ಸಾವಿರ ರೂ. ಆದಾಯ ಬಂದಿದೆ. ಇದೇ ರೀತಿ ಬಿಆರ್‌ಟಿ ಹುಲಿ ಸಂರಕ್ಷಿತಾರಣ್ಯ ಪ್ರದೇಶ ವ್ಯಾಪ್ತಿಯ ಕೆ.ಗುಡಿಯ ಸಾರಿಯಲ್ಲೂ ಪ್ರವಾಸಿಗರು ಪಾಲ್ಗೊಂಡಿದ್ದಾರೆ.

> **ಸಾಫರಿ ವೇಳೆ ವನ್ಯಪ್ರೇಮಿಗಳಿಗೆ ಹಲವು ವನ್ಯಜೀವಿಗಳ ದರ್ಶನವಾಗಿದೆ. ಚಾಮರಾಜನಗರ ಜಿಲ್ಲೆಯ ಬಂಡೀಪುರದಲ್ಲಿ ಹುಲಿಯೊಂದು ತನ್ನ ಮರಿಗಳೊಂದಿಗೆ ಕಾಣಿಸಿಕೊಂಡು ಪ್ರವಾಸಿಗರಿಗೆ ರೋಮಾಂಚನ ಮೂಡಿಸಿತ್ತು. ಪರಿಸರ ಪ್ರೇಮಿಗಳಿಗೆ ಹುಲಿ ನೋಡಬೇಕೆಂಬುದು ಹೆಬ್ಬಯಕೆ. ಈ ಕಾರಣಕ್ಕಾಗಿಯೇ ಸಾರಿಗೆ ಬರುತ್ತಾರೆ. ಒಂದು ವೇಳೆ ಹುಲಿ ಕಾಣಿಸದೆ ಇದ್ದಾಗ ನಿರಾಸೆಗೊಳಗಾಗುತ್ತದೆ. ಬಂಡೀಪುರದಲ್ಲಿ ಹುಲಿ ದರ್ಶನ ಪ್ರವಾಸಿಗರ ಆಸೆ ತಣಿಸಿದೆ. ಹಾಗೆಯೇ ಉಳಿದ ಅರಣ್ಯ ಪ್ರದೇಶಗಳಲ್ಲೂ ವಿವಿಧ ಪ್ರಾಣಿಗಳು ಕಾಣಸಿಕ್ಕಿವೆ. ಅಲ್ಲದೇ, ವೈವಿಧ್ಯಮ ಕಾಡು, ಪರಿಸರವನ್ನು ನೋಡಿದಂತಾಗಿದೆ.**

# ಗಾಂಜಾ ಬೆಳೆ; ವ್ಯಕ್ತಿ ಬಂಧನ



ಹನೂರು: ಜೋಳದ ಫಸಲಿನ ಮಧ್ಯೆ ಅಕ್ರಮವಾಗಿ ಗಾಂಜಾ ಗಿಡಗಳನ್ನು ಬೆಳೆದಿರುವ ಘಟನೆ ಹನೂರು ತಾಲೂಕಿನ ದೊಡ್ಡಲತ್ತೂರು ಗ್ರಾಮದಲ್ಲಿ ನಡೆದಿದೆ.

ಸೆಲ್ವನ್ ಆರ್ಮುಗಂ ಬಂಧಿತ ಆರೋಪಿ. ರಾಮಾಪುರ ಪೊಲೀಸ್ ಠಾಣೆ ಅಧಿಕಾರಿಗಳು ಯಶಸ್ವಿಯಾಗಿದ್ದಾರೆ.

ರಾಮಪುರ ಪೊಲೀಸ್ ಠಾಣೆ ವ್ಯಾಪ್ತಿಯ ದೊಡ್ಡಲತ್ತೂರು ಗ್ರಾಮದಲ್ಲಿ ರವರು ಜೋಳದ ಪಸಲಿನ ಮಧ್ಯಭಾಗದಲ್ಲಿ ಅಕ್ರಮವಾಗಿ 26 ಕೆ.ಜಿ ತೂಕದ 85 ಗಾಂಜಾ ಗಿಡಗಳನ್ನು ಬೆಳೆದಿದ್ದಾನೆ ಎಂಬ ಖಚಿತ ಮಾಹಿತಿ ಮೇರೆಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕವಿತಾ ಹಾಗೂ ಡಿವೈಎಸ್ಪಿ ಧರ್ಮೇಂದ್ರ ಅವರ ಮಾರ್ಗದರ್ಶನ ಮೇರೆಗೆ ಎಎಸ್ಐ ಲೋಕೇಶ್ ಅವರ ತಂಡ ದಾಳಿ ನಡೆಸಿ ಆರೋಪಿಯನ್ನು ಬಂಧಿಸಿದ್ದಾರೆ.

ಎಎಸ್‌ಐ ಲೋಕೇಶ್, ಲಿಯದ್ ಅಲಿಖಾನ್, ಗಿರೀಶ್ ರಾಜು, ಪರಶುರಾಮ್, ದಯಾನಂದ ಪರ್ವ ಹಾಗೂ ಇನ್ನಿತರರು ಕಾರ್ಯಚರಣೆಯ ವೇಳೆ ಹಾಜರಿದ್ದರು.

# ಜೂಜಿನ ಅಡ್ಡೆ ಮೇಲೆ ದಾಳಿ: 11 ಜನರ ಬಂಧನ

**ಚಾಮರಾಜನಗರ:** ಸಾರ್ವಜನಿಕ ರಸ್ತೆಯೊಂದರ ಸಮೀಪ ಜೂಜಾಟ ಆಡುತ್ತಿದ್ದವರ ಮೇಲೆ ಪೊಲೀಸರು ದಾಳಿ ನಡೆಸಿ ಪಣಕ್ಕಿಟ್ಟಿದ್ದ ಹಣ ಹಾಗೂ 11 ಜನರನ್ನ ಬಂಧಿಸಿದ್ದಾರೆ.

ಚಾಮರಾಜನಗರದ ಮಹೇಶ್, ವಿನೋದ್, ವೀರನಪುರದ ನಾಗರಾಜು, ಸಿದ್ದೇಶ, ಮಹದೇವಪ್ಪ, ನಂಜದೇವನಪುರದ ಸಿದ್ದಪ್ಪ, ಸೋಮವಾರಪೇಟೆ ಗುರುಪ್ರಸಾದ್, ಯಶವಂತ್, ಕಾಳನಹುಂಡಿ ಮಹದೇವಪ್ಪ, ಹರವೆ ಮಹೇಶ, ನಂಜುಡಸ್ವಾಮಿ, ಎಂಬುವವರನ್ನ ವಶಕ್ಕೆ ಪಡೆಯಲಾಗಿದೆ. ಬಂಧಿತರಿಂದ ಒಟ್ಟು 1,66,650– ರೂ ವಶಪಡೆಯಲಾಗಿದೆ.

ಚಾಮರಾಜನಗರ ಉಪವಿಭಾಗದ ತೆರಕಣಾಂಬಿ ಠಾಣಾ ವ್ಯಾಪ್ತಿಯಲ್ಲಿ ಹೊಸ ವರ್ಷದ ಸಂಭ್ರಮದ ಹೊಸ್ತಿಲ ರಾತ್ರಿ ಸಮಯದಲ್ಲಿ ಖಚಿತ ವರ್ತಮಾನದ ಮೇರೆಗೆ ಪಿಎಸ್‌ಐ ಮಹೇಶ್ ಅವರ ನೇತೃತ್ವದಲ್ಲಿ ಅಂದರ್ ವಾಹರ್ ಜೂಜಾಟದಲ್ಲಿ ತೊಡಗಿದ್ದನ್ನ ಖಚಿತಪಡಿಸಿಕೊಂಡು ಕಾರ್ಯಚರಣೆ ನಡೆಸಿದ್ದಾರೆ.

ಪೇದೆಗಳಾದ ರಾಜಶೇಖರ, ಬಂಗಾರನಾಯ್ಕ, ರಾಘವೇಂದ್ರ ಶೆಟ್ಟಿ, ಶಾಂತಮಲ್ಲೇಶ ಸೇರಿದಂತೆ ಇನ್ನಿತರರು ಕಾರ್ಯಚರಣೆಯಲ್ಲಿ ಭಾಗವಹಿಸಿದ್ದರು.

# ನೂತನ ಅಧ್ಯಕ್ಷ–ಉಪಾಧಕ್ಷರ ಅವಿರೋಧ ಆಯ್ಕೆ

**ಚಿಕ್ಕಬಳ್ಳಾಪುರ:** ತಾಲ್ಲೂಕಿನ ಮಂಚನಬಲೆ ಗ್ರಾಮ ಪಂಚಾಯಿತಿಯ ಮುಂದಿನ ಒಂದು ವರ್ಷದ ಅವಧಿಗೆ ನೂತನ ಅಧ್ಯಕ್ಷರಾಗಿ ಕಾಂಗ್ರೆಸ್ ಬೆಂಬಲಿತ ವಿ.ಮಧು ಹಾಗೂ ಉಪಾಧ್ಯಕ್ಷೆಯಾಗಿ ವೆಂಕಟಲಕ್ಷ್ಮಮ್ಮ ಅವಿರೋಧವಾಗಿಆಯ್ಕೆಯಾಗಿದ್ದಾರೆ.



ಪಂಚಾಯಿತಿಯಲ್ಲಿನ ಎರಡು ಸ್ಥಾನಕ್ಕೆ ಕೇವಲ ಒಂದೊಂದು ನಾಮಪತ್ರ ಸಲ್ಲಿಕೆಯಾಗಿತ್ತು ಹಾಗಾಗಿ ಇಬ್ಬರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಇಒ ಮಂಜುನಾಥ್ ತಿಳಿಸಿದ್ದಾರೆ.

ಮಂಚನಬಲೆ ಗ್ರಾಮ ಪಂಚಾಯಿತಿಯ ಒಟ್ಟು 17 ಸದಸ್ಯರಲ್ಲಿ 14 ಸದಸ್ಯರ ಬೆಂಬಲದೊಂದಿಗೆ ಅಧ್ಯಕ್ಷ ಸ್ಥಾನಕ್ಕೆ ಆಯ್ಕೆಯಾಗಿರುವ ಮಧು ಅವರು ಮಾತನಾಡಿ, ಬೆಂಬಲ ಸೂಚಿಸಿದ ಪಂಚಾಯಿತಿ ಸದಸ್ಯರಲ್ಲೆರಿಗೂ ಧನ್ಯವಾದಗಳು ತಿಳಿಸಿ ,ಪಕ್ಷಾತೀತವಾಗಿ ಎಲ್ಲರ ವಿಶ್ವಾಸ ಗಳಿಸಿ, ಜನರ ಪ್ರೀತಿ ಪಡೆದು ಕೆಲಸ ಮಾಡುವುದಲ್ಲದೆ ಮಂಚನಬಲೆ ಗ್ರಾಮ ಪಂಚಾಯಿತಿಯನ್ನು ಮಾದರಿ ಪಂಚಾಯಿತಿ ಮಾಡಲು ಶ್ರಮಿಸುತ್ತೇನೆ ಎಂದರು.

ಒಂಬತ್ತು ವರ್ಷದಿಂದ ಪಂಚಾಯಿತಿ ಸದಸ್ಯನಾಗಿದ್ದೇನೆ ಇಲ್ಲಿನ ಸಮಸ್ಯೆಗಳ ಅರಿವು ನನಗಿದೆ ಒಂದು ವರ್ಷ ನನಗೆ ಅಧಿಕಾರ ಸಿಕ್ಕಿದ್ದು ಸಮಸ್ಯೆಗಳ ಪರಿಹಾರಕ್ಕೆ ಆಗಬೇಕಾದ ಕೆಲಸಗಳನ್ನು ಪೂರ್ಣ ಗೊಳಿಸಲು ಶಕ್ತಿ ಮೀರಿ ಕೆಲಸ ಮಾಡಲಾಗುವುದು ಎಂದು ಹೇಳಿದರು.

ಇನ್ನು ನನ್ನ ಮೂಲ ಉದ್ದೇಶ ಪಂಚಾಯಿತಿ ಅಭಿವೃದ್ಧಿ ಆಗಬೇಕು. ಹಾಗಾಗಿ ಎಲ್ಲರ ವಿಶ್ವಾಸ ಪಡೆಯುವುದು ಅಗತ್ಯ ವಿರೋಧಿಗಳು ನಮ್ಮ ಜತೆ ಕೈಜೋಡಿಸಿ ನಮ್ಮ ಗ್ರಾಮ ಪಂಚಾಯಿತಿಯನ್ನು ಅಭಿವೃದ್ಧಿಯತ್ತ ಸಾಗಿಸೋಣ ಎಂದು ವಿರೋಧಿಗಳಿಗೂ ಅಹ್ವಾನ ನೀಡಿದರು.

ಇದೇ ವೇಳೆ ಮಾಜಿ ಶಾಸಕರಾದ ಕೆ.ಪಿ.ಬಚ್ಚೆಗೌಡ ನೂತನ ಅಧ್ಯಕ್ಷರಿಗೆ ಶುಭಾಶಯಗಳು ಕೋರಿ ಮಾತನಾಡಿದ ಅವರು ಮಧು ಹಿಂದಿನಿಂದಲೂ ನಮ್ಮೊಟ್ಟಿಗೆ ಇದ್ದು ಈಗಲೂ ಕೂಡ ನಮ್ಮ ಜತೆಗೆ ಇದ್ದಾರೆ. ಒಂಬತ್ತು ವರ್ಷಗಳಿಂದ ಪಂಚಾಯಿತಿ ಸದಸ್ಯರಾಗಿ ಗ್ರಾಮದ ಅಭಿವೃದ್ಧಿಗೆ ಶ್ರಮಿಸಿದ್ದಾರೆ ಅವರ ಸತತ ಶ್ರಮದಿಂದಾಗಿ ಇಂದು ಪಂಚಾಯಿತಿ ಅಧ್ಯಕ್ಷ ಸ್ಥಾನ ಒಲಿದು ಬಂದಿದ್ದು ಸಮರ್ಥವಾಗಿ ನಿಭಾಯಿಸುವ ಭರವಸೆಯನ್ನು ವ್ಯಕ್ತಪಡಿಸಿದರು.ಗ್ರಾಮದಲ್ಲದೆ ಇಡೀ ತಾಲ್ಲೂಕಿನಲ್ಲಿ ಅವರಿಗೆ ಸಂಪೂರ್ಣ ಸಹಕಾರವಿದ್ದು ಯುವಕರಾದ ಅದ್ಯಕ್ಷರು ಮಂಚನಬಲೆ ಪಂಚಾಯಿತಿಯನ್ನು ಮಾದರಿ ಪಂಚಾಯಿತಿ ಮಾಡುವುದರಲ್ಲಿ ಯಾವುದೇ ಸಂಶಯವಿಲ್ಲ ಭ್ರಷ್ಟಾಚಾರ ರಹಿತ ಆಡಳಿತ ನೀಡಲಿದ್ದಾರೆ ಎಂದರು.

ಕ್ಷೇತ್ರದ್ಯಾಂತ ಹಲವಾರು ಮುಖಂಡರು ನೂತನ ಅಧ್ಯಕ್ಷ ಮಧು ರವರಿಗೆ ಶುಭಾಶಯಗಳು ಕೋರಿದರು.ಗ್ರಾಮ ಪಂಚಾಯಿತಿ ಆವರಣದಲ್ಲಿ ನೆರೆದಿದ್ದ ಮಧು ರವರ ಬೆಂಬಲಿಗರು ಹಾಗೂ ಗ್ರಾಮಸ್ಥರು ಪಟಾಕಿ ಸಿಡಿಸಿ ಸಿಹಿ ಹಂಚಿ ಬೃಹತ್ ಸೇಬಿನ ಹಾರ ಹಾಕಿ ಅಭಿನಂದಿಸಿ ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಯರಾಂ, ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ವಿ.ಸುರೇಶ್,ಬ್ಲಾಕ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಹೆಚ್.ಎಂ. ಹರೀಶ್, ಮುಖಂಡರಾದ ಕೆ.ಎಂ. ಮುನೇಗೌಡ,ಅಂಗರೇಖನಹಳ್ಳಿ ರವಿ,ಡ್ಯಾನ್ಸ್ ಶ್ರೀನಿವಾಸ್, ಮಂಡಿಕಲ್ ಕುಪೇಂದ್ರ, ಚೇತನ್, ಅರವಿಂದ್, ಕುಬೇರ ಅಚ್ಚು, ಅಲ್ಲು ಅನೀಲ್, ಸರಸ್ವತಿ, ಅಣ್ಣಮ್ಮ, ಅಪ್ಪಲು ವಂಶಿ, ತಿರುಮಲಪ್ಪ, ವೆಂಕಟ್, ಶಿವಕುಮಾರ್, ಚಿತು, ಗ್ರಾಮದ ಮುಖಂಡರು, ಗ್ರಾಮಸ್ಥರು ನೂತನ ಅಧ್ಯಕ್ಷರಿಗೆ ಅಭಿನಂದನೆ ಸಲ್ಲಿಸಿದರು.

# ಬಂಜಾರ ಶಾಸ್ತ್ರಗಳ ವಿಚಾರ ಗೋಷ್ಠಿ

**ಚಾಮರಾಜನಗರ:** ಬೆಂಗಳೂರಿನ ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿ ಹಾಗೂ ಚಾಮರಾಜನಗರ ಜಿಲ್ಲಾ ಲಂಬಾಣಿ ನೌಕರರ ಸಂಘ, ಕೊಳ್ಳೇಗಾಲ ಇವರ ಸಂಯುಕ್ತಾಶ್ರಯದಲ್ಲಿ ಬಂಜಾರ ಮದುವೆ ಶಾಸ್ತ್ರಗಳ ವಿಚಾರಗೋಷ್ಠಿ ಮತ್ತು ಕವಿಗೋಷ್ಠಿಯನ್ನು ಇಂದು ಕೊಳ್ಳೇಗಾಲ ಪಟ್ಟಣದ ಪರಮಹಂಸ ರಸ್ತೆಯಲ್ಲಿರುವ ವಾಸವಿ ಮಹಲ್‌ನಲ್ಲಿ ಹಮ್ಮಿಕೊಳ್ಳಲಾಗಿತ್ತು.

ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿ ಅಧ್ಯಕ್ಷರಾದ ಡಾ. ಎ.ಆರ್. ಗೋವಿಂದಸ್ವಾಮಿ ಅವರು ಕಾರ್ಯಕ್ರಮ ಉದ್ಘಾಟಿಸಿದರು.ಕರ್ನಾಟಕ ತಾಂಡ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎನ್.ಜಯದೇವನಾಯ್ಕ ಅವರು ಘನ ಉಪಸ್ಥಿತಿ ವಹಿಸಿ ಈ ಬಗ್ಗೆ ಚರ್ಚಿಸಿದರು.

# ಕಳಪೆ ಗುಣಮಟ್ಟದ ಜ್ಯೂಸ್ ಉತ್ಪಾದಕರು, ವಿತರಕರಿಗೆ ದಂಡ

**ಚಾಮರಾಜನಗರ:** ಕಳಪೆ ಗುಣಮಟ್ಟದ ಜ್ಯೂಸ್ ಉತ್ಪಾದಕರು ಹಾಗೂವಿತರಕರಿಗೆ ದಂಡ ವಿಧಿಸಿ ಹೆಚ್ಚುವರಿ ಜಿಲ್ಲಾಧಿಕಾರಿಗಳು ಹಾಗೂ ನ್ಯಾಯ ನಿರ್ಣಾಯಾಧಿಕಾರಿಗಳಾದ ಗೀತಾ ಹುಡೇದ ಅವರು ಆದೇಶಿಸಿದ್ದಾರೆ.



ಕಳೆದ 2024ರ ಸೆಪ್ಟೆಂಬರ್ 24ರಂದು ಯಳಂದೂರು ಪಟ್ಟಣದ ಬಳೇಪೇಟೆ ಮುಖ್ಯ ರಸ್ತೆಯಲ್ಲಿರುವ ಶ್ರೀ ಸಾಯಿರಾಮ್ ಸ್ಟೋರ್ ನಲ್ಲಿ ಯಳಂದೂರು ತಾಲೂಕಿನ ಆಹಾರ ಸುರಕ್ಷತಾ ಅಧಿಕಾರಿಗಳಾದ ಶ್ರೀನಿವಾಸ್ ಅವರು ಹೆಲ್ತ್ ಕೇರ್ ಮ್ಯಾಂಗೋ ಡ್ರಿಂಕ್ ಹೆಸರಿನ ಜ್ಯೂಸ್ ಮಾದರಿಯನ್ನು ಸಂಗ್ರಹಿಸಿ ಮೈಸೂರಿನ ವಿಭಾಗೀಯ ಆಹಾರ ಪ್ರಯೋಗಾಲಯಕ್ಕೆ ಕಳುಹಿಸಿದ್ದರು.

ಸದರಿ ಜ್ಯೂಸ್ ಮಾದರಿಯು ಕಡಿಮೆ ಗುಣಮಟ್ಟದ್ದಾಗಿದೆ (ಕಳಪೆ ಗುಣಮಟ್ಟ) ಎಂದು ವಿಶ್ಲೇಷಣಾ ವರದಿಯಿಂದ ದೃಢಪಟ್ಟಿದ್ದು ಈ ಪ್ರಕರಣವನ್ನು ಹೆಚ್ಚುವರಿ ಜಿಲ್ಲಾಧಿಕಾರಿಗಳು ಹಾಗೂ ನ್ಯಾಯ ನಿರ್ಣಾಯಾಧಿಕಾರಿಗಳ ನ್ಯಾಯಾಲಯದಲ್ಲಿ ಮೊಕದ್ದಮೆ ಹೂಡಲಾಗಿತ್ತು.

ನ್ಯಾಯ ನಿರ್ಣಾಯಕ ಅಧಿಕಾರಿಗಳು ಹಾಗೂ ಹೆಚ್ಚುವರಿ ಜಿಲ್ಲಾಧಿಕಾರಿಗಳಾದ ಗೀತಾ ಹುಡೇದ ಅವರು ಪ್ರಕರಣ ಸಂಬಂಧ ವಿಚಾರಣೆ ನಡೆಸಿ 2024ರ ಡಿಸೆಂಬರ್ 30ರಂದು ಹೆಲ್ತ್ ಕೇರ್ ಮ್ಯಾಂಗೋ ಡ್ರಿಂಕ್ ಜ್ಯೂಸ್ ತಯಾರಿಕರಿಗೆ 1 ಲಕ್ಷ ರೂ. ಹಾಗೂ ವಿತರಕರಿಗೆ 10 ಸಾವಿರ ದಂಡವನ್ನು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ 2006 ಹಾಗೂ ನಿಯಮ ನಿಬಂಧನೆ 2011ರ ರೀತ್ಯಾ ಸೆಕ್ಷನ್ 51ರಡಿಯಲ್ಲಿ ದಂಡ ವಿಧಿಸಿದ್ದಾರೆ. ಅಲ್ಲದೇ ಸದರಿ ಜ್ಯೂಸ್ ಉತ್ಪಾದನೆ ಹಾಗೂ ವಿತರಣೆಯನ್ನು ಸಂಪೂರ್ಣವಾಗಿ ನಿಲ್ಲಿಸುವಂತೆ ಎಚ್ಚರಿಕೆ ನೀಡಿದ್ದಾರೆ ಎಂದು ಚಾಮರಾಜನಗರ ಜಿಲ್ಲಾ ಅಂಕಿತ ಅಧಿಕಾರಿಗಳಾದ ಡಾ. ರವೀಂದ್ರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಓಂ ಶಕ್ತಿ ಭಕ್ತಾದಿಗಳಿಗೆ ಉಚಿತ ಬಸ್ ವ್ಯವಸ್ಥೆ



**ಮುಳಬಾಗಿಲು:** ಚುನಾವಣೆ ಸಮಯದಲ್ಲಿ ನೀಡಿದಂತಹ ಮಾತಿನಂತೆ ತಾಲೂಕಿನಾದ್ಯಂತ ಓಂ ಶಕ್ತಿ ಭಕ್ತಾದಿಗಳಿಗೆ ಉಚಿತ ಬಸ್ ವ್ಯವಸ್ಥೆಯನ್ನು ಶಾಸಕ ಸಮೃದ್ಧಿ ಮಂಜುನಾಥ್ ಅವರು ಮಾಡಿದ್ದಾರೆ. ಕೊಟ್ಟ ಮಾತಿನಂತೆ ಅವರು ನಡೆದುಕೊಂಡಿದ್ದಾರೆ ಎಂದು ಸಮಾಜಸೇವಕರಾದ ಎಂ ಗೊಲ್ಲಹಳ್ಳಿ ಪ್ರಭಾಕರ್ ತಿಳಿಸಿದ್ದಾರೆ.

ತಾಲೂಕಿನ ಹೆಬ್ಬಣಿ ಹಾಗೂ ಮುಷ್ಟೂರು ಗ್ರಾಮ ಪಂಚಾಯಿತಿಗಳಲ್ಲಿನ ಗ್ರಾಮಗಳ ಓಂ ಶಕ್ತಿ ಮಾಲಾಧಾರಿಗಳಿಗೆ ಈ ದಿನ 6 ಉಚಿತ ಬಸ್‌ಗಳ ವ್ಯವಸ್ಥೆಯನ್ನು ಶಾಸಕ ಸಮೃದ್ಧಿ ಮಂಜುನಾಥ್ ರವರು ಏರ್ಪಡಿಸಿದ್ದ ಓಂಶಕ್ತಿ ಮಾಲಾಧಾರಿಗಳ ಯಾತ್ರೆಗೆ ಚಾಲನೆ ನೀಡಿ ಮಾತನಾಡಿದ ಅವರು, ತಾಲೂಕಿನ ಜನತೆಯ ಕಷ್ಟಗಳಿಗೆ ಸ್ಪಂದಿಸುವ ಅವರಿಗೆ ಓಂ ಶಕ್ತಿ ತಾಯಿ ಇನ್ನೂ ಹೆಚ್ಚು ಹೆಚ್ಚು ಸಮಾಜಸೇವೆ ಮಾಡುವ ಅವಕಾಶ ಕಲ್ಪಿಸಿಕೊಡಲಿ, ಸಮೃದ್ಧಿ ನೀಡಲಿ ಎಂದು ಆಶಿಸುತ್ತೇನೆ. ತಾಲೂಕಿನ ಜನರ ಕಷ್ಟ ಸುಖಗಳಿಗೆ ಸ್ಪಂದಿಸುವ ನಿಟ್ಟಿನಲ್ಲಿ ತಾಲೂಕಿನ ಸರ್ವತೋಮುಖ ಅಭಿವೃದ್ಧಿಗೆ ಪಣತೊಟ್ಟು ಕೆಲಸ ಮಾಡುತ್ತಿದ್ದಾರೆ ಎಂದು ಅವರು ಹೇಳಿದರು.

ಓಂ ಶಕ್ತಿ ಭಕ್ತಾದಿಗಳು ಪ್ರಯಾಣ ಸುಖಕರವಾಗಿರಲಿ , ಯಾವುದೇ ಅವಘಡನೆ ಸಂಭವಿಸದೆ ಸುಖಕರವಾಗಿ ದರ್ಶನ ಪಡೆದು ಹಿಂದಿರುಗಬೇಕೆಂದು ಆ ತಾಯಿ ನಿಮಗೆ ಒಳ್ಳೆಯ ಐಶ್ವರ್ಯ ,ಆರೋಗ್ಯ ನೀಡಿ ಕಾಪಾಡಲೆಂದು ದೇವರಲ್ಲಿ ಪ್ರಾರ್ಥಿಸಿ ಶುಭಾಶಯ ಕೋರಿದರು.

ಈ ಸಂದರ್ಭದಲ್ಲಿ ಜೆಡಿಎಸ್ ಯುವ ಮುಖಂಡರಾದ ರೆಸಾರ್ಟ್ ಚಂದ್ರಹಾಸ್, ಮುಸ್ಟೂರು ಗ್ರಾಂ ಪಂ ಉಪಾಧ್ಯಕ್ಷರಾದ ಪೆದ್ದೂರು ವರದಪ್ಪ, ಹೆಚ್. ಕೊತ್ತೂರು ವೆಂಕಟರಾಮಪ್ಪ, ತಾ.ಪಂ. ಮಾಜಿ ಸದಸ್ಯರಾದ ಬ್ಯಾಟನೂರು ಸೀನಪ್ಪ, ಉಪ್ಪರಹಳ್ಳಿ ಮಾರ್ಕೊಂಡಪ್ಪ, ಹೆಬ್ಬಣಿ ಪಂ. ಮಾಜಿ ಅಧ್ಯಕ್ಷರಾದ ಶಾಂತಮ್ಮ ಶಂಕರಪ್ಪ , ಗ್ರಾ. ಪಂ ಸದಸ್ಯರಾದ ನಾಗಾರ್ಜುನ, ಸೀನಪ್ಪ, ಪ್ರಭಾಕರಪ್ಪ, ಗದ್ದರ್ ಶ್ರೀನಿವಾಸ್, ಸುಬ್ರಮಣಿ, ಬಾಲು, ನಾಗರಾಜ್, ಚಂದ್ರಪ್ಪ, ಎರಡು ಪಂಚಾಯತಿಯ ಎಲ್ಲಾ ಮುಖಂಡರುಗಳು, ಕಾರ್ಯಕರ್ತರು, ಓಂ ಶಕ್ತಿ ಭಕ್ತಾದಿಗಳು, ಸಾರ್ವಜನಿಕರು ಭಾಗವಹಿಸಿದ್ದರು.

# ಎರಡು ನಕಲಿ ಕ್ಲಿನಿಕ್‌ಗಳಿಗೆ ಬೀಗ

ಶಿಡ್ಲಘಟ್ಟ: ತಾಲ್ಲೂಕಿನಲ್ಲಿ ತಲೆದೋರಿದ್ದ ಎರಡು ನಕಲಿ ಕ್ಲಿನಿಕ್‌ಗಳನ್ನು ಮುಚ್ಚಿಸಿರುವ ಘಟನೆ ಸಾದಲಿ ಮತ್ತು ಬಶೆಟ್ಟಿಹಳ್ಳಿ ಗ್ರಾಮದಲ್ಲಿ ನಡೆದಿದೆ.

ಎಸ್.ವಿ. ಸಹದೇವ್ ಎಂಬುವವರು ಸಣ್ಣ ಕೊಠಡಿಯಲ್ಲಿ ಹಾಗೂ ಬಶೆಟ್ಟಿಹಳ್ಳಿ ವೃತ್ತದಲ್ಲಿ ನಾಮಫಲಕವಿಲ್ಲದ ಕ್ಲಿನಿಕ್‌ನಲ್ಲಿ ಎಲ್.ಲೋಕನಾಥ ರೆಡ್ಡಿ ಎಂಬುವವರು ಸೂಕ್ತ ವಿದ್ಯಾರ್ಹತೆ ನೋಂದಣಿ ಪ್ರಮಾಣಪತ್ರವಿಲ್ಲದೇ ಹಾಗೂ ಕೆಪಿಎಂಇ ಅನಧಿಕೃತವಾಗಿ ಜನರಿಗೆ ಅಲೋಪಥಿ ಔಷಧಗಳನ್ನು ನೀಡಿ ಚಿಕಿತ್ಸೆ ನೀಡುತ್ತಿರುವ ಮಾಹಿತಿ ತಿಳಿದು ತಾಲ್ಲೂಕು ಆರೋಗ್ಯಾಧಿಕಾರಿ ಡಾ. ವೆಂಕಟೇಶಮೂರ್ತಿ ನೇತೃತ್ವದಲ್ಲಿ ಆರೋಗ್ಯ ಇಲಾಖೆ ವೈದ್ಯರು ಹಾಗೂ ಸಿಬ್ಬಂದಿ ಪರಿಶೀಲಿಸಿದಾಗ ತಾಲೂಕಿನ ಎರಡು ಕಡೆ ನಕಲಿ ಕ್ಲಿನಿಕ್ ಗಳನ್ನು ನಡೆಸುತ್ತಿರುವುದು ತಿಳಿದುಬಂದಿದೆ.

ರೋಗಿಗಳಿಗೆ ನೀಡುತ್ತಿದ್ದ ಕೆಲವು ಮಾತ್ರೆ ಹಾಗೂ ಇತರ ಸಲಕರಣೆಗಳನ್ನು ಜಪ್ತಿ ಮಾಡಿ, ದೋಷಾರೋಪಣಾ ಪಟ್ಟಿ ಸಿದ್ಧಪಡಿಸಿ ಜಿಲ್ಲಾ ಆರೋಗ್ಯಾಧಿಕಾರಿಗಳ ಮೂಲಕ ಕೆಪಿಎಂಇ ಅಧ್ಯಕ್ಷ ಹಾಗೂ ಜಿಲ್ಲಾ ಸಕ್ಷಮ ಪ್ರಾಧಿಕಾರಿಗಳಾದ ಜಿಲ್ಲಾಧಿಕಾರಿಗಳ ನ್ಯಾಯಾಲಯದಲ್ಲಿ ಈ ಎರಡೂ ಪ್ರಕರಣಗಳ ವಿಚಾರಣೆ ನಡೆಸಲು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ವೆಂಕಟೇಶ ಮೂರ್ತಿ ಕೋರಿದ್ದಾರೆ.

ಮುಂದಿನ ದಿನಗಳಲ್ಲಿ ಕೆಪಿಎಂಇ ಪ್ರಮಾಣಪತ್ರ ಪಡೆಯದೇ ಹಾಗೂ ಸೂಕ್ತ ವೈದ್ಯಕೀಯ ವಿದ್ಯಾರ್ಹತೆ ಇಲ್ಲದೇ ಯಾರೇ ವೈದ್ಯ ವೃತ್ತಿಯನ್ನು ನಡೆಸುತ್ತಿದ್ದಲ್ಲಿ ಅಂತಹವರಿಗೆ ಇದು ಎಚ್ಚರಿಕೆಯ ಗಂಟೆ. ಅಂತಹವರು ಕಡ್ಡಾಯವಾಗಿ ಕೆಪಿಎಂಇ ಪ್ರಮಾಣಪತ್ರ ಪಡೆಯಲು ಕ್ರಮವಹಿಸಲು ತಾಲೂಕು ಆರೋಗ್ಯಾಧಿಕಾರಿ ಡಾ. ವೆಂಕಟೇಶಮೂರ್ತಿ ತಿಳಿಸಿದರು.

ಈ ಸಂದರ್ಭದಲ್ಲಿ ಸಾದಲಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯ ಡಾ.ಟಿ.ಆರ್. ಯಶ್ವಂತ್, ಸಾದಲಿ ಪ್ರಾ.ಆ.ಕೇಂದ್ರದ ಆರೋಗ್ಯ ನಿರೀಕ್ಷಣಾಧಿಕಾರಿ ಎಸ್. ಸುನೀಲ್‌ಕುಮಾರ್ ,ತಾಲ್ಲೂಕು ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಎಂ. ದೇವರಾಜ್ ಮತ್ತು ಬಶೆಟ್ಟಿಹಳ್ಳಿಯ ಫಾರ್ಮಸಿ ಅಧಿಕಾರಿ ಡಿ.ಎಸ್. ರಹಮತ್ ಉಲ್ಲಾ ಹಾಜರಿದ್ದರು.

# ಕಾಂಗ್ರೆಸ್ ವಕ್ತಾರನ ಅತಿರೇಕದ ವರ್ತನೆಗೆ ಖಂಡನೆ



ಕುಕನೂರು: ಹಾಲಪ್ಪ ಆಚಾರ್ ಅವರ ಅನುಭವದಷ್ಟು ವಯಸ್ಸಿನ ಮತ್ತು ಪಂಚಮಸಾಲಿ ನಾಯಕ ವೀರಣ್ಣ ಹುಬ್ಬಳ್ಳಿ ಅವರ ಮಗನ ವಯಸ್ಸಿನ ಕಾಂಗ್ರೆಸ್ ವಕ್ತಾರ ಸಂಗಮೇಶ್ ಗುತ್ತಿ ಹಿರಿಯರು ಎನ್ನದೇ ಏಕವಚನದಲ್ಲಿ ನಿಂದಿಸಿದ್ದು ನೋಡಿದರೆ ಇವರಿಗೆ ಅಧಿಕಾರದ ಪಿತ್ತ ನೆತ್ತಿಗೆರಿದೆ. ಮಾತಿನ ಮೇಲೆ ಹಿಡಿತವಿರಬೇಕು ಎಂದು ಬಿಜೆಪಿ ಪಕ್ಷದ ಯುವ ನಾಯಕ ವಿರೇಶ್ ಸಬರದ ಎಚ್ಚರಿಸಿದ್ದಾರೆ.

ಪಟ್ಟಣದ ಎಪಿಎಂಸಿ ಆವರಣದಲ್ಲಿ ಸುದ್ದಿಗೋಷ್ಠಿ ಬಿಜೆಪಿ ಮುಖಂಡರೊಂದಿಗೆ ನಡೆಸಿ ಮಾತನಾಡಿದ ವಿರೇಶ್, ವೀರಣ್ಣ ಹುಬ್ಬಳ್ಳಿ ನಮ್ಮ ಪಂಚಮಸಾಲಿ ನಾಯಕರು, ಹಿರಿಯರಿದ್ದಾರೆ, ಕಾಂಗ್ರೆಸ್ ವಕ್ತಾರ ಮೊದಲು ಹಾಲಪ್ಪ ಆಚಾರ್, ವೀರಣ್ಣ ಹುಬ್ಬಳ್ಳಿ ಅವರಂತಹ ಹಿರಿಯರಿಗೆ ಗೌರವ ಕೊಟ್ಟು ಮಾತಾಡುವುದನ್ನು ಕಲಿಯಲಿ. ಪಂಚಮಸಾಲಿಗರ ತಂಟೆಗೆ ಬಂದರೆ ಹುಷಾರು, ತಾಕತ್ ಇದ್ದರೆ ನಮ್ಮ ನಾಯಕರನ್ನು ಮುಟ್ಟಿ ನೋಡಿ, ಕಾಂಗ್ರೆಸ್ ವಕ್ತಾರ ಹೇಳಿರುವ ಹೇಳಿಕೆ ಬಗ್ಗೆ ಕ್ಷಮೆ ಕೇಳದಿದ್ದರೆ ಪಂಚಮಸಾಲಿ ಸಮಾಜದಿಂದ ಸಂಗಮೇಶ್ ಗುತ್ತಿ ಮನೆಗೆ ಮುತ್ತಿಗೆ ಹಾಕಬೇಕಾಗುತ್ತದೆ ವಿರೇಶ್ ಸಬರದ ಎಂದು ಎಚ್ಚರಿಕೆ ನೀಡಿದ್ದಾರೆ.

ಯುವ ಮುಖಂಡರಾದ ರಮೇಶ್ ಶಾಸ್ತ್ರೀ, ಲಕ್ಷಣ್ ಕಾಳಿ, ಮತ್ತು ನಾಗಪ್ಪ ಕಲ್ಮನಿ ಮಾತನಾಡಿ, ಡಾ ಅಂಬೇಡ್ಕರ್ ಮತ್ತು ಸಂವಿಧಾನವು ಕಾಂಗ್ರೆಸ್ ಪಕ್ಷದ ಸೊತ್ತಲ್ಲ, ಈ ಹಿಂದೆ ಕಾಂಗ್ರೆಸ್ ಡಾ ಬಿ ಆರ್ ಅಂಬೇಡ್ಕರ್ ಅವರಿಗೆ ಎಷ್ಟೊಂದು ಅವಮಾನ ಮಾಡಿದೆ ಎಂದು ಇಡೀ ಭಾರತಕ್ಕೆ ಗೊತ್ತು, ಚುನಾವಣೆಯಲ್ಲಿ ಅವರನ್ನ ಸೋಲಿಸಿ ಕಾಂಗ್ರೆಸ್ ಅವಮಾನ ಮಾಡಿದೆ. ಅದನ್ನು ಸ್ವತಃ ಕಾಂಗ್ರೆಸ್ ಪಕ್ಷದ ನಾಯಕರೇ ಒಪ್ಪಿಕೊಂಡಿದ್ದಾರೆ, ಇಂತವರಿಂದ ಸಂವಿಧಾನದ ಪಾಠ ಕಲಿಯಬೇಕಿಲ್ಲ, ಯಲಬುರ್ಗಾ ಕ್ಷೇತ್ರದಲ್ಲಿ ಕೆಳ ಸಮುದಾಯದ ಜನರಿಗೆ ರಾಯರಡ್ಡಿ ಅವರಿಂದ ಯಾವುದೇ ಪ್ರಯೋಜನ ಆಗಿಲ್ಲ ಎಂದು ಹೇಳಿದರು.

ಕರಬಸಯ್ಯ ಬಿನ್ನಾಳ್ ಮಾತನಾಡಿ, ಕಾಂಗ್ರೆಸ್ ಪಕ್ಷದ ಮುಖಂಡರ ವರ್ತನೆ, ಹೇಳಿಕೆಯಿಂದ ಕುಕನೂರು ಯಲಬುರ್ಗಾ ತಾಲೂಕಿನಲ್ಲಿ ವೈಷ್ಯಮ್ಯದ ಪರಸ್ಥಿತಿ, ವಾತಾವರಣ ನಿರ್ಮಾಣವಾಗಿದೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಬಸವರಾಜ್ ಹಾಳಕೇರಿ, ಪ್ರಕಾಶ್ ಬೋರಣ್ಣವರ್, ಮಧು ಕಲ್ಮನಿ, ಬಸವರಾಜ್ ಬಡಿಗೇರ್, ಜಗದೀಶ್ ತೊಂಡಿಹಾಳ, ಚಂದ್ರು ಬಗನಾಲ್, ವಿನಯ್ ಸರ್ಗಣಾಚಾರ, ಶರಣಪ್ಪ ಕಾಳಿ ಇತರರು ಉಪಸ್ಥಿತರಿದ್ದರು.

# ಬ್ರಿಡ್ಜ್ ಮರುನಿರ್ಮಾಣ : ಮಾರ್ಗ ಬದಲಾವಣೆ

**ಚಾಮರಾಜನಗರ:** ಲೋಕೋಪಯೋಗಿ ಇಲಾಖೆಯ ರಾಷ್ಟ್ರೀಯ ಹೆದ್ದಾರಿ ಉಪವಿಭಾಗ ವತಿಯಿಂದ ಎನ್.ಹೆಚ್–150ಎ ಜೇವರ್ಗಿ–ಚಾಮರಾಜನಗರ ಸೆಕ್ಷನ್‌ನಲ್ಲಿ ಮೈನರ್ ಬ್ರಿಡ್ಜ್ ಮರುನಿರ್ಮಾಣವನ್ನು ಸರಪಳಿ 682.590 ಕಿ.ಮೀ ರಲ್ಲಿ ಪ್ರಾರಂಭಿಸಬೇಕಾಗಿದ್ದು, ಕಾಮಗಾರಿಯು ಸಂಪೂರ್ಣವಾಗುವವರೆಗೆ ಬದಲಿ ರಸ್ತೆಯಲ್ಲಿ ವಾಹನಗಳ ಸಂಚಾರಕ್ಕೆ ಅನುವು ಮಾಡಿಕೊಡಲಾಗುವುದು ಎಂದು ಮಳವಳ್ಳಿಯ ರಾಷ್ಟ್ರೀಯ ಹೆದ್ದಾರಿ ಉಪ ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಸಿದವರಿಗೆ ಅನ್ನವನ್ನು ನೀಡಲು ಜಾಗೃತಿ ಮೂಡಿಸುತ್ತಿರುವ

**ಮುಳಬಾಗಿಲು:** ನಿತ್ಯವೂ ಗಂಟೆಗಟ್ಟಲೇ ಮೊಬೈಲ್‌ನಲ್ಲೇ ಕಾಲಹರಣ ಮಾಡುವ ಯುವಕರ ಮಧ್ಯೆಯೂ ಇಲ್ಲೊಂದು ಯುವಕ ಸಾಮಾಜಿಕ ಕೆಲಸಕ್ಕೆ ಟೊಂಕ ಕಟ್ಟಿದೆ. ಸಭೆ-ಸಮಾರಂಭಗಳಲ್ಲಿ ಉಳಿದ ಅನ್ನವನ್ನು ಹಸಿದವರಿಗೆ, ಬಡವರಿಗೆ, ನಿರ್ಗತಿಕರಿಗೆ ವಿತರಿಸುವ ಮೂಲಕ ಸಾಮಾಜಿಕ ಜಾಗೃತಿ ಮೂಡಿಸುತ್ತಿದೆ.

ಇಲ್ಲಿಯ ಮುಳಬಾಗಿಲು ಫುಡ್ ಬ್ಯಾಂಕ್ ಇಂತಹ ಮಹತ್ಕಾರ್ಯ ಮುನ್ನಡೆಸಿಕೊಂಡು ಹೊರಟಿದೆ. ಜಿಲ್ಲೆಯ ಜನತೆಗೆ ದುಡಿಮೆ ಇಲ್ಲ, ಉದ್ಯೋಗವೂ ಅಷ್ಟಕ್ಕಷ್ಟೆ. ತುತ್ತಿನ ದುಡಿಮೆಗಾಗಿ ಇಂದಿಗೂ ಪರದಾಡುವ ಪರಿಸ್ಥಿತಿಯಿದೆ. ಅಲ್ಲದೇ ಅನಾಥರು, ಬಡ ಮಕ್ಕಳು, ನಾನಾ ಕಾರಣಕ್ಕೆ ಮನೆ ತೇಣಟಿಜಜಜಿಟಿಜಜರೆದು ಬಸ್ ನಿಲ್ದಾಣ, ಸಾರ್ವಜನಿಕ ತಾಣಗಳಲ್ಲಿ ನಿತ್ಯವೂ ಊಟಕ್ಕಾಗಿ ಜನರ ಮುಂದೆ ಕೈ ಚಾಚಿ ಬೇಡುವವರಿದ್ದಾರೆ. ಇದನ್ನೆಲ್ಲ ಮನಗಂಡ ಎಂ ಬಿ ಕೃಷ್ಣಮೂರ್ತಿ ನಿರ್ಗತಿಕರಿಗೆ, ಬಡವರಿಗೆ ನೆರವಾಗುವ ನಿಟ್ಟಿನಲ್ಲಿ ಕೆಲಸ ಮಾಡುತ್ತಿದ್ದಾರೆ.

ನಗರ ಪ್ರದೇಶದಲ್ಲಿ ಸಭೆ-ಸಮಾರಂಭ-ಮದುವೆ ಸೇರಿ ಇನ್ನಿತರ ಕಾರ್ಯಕ್ರಮಗಳಲ್ಲಿ ಉಳಿಯುವ ಅನ್ನ, ಸಾಂಬಾರು, ಸಿಹಿ ಪದಾರ್ಥವನ್ನು ವ್ಯರ್ಥವಾಗಿ ಬಿಸಾಡುತ್ತಾರೆ. ಇದನ್ನರಿತ ಈ ಯುವಕ ಅನ್ನ ಕಸದ ಬುಟ್ಟಿ ಸೇರುವ ಬದಲು ಹಸಿದ ಹೊಟ್ಟೆ ಸೇರಿದರೆ ಅನ್ನಕ್ಕೂ ಬೆಲೆ ಸಿಗಲಿದೆ, ಹಸಿದ ಹೊಟ್ಟೆಯೂ ತಣ್ಣಗಾಗಲಿದೆ ಎನ್ನುವುದನ್ನು ಅರಿತು ಸಾಮಾಜಿಕ ಜಾಲತಾಣದಲ್ಲಿ ತಮ್ಮದೇ ಅಭಿಯಾನ ಆರಂಭಿಸಿದ್ದಾರೆ. ಇದಕ್ಕೊಂದು ಮೂರ್ತರೂಪ ಕೊಡಬೇಕೆಂದು ನಿಶ್ಚಯಿಸಿ ಕೆಲವೇ ತಿಂಗಳ ಹಿಂದಷ್ಟೆ 'ಮುಳಬಾಗಿಲು ಫುಡ್ ಬ್ಯಾಂಕ್ ಅಮ್ಮಂದಿರ(ತಾಯಂದಿರ)



ದಿನಾಚರಣೆಯಂದೇ ಸಂಸ್ಥೆ ಉದ್ಘಾಟಿಸಿದೆ.'ಹಸಿವು ಇದ್ದ ಕಡೆ ನಮ್ಮ ನಡೆ'ಎನ್ನುವ ಧ್ಯೇಯ ವಾಕ್ಯವೇ ನಾಮಾಂಕಿತವನ್ನಿಟ್ಟು ಫೇಸ್‌ಬುಕ್-ವಾಟ್ಸ್‌ಆ್ಯಪ್‌ಗ್ರೂಪ್‌ನಲ್ಲಿ ಶೇರ್ ಮಾಡಿದೆ.


ಯುವಕ ಕಾರ್ಯಕ್ಕೆ ಮೆಚ್ಚಿದ ಜನತೆ ಮೊದಲ ದಿನವೇ ಯುವಕರನ್ನು ಸಂಪರ್ಕಿಸಿ ವಿವಿಧ ಸಭೆ-ಸಮಾರಂಭಗಳಲ್ಲಿ ಉಳಿದ ಅನ್ನವನ್ನು ನೀಡಿದ್ದಾರೆ. ಈ ಯುವಕರು ಪ್ಯಾಕೆಟ್‌ನಲ್ಲಿ ಎಲ್ಲವನ್ನೂ ಸಿದ್ಧಪಡಿಸಿ ಸಾರ್ವಜನಿಕ ಸ್ಥಳದಲ್ಲಿ ಹಸಿವಿನಿಂದ ಬಳಲುವ ಬಡವರಿಗೆ, ಅಂಗವಿಕಲರಿಗೆ ಸಾರ್ವಜನಿಕ ಸ್ಥಳಗಳಲ್ಲಿ ನಿತ್ಯ ಒಂದೊತ್ತಿನ ಊಟಕ್ಕಾಗಿ ಬಳಲುವವರನ್ನು ಕಣ್ಣಾರೆ ನೋಡುತ್ತಿದ್ದೆವು. ಅವರಿಗೆ ನಮ್ಮ ಕೈಲಾದಷ್ಟು ಸಹಾಯ-ಸಹಕಾರ ಮಾಡಬೇಕೆಂಬ ನಿರ್ಧಾರ ಮಾಡಿ ನಮ್ಮೆಲ್ಲ ಸ್ನೇಹಿತರೊಡಗೂಡಿ ಸಭೆ-ಸಮಾರಂಭಗಳಲ್ಲಿ ಉಳಿದ ಅನ್ನವನ್ನು ವ್ಯರ್ಥ ಮಾಡದೆ ನಮಗೇ ಕೊಡುವಂತೆ ಮನವಿ ಮಾಡಿ ಆ ಅನ್ನವನ್ನು ಹಸಿದವರಿಗೆ ಕೊಡುತ್ತಿದ್ದೇವೆ. ಇದಕ್ಕೆ ಉತ್ತಮ ಸ್ಪಂದನೆ ಸಿಕ್ಕಿದೆ. ಅನ್ಯ ಜಿಲ್ಲೆಗಳಿಂದಲೂ ಕರೆಗಳು ಬರುತ್ತಿವೆ. ನಮ್ಮ ಕೈಲಾದದ್ದು ಮಾಡುತ್ತಿದ್ದೇವೆ.- ಬಸವರಾಜ ಮರಡೂರು,ಸುಧಾ ಕಲ್ಚರಲ್ ಅಕಾಡೆಮಿ ಸಂಸ್ಥಾಪಕ.

ಅಚ್ಚರಿಯ ವಿಷಯವೆಂದರೆ ಕೊಪ್ಪಳದ ಗವಿಮಠ, ಮಳೆ ಮಲ್ಲೇಶ್ವರ ದೇವಸ್ಥಾನಗಳಿಂದಲೂ ಈ ಯುವಕರಿಗೆ ಕರೆಗಳು ಬರುತ್ತಿದ್ದು, ನಿತ್ಯ ಒಂದೆರೆಡು ಗಂಟೆ ಅಳಿಲು ಸೇವೆ ಆರಂಭಿಸಿದ್ದಾರೆ. ಇವರ ಸೇವಾ ಕಾರ್ಯ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪ್ರಸಾರವಾದ ಹಿನ್ನೆಲೆಯಲ್ಲಿ ಅನ್ಯ ಜಿಲ್ಲೆಗಳಿಂದಲೂ ಕರೆ ಬರುತ್ತಿವೆ. ಸದ್ಯಕ್ಕೆ ಕೊಪ್ಪಳ ನಗರ ಪ್ರದೇಶದಲ್ಲಿ ಈ ಸಾಮಾಜಿಕ ಕಾರ್ಯ ಆರಂಭಿಸಲಾಗಿದೆ.

ಮಠದಿಂದಲೂ ಕರೆ:

ಅಚ್ಚರಿಯ ವಿಷಯವೆಂದರೆ ಕೊಪ್ಪಳದ ಗವಿಮಠ, ಮಳೆ ಮಲ್ಲೇಶ್ವರ ದೇವಸ್ಥಾನಗಳಿಂದಲೂ ಈ ಯುವಕರಿಗೆ ಕರೆಗಳು ಬರುತ್ತಿದ್ದು, ನಿತ್ಯ ಒಂದೆರೆಡು ಗಂಟೆ ಅಳಿಲು ಸೇವೆ ಆರಂಭಿಸಿದ್ದಾರೆ. ಇವರ ಸೇವಾ ಕಾರ್ಯ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪ್ರಸಾರವಾದ ಹಿನ್ನೆಲೆಯಲ್ಲಿ ಅನ್ಯ ಜಿಲ್ಲೆಗಳಿಂದಲೂ ಕರೆ ಬರುತ್ತಿವೆ. ಸದ್ಯಕ್ಕೆ ಕೊಪ್ಪಳ ನಗರ ಪ್ರದೇಶದಲ್ಲಿ ಈ ಸಾಮಾಜಿಕ ಕಾರ್ಯ ಆರಂಭಿಸಲಾಗಿದೆ. ಮುಳಬಾಗಿಲು ಫುಡ್ ಬ್ಯಾಂಕ್ ಹಸಿದವರಿಗೆ ಆಸರೆ ಕಾರ್ಯಕ್ಕೆ ಕೈ ಜೋಡಿಸುವವರು ಮೊ. 9036650020, 9606411146 ಈ ಮೊಬೈಲ್ ಸಂಖ್ಯೆಗಳಿಗೆ ಸಂಪರ್ಕಿಸಬಹುದು.

# ಕಾಂಗ್ರೆಸ್ ಸಚಿವರ ರಾಜೀನಾಮೆ ಕೇಳುವ ನೈತಿಕತೆ ಬಿಜೆಪಿಗಿಲ್ಲ: ಸಚಿವ ಬೋಸರಾಜು



**ಕುಕನೂರು:** ಬಿಜೆಪಿ ಪಕ್ಷದ ಆರ್ ಅಶೋಕ್, ಬಿ ಎಸ್ ಯಡಿಯೂರಪ್ಪ, ವಿಜಯೇಂದ್ರ ಸೇರಿ 16 ನಾಯಕರ ಮೇಲೆ ಕೇಸುಗಳಿವೆ. ಕೋವಿಡ್ ಅವಧಿಯಲ್ಲಿ ಬಿ ಎಸ್ ಯಡಿಯೂರಪ್ಪನವರ ಮಗ 40 ಸಾವಿರ ಕೋಟಿ ಲೂಟಿ ಮಾಡಿದ್ದಾರೆಂದು ಸ್ವತಃ ಬಿಜೆಪಿ ಪಕ್ಷದ ಬಸವನ ಗೌಡ ಪಾಟೀಲ್ ಯತ್ನಾಳ್ ಹೇಳಿದ್ದಾರೆ. ಬೇಲ್ ಮೇಲಿರುವ ಬಿಜೆಪಿ ನಾಯಕರಿಗೆ ನಮ್ಮ ಸಚಿವರ ರಾಜೀನಾಮೆ ಕೇಳುವ ಯಾವ ನೈತಿಕತೆ ಇದೆ ಎಂದು ಸಣ್ಣ ನೀರಾವರಿ ಸಚಿವ ಎನ್ ಎಸ್ ಬೋಸರಾಜು ಪ್ರಶ್ನಿಸಿದ್ದಾರೆ.

ಗುತ್ತಿಗೆದಾರ ಸಚಿನ್ ಪಂಚಾಳ್ ಸಾವಿಗೆ ಸಂಬಂಧಿಸಿದಂತೆ ಸಚಿವ ಪ್ರಿಯಾಂಕ್ ಖರ್ಗೆ ಮತ್ತು ಬಾಣಂತಿಯರ ಸಾವಿಗೆ ಸಂಬಂಧಿಸಿದಂತೆ ದಿನೇಶ್ ಗುಂಡೂರಾವ್ ಅವರ ರಾಜೀನಾಮೆ ಕೇಳುವ ನೈತಿಕತೆ ಬಿಜೆಪಿ ಪಕ್ಷದವರಿಗೆ ಇಲ್ಲ ಎಂದು ಬೋಸರಾಜು ಹೇಳಿದ್ದಾರೆ.

ಕೊಪ್ಪಳ ಜಿಲ್ಲೆಯ ಬಾನಾಪುರದಲ್ಲಿ ನಿರ್ಮಾಣವಾಗುತ್ತಿರುವ ಜಾಕ್ವೆಲ್ ಪಂಪ್ ಹೌಸ್ ಗೆ ಭೇಟಿಕೊಟ್ಟು ಪರಿಶೀಲನೆ ಮಾಡಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು. ಬಿಜೆಪಿ ಪಕ್ಷದ ರಾಜ್ಯದ 16 ಜನ ಘಟಾನುಘಟಿ ನಾಯಕರ ಮೇಲೆಯೇ ಕೇಸುಗಳಿವೆ. ಯಡ್ಯೂರಪ್ಪ, ಆರ್ ಅಶೋಕ್, ಶೋಭಾ ಕರಂದ್ಲಾಜೆ, ಭಿ ವೈ ವಿಜಯೇಂದ್ರ ಹೀಗೆ ಬಿಜೆಪಿ ಪಟ್ಟಿ ಬೆಳೆಯುತ್ತದೆ. ಮೊದಲು ಅವರು ರಾಜೀನಾಮೆ ಕೊಡಲಿ ಎಂದು ಸಚಿವರು ಹೇಳಿದರು.

ಬಸ್ ಪ್ರಯಾಣ ದರ ಕುರಿತಂತೆ ಪ್ರತಿಕ್ರಿಯಿಸಿ, ಮೂರು ವರ್ಷಕ್ಕೆ ಒಂದು ಸಲ ಬಸ್ ಪ್ರಯಾಣ ದರ ಏರಿಸಲು ಅವಕಾಶ ಇದೆ ಹೀಗಾಗಿ ಪ್ರಯಾಣಿಕರ ಬಸ್ ದರ ಹೆಚ್ಚಿಸಲಾಗಿದೆ ಎಂದು ಸಮರ್ಥಿಸಿಕೊಂಡ ಸಚಿವರು, ಗ್ಯಾರಂಟಿ ಯೋಜನೆ ಅನುಷ್ಠಾನ ರಾಜ್ಯದಲ್ಲಿ ಯಶಸ್ವಿಯಾಗಿ ಜಾರಿಯಲ್ಲಿದೆ ಎಂದರು.

ತುಂಗಭದ್ರಾ ನದಿ ಸೇರಿದಂತೆ ರಾಜ್ಯದ ನದಿಗಳ ಹೂಳು ತೆಗಿಸುವ ಪ್ರಮೇಯವೇ ಇಲ್ಲ, ಇದು ಅಸಾಧ್ಯದ ಮಾತು ಎಂದು ಅವರು ಸ್ಪಷ್ಟಪಡಿಸಿದ್ದು ಸ್ಥಳೀಯ ಬನಾಪುರ ಜಾಕ್ವೆಲ್ ಪಂಪ್ ಹೌಸ್ ಯೋಜನೆಯನ್ನು ಮಾರ್ಚ್ ಅಂತ್ಯದೊಳಗೆ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಇದರಿಂದ ಸ್ಥಳೀಯ 9 ಕೆರೆಗಳಿಗೆ ನೀರು ತುಂಬಿಸಿ ರೈತರ ಜಮೀನುಗಳಿಗೆ ಅಂತರ್ ಜಲ ವೃದ್ಧಿಯಾಗಲಿದೆ, ರೈತರ ಜಮೀನುಗಳಿಗೆ ನೀರಾವರಿ ಸಲುವಾಗಿ ಅಂತರ್ ಜಲ ಹೆಚ್ಚಿಸಲು ರಾಜ್ಯದ ಎಲ್ಲಾ ಕಡೆಗಳ ಕೆರೆಗಳಿಗೆ ನೀರು ತುಂಬಿಸುವ ಕಾರ್ಯ ನಡೆಯುತ್ತಿದೆ ಎಂದು ಸಚಿವ ಎನ್ ಎಸ್ ಬೋಸರಾಜು ಹೇಳಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಯಂಕಣ್ಣ ಯಾರಾಶಿ, ಕೆರಿಬಸಪ್ಪ ನಿಡಗುಂದಿ, ಶಿವನಗೌಡ ದಾನರೆಡ್ಡಿ, ಸಂಗಮೇಶ್ ಗುತ್ತಿ, ಇತರ ಸ್ಥಳೀಯ ನಾಯಕರು ಉಪಸ್ಥಿತರಿದ್ದರು.

# ರೇಷ್ಮೆಗೆ ಊಜಿ,ಸುಣ್ಣ ಕಟ್ಟುರೋಗ




ಶಿಡ್ಲಘಟ್ಟ: ರೇಷ್ಮೆಯನ್ನು ಊಜಿ ಮತ್ತು ಸುಣ್ಣ ಕಟ್ಟುರೋಗ ಬಾಧಿಸುತ್ತದೆ ಬೆಳೆಗಾರರು ಸೋಂಕು ನಿಯಂತ್ರಿಸಲು ಅಧಿಕಾರಿಗಳು ಮತ್ತು ವಿಜ್ಞಾನಿಗಳ ಸಲಹೆ ಸೂಚನೆಗಳನ್ನು ಪಾಲಿಸಿ ಉತ್ಕೃಷ್ಟವಾದ ಬೆಳೆ ತೆಗೆಯಬೇಕು ಎಂದು ರೇಷ್ಮೆ ಇಲಾಖೆ ಸಹಾಯಕ ನಿರ್ದೇಶಕ ಅಕ್ಮಲ್ ಪಾಷಾ ತಿಳಿಸಿದರು.

ನಗರದ ಸರ್ಕಾರಿ ರೇಷ್ಮೆ ಬಿತ್ತನೆ ಕೋಠಿ ಆವರಣದಲ್ಲಿ ರೇಷ್ಮೆ ಬೆಳೆಗಾರರಿಗೆ ತರಬೇತಿ ಕಾರ್ಯಾಗಾರದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ರೇಷ್ಮೆ ಕೃಷಿ ಪದ್ಧತಿಯಲ್ಲಿ ವೈಜ್ಞಾನಿಕ ವಿಧಾನ ಅಳವಡಿಸಿಕೊಳ್ಳಬೇಕು ಸಂಶೋಧನಾ ಕೇಂದ್ರಗಳ ಮೂಲಕ ಪರಿಚಯಿಸುವ ಹೊಸ ತಳಿಗಳ ಮಾಹಿತಿ ಪಡೆದು ಹವಾಗುಣಕ್ಕೆ ಅನುಗುಣವಾದ ಬೆಳೆ ಬೆಳೆಯಬೇಕು ಎಂದು ಹೇಳಿದರು.

ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ರೇಷ್ಮೆ ಮತ್ತು ಹೈನುಗಾರಿಕೆ ನೆಚ್ಚಿಕೊಂಡು ರೈತರು ಜೀವನ ನಡೆಸುತ್ತಿದ್ದಾರೆ. ಈ ಭಾಗದಲ್ಲಿ ರೇಷ್ಮೆ ಕೃಷಿ ಮಾಡುವಾಗ ಸಾಕಷ್ಟು ಎಚ್ಚರ ವಹಿಸಬೇಕು ಎಂದರು.

ವಿಜ್ಞಾನಿಗಳು ರೇಷ್ಮೆಗೆ ಬಾಧಿಸುವ ಊಜಿ ಮತ್ತು ಸುಣ್ಣ ಕಟ್ಟ ರೋಗ ಹರಡುವ ವಿಧಾನ ಮತ್ತು ಅದನ್ನು ತಡೆಗಟ್ಟಲು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ವಿವರವಾದ ಮಾಹಿತಿ ಒದಗಿಸಲಾಯಿತು. ಈ ಸಂದರ್ಭದಲ್ಲಿ ಹಿರಿಯ ವಿಜ್ಞಾನಿ ಡಾ.ಕುಲಕರ್ಣಿ, ಕೇಂದ್ರ ರೇಷ್ಮೆ ಮಂಡಳಿಯ ವೆಂಕಟರೋಣಪ್ಪ, ಎಸ್.ಸಿ.ಒ ತಿಮ್ಮಪ್ಪ, ಮೂರ್ತಿ ರೇಷ್ಮೆ ಇಲಾಖೆ ವಿಸ್ತರಣಾಧಿಕಾರಿಗಳು, ರೇಷ್ಮೆ ಬೆಳೆಗಾರರು ಹಾಗು ಸಿಬ್ಬಂದಿ ಹಾಜರಿದ್ದರು.

## ಪತ್ರಿಕಾ ಕಚೇರಿಗಳಲ್ಲಿ ಇಂಟರ್ನ್‌ಶಿಪ್ ಯೋಜನೆ

**ಚಾಮರಾಜನಗರ:** ಕರ್ನಾಟಕ ಮಾಧ್ಯಮ ಅಕಾಡೆಮಿಯು ಪತ್ರಿಕೋದ್ಯಮದಲ್ಲಿ ಸ್ನಾತಕೋತ್ತರ ಪದವಿ ಪಡೆದಿರುವ ಮಹಿಳಾ ಅಭ್ಯರ್ಥಿಗಳಿಂದ ವಿವಿಧ ಪತ್ರಿಕಾಲಯಗಳಲ್ಲಿ ತರಬೇತಿ ಪಡೆಯಲು ಅರ್ಜಿ ಆಹ್ವಾನಿಸಿದೆ.

ಒಟ್ಟು ಐವರು ಮಹಿಳಾ ಅಭ್ಯರ್ಥಿಗಳಿಗೆ ಅವಕಾಶವಿದ್ದು, ಆಯ್ಕೆಯಾದ ಅಭ್ಯರ್ಥಿಗಳಿಗೆ ಎರಡು ತಿಂಗಳ ಅವಧಿಗೆ ವಿವಿಧ ಪತ್ರಿಕಾ ಕಚೇರಿಗಳಲ್ಲಿ ತರಬೇತಿ ಪಡೆಯಲು ಅವಕಾಶ ಕಲ್ಪಿಸಲಾಗುವುದು. ತರಬೇತಿ ಅವಧಿಯಲ್ಲಿ ಮಾಸಿಕ 20,000 ರೂ. ಶಿಷ್ಯವೇತನ ನೀಡಲಾಗುವುದು.

ಅಭ್ಯರ್ಥಿಗಳು ರಾಜ್ಯದ ಯಾವುದೇ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಸ್ನಾತಕೋತ್ತರ ಪದವಿ ಪಡೆದಿರಬೇಕು. ವಯಸ್ಸು 28 ವರ್ಷ ಮೀರಿರಬಾರದು. ಅರ್ಹತಾ ಪರೀಕ್ಷೆಯ ಮೂಲಕ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಈ ಬಗ್ಗೆ ಹೆಚ್ಚಿನ ಮಾಹಿತಿಯನ್ನು ಮುಂದಿನ ದಿನಗಳಲ್ಲಿ ತಿಳಿಸಲಾಗುವುದು.

ಆಸಕ್ತ ಅಭ್ಯರ್ಥಿಗಳು ಜನವರಿ 20ರ ಒಳಗಾಗಿ ತಮ್ಮ ಸ್ವವಿವರ, ದೂರವಾಣಿ ಸಂಖ್ಯೆ, ಇ-ಮೇಲ್ ವಿಳಾಸ, ಆರ್ಥಿಕ ಸ್ಥಿತಿ, ಅಂಕಪಟ್ಟಿಗಳ ಮಾಹಿತಿಯನ್ನು ಸ್ಕ್ಯಾನ್ ಮಾಡಿ karnatakamediaacademy@gmail.com ಗೆ ಇ-ಮೇಲ್ ಮೂಲಕ ಕಳುಹಿಸಬಹುದಾಗಿದೆ ಎಂದು ಕರ್ನಾಟಕ ಮಾಧ್ಯಮ ಅಕಾಡೆಮಿಯ ಪ್ರಕಟಣೆ ತಿಳಿಸಿದೆ.

# ಉದ್ಯೋಗಾಧಾರಿತ ತರಬೇತಿ: ನೊಂದಣಿಗೆ ಆಹ್ವಾನ

**ಚಾಮರಾಜನಗರ:** ಚಾಮರಾಜನಗರ ವಿಶ್ವ ವಿದ್ಯಾಲಯ ಮತ್ತು ರೀಚ್ ಮಚ್ ಹೈಯರ್ ಸಹಯೋಗದೊಂದಿಗೆ ಉಚಿತ ಕೌಶಲ್ಯ ಅಭಿವೃದ್ದಿ ಉದ್ಯೋಗಾಧಾರಿತ ತರಬೇತಿಕಾರ್ಯ ಕ್ರಮವನ್ನು ಹಮ್ಮಿಕೊಂಡಿದ್ದು ಆಸಕ್ತರು ನೊಂದಾಯಿಸಬಹುದಾಗಿದೆ.

18 ರಿಂದ 30 ವರ್ಷ ವಯೋಮಿತಿಯ ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳು ಜನವರಿಯಿಂದ ಮಾರ್ಚ್‌ವರೆಗೆ ಒಟ್ಟು ಮೂರು ತಿಂಗಳ ಅವಧಿಗೆ ನೀಡಲಿರುವ ತರಬೇತಿಯನ್ನು ಪಡೆಯಬಹುದು. ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ಚಾಮರಾಜನಗರ ವಿಶ್ವವಿದ್ಯಾಲಯದಲ್ಲಿ ತರಬೇತಿ ನಡೆಯಲಿದೆ. ಒಂದು ಬ್ಯಾಚ್‌ನಲ್ಲಿ 25 ವಿದ್ಯಾರ್ಥಿಗಳು ಮಾತ್ರ ತರಬೇತಿ ಪಡೆಯಲು ಅವಕಾಶವಿರುತ್ತದೆ.

ಆಸಕ್ತರು https://forms.gleLgZnsejt77R5tQar9 ಮೂಲಕ ನೊಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿಪ್ರಮೋದ್ ಅವರ ಮೊ.ಸಂ 9886910296 ಸಂಪರ್ಕಿಸುವಂತೆ ಚಾ.ನಗರ ವಿವಿ.ಪ್ರಕಟಣೆ ತಿಳಿಸಿದೆ.

# ಜನಸಾಮಾನ್ಯರ ಜೀವನ ನಿರ್ವಹಣೆ ಕಷ್ಟವಾಗಲಿದೆ

ಕೆ.ಆರ್.ಪೇಟೆ.:ರಾಜ್ಯದಲ್ಲಿ ಬಸ್ ದರದ ಏರಿಕೆಯ ನಂತರ ನೀರು, ಹಾಲಿನ ದರವೂ ಏರಿಕೆಯಾಗಲಿದ್ದು ಜನಸಾಮಾನ್ಯರ ಜೀವನ ನಿರ್ವಹಣೆ ಕಷ್ಟವಾಗಲಿದೆ ಎಂದು ರಾಜ್ಯ ಸರ್ಕಾರದ ವಿರುದ್ಧ ಮಂಡ್ಯ ಸಂಸದ ಹಾಗೂ ಕೇಂದ್ರ ಉಕ್ಕು ಹಾಗೂ ಭಾರೀ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ ತಿಳಿಸಿದರು.

ಅವರು ತಾಲ್ಲೂಕಿನ ವಡಕಹಳ್ಳಿ ಗ್ರಾಮದಲ್ಲಿ ರಾಷ್ಟ್ರೀಯ ಹೆದ್ದಾರಿ ಅಡಿಯಲ್ಲಿ ಬರುವ ಆರು ಕೋಟಿ ರೂಪಾಯಿ ವೆಚ್ಚದ ರಸ್ತೆ ಕಾಮಗಾರಿಗೆ ಗುದ್ದಲಿಪೂಜೆ ಮಾಡಿ ಮಾತನಾಡಿದರು. ನಿಮ್ಮ ಆಶೀರ್ವಾದದಿಂದ ಕೇಂದ್ರದಲ್ಲಿ ಮಂತ್ರಿಯಾಗಿ ಎರಡು ಖಾತೆಗಳನ್ನು ನಿರ್ವಹಿಸುತ್ತಿದ್ದು ನನಗೆ ದೊರೆತ ಅವಧೀಯಲ್ಲಿ ಉದ್ಯೋಗಮೇಳ ಮಾಡಿ 1500 ಜನರಿಗೆ ಉದ್ಯೋಗ ಒದಗಿಸಲಾಗಿದೆ. ಗ್ರಾಮೀಣ ಪ್ರದೇಶದ ನಿರುದ್ಯೋಗಿ ಯುವಕರು ದೂರದ ಸ್ಥಳಗಳೀಗೆ ಉದ್ಯೋಗ ಅರಸಿ ಹೋಗಲು ಸಾಧ್ಯವಾಗದಿದ್ದಲ್ಲಿ ಅವರುಗಳಿಗೆ ತರಬೇತಿ ನೀಡಿ ಅವರುಗಗಳಿಗೆ ಕೆಲಸ ನೀಡುವ ಬಗ್ಗೆ ಚಿಂತನೆ ಮಾಡಲಾಗುತ್ತಿದೆ. ರಾಜ್ಯದಲ್ಲಿ ಸಂಭವಿಸುತ್ತಿರುವ ಬಾಣಂತಿಯರ ಸಾವನ್ನು ಪರಿಗಣಿಸಿ ಜಿಲ್ಲೆಯ ಎಲ್ಲಾ ತಾಲ್ಲೂಕುಗಳೀಗೆ ವಿಶೇಷ ಬಸ್ ವ್ಯವಸ್ಥೆ ಕಲ್ಪಿಸಿ ಗ್ರಾಮಗಳಿಗೆ ತೆರಳಿ ಅನಾರೋಗ್ಯಪೀಡಿತರಿಗೆ ಚಿಕಿತ್ಸೆ ನೀಡುವ ಕಾರ್ಯಕ್ರಮವನ್ನು ಜಾರಿಗೆ ತರಲು ಅಧಿಕಾರಿಗಳೊಂದಿಗೆ ಚರ್ಚಿಸಿದ್ದೇನೆ. ಕಿರಂಗೂರಿನಿಂದ ಅರಸೀಕೆರೆವರೆಗೆ ಹೆದ್ದಾರಿ ನಿರ್ಮಾಣ ಮಾಡಲು ಕ್ರಮವಹಿಸಿದ್ದು ಕೂಡಲೇ ಆಡಳಿತಾತ್ಮಕ ಮಂಜೂರಾತಿ ಸಿಗಲಿದೆ. ಚೆಕ್ ಡ್ಯಾಂ ನಿರ್ಮಾಣ ಮಾಡುವ ಮೂಲಕ ರೈತರಿಗೆ ನೀರಾವರಿ ಸೌಲಭ್ಯ ಕಲ್ಪಿಸಲು ಕ್ರಿಯಾ ಯೋಜನೆ ಸಿದ್ದಪಡಿಸಲಾಗುತ್ತಿದೆ.

ಸರ್ಕಾರದ ವಿರುದ್ಧ ವಾಗ್ದಾಳಿ.

ಈಗಿನ ಸರ್ಕಾರದಲ್ಲಿ ಆಡಳೀತ ಪಕ್ಷದ ಸದಸ್ಯರಿಗೆ ಅನುದಾನ ಮರೀಚಿಕೆಯಾಗಿದ್ದು ರಾಜ್ಯದಲ್ಲಿ ಅಭಿವೃದ್ದಿ ಕುಂಠಿತವಾಗಿದೆ. ಕಳೆದ 4-5



ವರ್ಷಗಳಿಂದಲೂ ಆಶ್ರಯಮನೆ ನೀಡುವಲ್ಲಿ ವಿಫಲವಾಗಿದೆ. 3-4 ವರ್ಷಗಳಿಂದಲೂ ತಾಪಂ ಹಾಗೂ ಜಿಪಂ ಚುನಾವಣೆಗಳನ್ನು ನಡೆಸಲು ಸಾಧ್ಯವಾಗಿಲ್ಲ. ಹದಿನೈದನೇ ಹಣಕಾಸು ಯೋಜನೆಯ ಅಡಿಯಲ್ಲಿ ಕೇಂದ್ರಸರ್ಕಾರ ನೀಡಿದ್ದ 500 ಕೋಟಿ ರೂಪಾಯಿಗಳನ್ನು ಗ್ರಾಮಪಂಚಾಯಿತಿಗಳಿಗೆ ನೀಡುವಲ್ಲಿ ವಿಫಲವಾಗಿದೆ. ರಾಜ್ಯದಲ್ಲಿ ಆಡಳಿತ ಯಂತ್ರವೇ ಕುಸಿದುಹೋಗಿದೆ. ಮೂಡಾ, ವಕ್ಫ್, ಬಾಣಂತಿಯರಸಾವು, ಅಧಿಕಾರಿಗಳ ಆತ್ಮಹತ್ಯೆ, ಗುತ್ತಿಗೆದಾರರ ಆತ್ಮಹತ್ಯೆ ಸೇರಿದಂತೆ ಹಲವು ಸಮಸ್ಯೆಗಳು ರಾಜ್ಯವನ್ನು ಭಾಧಿಸುತ್ತಿವೆ. ಹೀಗಾದಾಗ ಒಳ್ಳೆಯ ಆಡಳಿತ ನೀಡಲು ಹೇಗೆ ಸಾಧ್ಯ ಎಂದು ಪ್ರಶ್ನಿಸಿದರು.

ಪಂಚರತ್ನ ಉತ್ತಮ ಕಾರ್ಯಕ್ರಮವಾಗಿತ್ತು. ಶಿಕ್ಷಣ, ಆರೋಗ್ಯ, ಉದ್ಯೋಗ, ರೈತರಿಗೆ ಬೆಂಬಲ ಬೆಲೆ ಸೇರಿದಂತೆ ಉತ್ತಮ ಯೋಜನೆಗಳನ್ನು ನೀಡಲು ಪಂಚರತ್ನ ಕಾರ್ಯಕ್ರಮ ಆಯೋಜಿಸಿದ್ದೆ.ಆದರೆ ಜನತೆ ಅಲ್ಪ ಆಸೆಗೆ ಮರುಳಾದರು. ಈಗಿನ ಸರ್ಕಾರ ನೀಡುವ 2000 ರೂಪಾಯಿ ತೆಗೆದುಕೊಂಡು ಏನು ಮಾಡಲು ಸಾಧ್ಯ ಎಂದು ಪ್ರಶ್ನಿಸಿದ ಸಚಿವರು ರಾಜ್ಯದಲ್ಲಿ ತೆರಿಗೆ ಮೂಲಕ ಬರುವ ಆದಾಯವನ್ನು ಪ್ರಾಮಾಣಿಕವಾಗಿ ಬಳಸಿದರೆ ಉತ್ತಮ ಆಡಳಿತ ನೀಡಬಹುದು.

ಉಪವಿಭಾಗಾಧಿಕಾರಿ ಹಾಗೂ ತಹಶೀಲ್ದಾರ್ ಗೆ ಷಹಬ್ಬಾಷ್‌ಗಿರಿ. ರೈತರ ಸಂಕಷ್ಟಕ್ಕೆ ಸ್ಪಂಧಿಸುವ ಉಪವಿಭಾಗಾಧಿಕಾರಿ ಶ್ರೀನಿವಾಸ್ ಹಾಗೂ ತಹಶೀಲ್ದಾರ್ ಅಶೋಕ್ ಜನರ ಸಂಕಷ್ಟಗಳಿಗೆ ಸ್ಪಂಧಿಸುವಂಥಹ ಅಧಿಕಾರಿಗಳಾಗಿದ್ದುಜನತೆ ಅವರು ಗಳಿಂದ ಹೆಚ್ಚಿನ ಪ್ರಯೋಜನ ಪಡೆದುಕೊಳ್ಳಬೇಕು ಎಂದರು. ರಾಜ್ಯದ ಅಭಿವೃದ್ದಿ 10-15 ವರ್ಷಗಳ ಹಿಂದಕ್ಕೆ ಹೋಗಿದೆ.; ಶಾಸಕ ಹೆಚ್.ಟಿ.ಮಂಜು. ಶಾಸಕ ಹೆಚ್.ಟಿ.ಮಂಜು ಮಾತನಾಡಿ ಒಂದುಮುಕ್ಕಾಲು ವರ್ಷಗಳಿಂದ ಶಾಸಕನಾಗಿದ್ದು ಕ್ಷೇತ್ರದಲ್ಲಿನ ಹಲವಾರು ಅಭಿವೃದ್ದಿ ಕೆಲಸಗಳಿಗೆ ಅನುದಾನ ಒದಗಿಸುವಂತೆ ಹಲವಾರು ಬಾರಿ ಸಂಬಂದಿಸಿದ ಸಚಿವರುಗಳಿಗೆ, ಜಿಲ್ಲಾ ಉಸ್ತುವಾರಿ ಸಚಿವರಿಗೆ ಮತ್ತು ಮುಖ್ಯಂತ್ರಿ ಸಿದ್ದರಾಮಯ್ಯನವರಿಗೂ ಮನವಿ ಮಾಡಿಕೊಂಡಿದ್ದರೂ ತಾಲ್ಲೂಕಿನ ಅಭಿವೃದ್ದಿಗೆ ಅನುದಾನ ನೀಡುತ್ತಿಲ್ಲ. ಸರ್ಕಾರಕ್ಕೆ ತಾಲ್ಲೂಕಿಗೆ ಆಶ್ರಯಮನೆಗಳನ್ನು ನೀಡಲು ಸಾಧ್ಯವಾಗಿಲ್ಲ. ಸರ್ಕಾರದ ವಿರುದ್ಧ ಪಾದಯಾತ್ರೆ. ಸಂತೇಬಾಚಹಳ್ಳಿ ಹೋಬಳೀಯ ಕೆರೆಕಟ್ಟೆಗಳು ಒಡೆದು 2-3 ವರ್ಷಗಳು ಕಳೆದರೂ ಅವುಗಳನ್ನು ನಿರ್ಮಿಸುವಂತೆ ಮನವಿ ಸಲ್ಲಿಸಿದ್ದರೂ ಯಾವುದೇ ಪ್ರಯೋಜನವಾಗಿಲ್ಲ ಸರ್ಕಾರದ ಈ ಕ್ರಮದ ವಿರುದ್ಧ ಸಂತೇಬಾಚಹಳ್ಳಿ ಹೋಬಳಿಯ ಜನತೆ ಮಾರ್ಚಿ ತಿಂಗಳಿನಲ್ಲಿ ಸಂತೆಬಾಚಹಳ್ಳಿಯಿಂದ ಮಂಡ್ಯದ ವರೆಗೆ ಪಾದಯಾತ್ರೆ ಕೈಗೊಳ್ಳಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಉಪವಿಭಾಗಾಧಿಕಾರಿ ಶ್ರೀನಿವಾಸ್, ತಾಲ್ಲೂಕು ಜೆಡಿಎಸ್ ಅಧ್ಯಕ್ಷ ಜಾನಕಿರಾಮು, ಕೋಟೇಗೌಡ, ಬಿ.ಎಂ.ಕಿರಣ್, ಕೃಷ್ಣೇಗೌಡ, ಫೆಡರೇಷನ್ ನಿರ್ದೇಶಕ ಎಸ್.ಎಲ್. ಮೋಹನ್, ವಕೀಲ ಧನಂಜಯ, ಶಿಶುಪಾಲ್, ಮಂಜೇಗೌಡ, ಚಂದ್ರಣ್ಣ ಸೇರಿದಂತೆ ಹಲವರಿದ್ದರು.

# ಸಂವಿಧಾನದ ತಂಟೆಗೆ ಬಂದರೆ ರಕ್ತ ಕ್ರಾಂತಿ

**ಮುಳಬಾಗಿಲು:** ಸಂವಿಧಾನದ ತಂಟೆಗೆ ಬಂದರೆ ರಕ್ತ ಕ್ರಾಂತಿ ಸೃಷ್ಠಿ ಆಗುತ್ತದೆ. ಸಂವಿಧಾನ ಎಂಬುದು ಬಡವರ ಶಕ್ತಿ ಅದನ್ನು ಮುಟ್ಟಿದರೆ ಭಸ್ಮ ವಾಗುತ್ತದೆ ಎಂದು ಸಂವಿಧಾನ ವಿರೋಧಿ ರಾಜಕೀಯ ವ್ಯಕ್ತಿಗಳಿಗೆ ರೈತ ಸಂಘದ ರಾಜ್ಯ ಉಪಾದ್ಯಕ್ಷ ಕೆ.ನಾರಾಯಣಗೌಡ ಎಚ್ಚರಿಕೆ ನೀಡಿದರು. ಬಾಬಾ ಸಾಹೇಬ್ ಆಂಬೇಡ್ಕರ್‌ರವರ ಬಗ್ಗೆ ಅವಹೇಳನಕಾರಿ ಪದವನ್ನು ಬಳಸಿರುವ ಕೇಂದ್ರದ ಗೃಹಮಂತ್ರಿ ಅಮೀತ್ ಶಾ ರವರನ್ನು ಸಚಿವ ಸಂಪುಟದಿಂದ ಕೈಬಿಡಬೇಕೆಂದು ಉಪ ವಿಭಾಗಧಿಕಾರಿಗಳ ಮುಖಾಂತರ ಮಾನ್ಯ ಪ್ರಧಾನ ಮಂತ್ರಿಗಳಿಗೆ ಮನವಿ ನೀಡಿ ಒತ್ತಾಯಿಸಲಾಯಿತು.

ಸಂವಿಧಾನದ ಅಡಿಯಲ್ಲಿ ಆಯ್ಕೆ ಆಗಿ ಅಧಿಕಾರವನ್ನು ಅನುಭವಿಸುತ್ತಿರುವ ಕೇಂದ್ರದ ಜವಬ್ದಾರಿ ಸ್ಥಾನದಲ್ಲಿರುವ ಗೃಹಮಂತ್ರಿಗಳಾದ ಅಮೀತ್‌ಶಾ ರವರು ಸಂಸತ್ ಭವನದಲ್ಲಿ ತಮ್ಮ ಎಲುಬಿಲ್ಲದ ನಾಲಿಗೆಯಲ್ಲಿ ಅನಕ್ಷಸ್ಥರಂತೆ ಬಾಬಾ ಸಾಹೇಬ್ ಆಂಬೇಡ್ಕರ್‌ರವರನ್ನು ಪ್ರತಿನಿತ್ಯ ಜ್ಞಾನಿಸುವ ಬದಲು ದೇವರನ್ನು ಸ್ಮರಿಸಿದರೆ ಸ್ವರ್ಗ ಪ್ರಾಪ್ತವಾಗುತ್ತದೆ ಎಂದು ಹೇಳುವ ಮುಖಾಂತರ ಇಡೀ ದೇಶದಲ್ಲಿಯೇ ಅಶಾಂತಿ ಸೃಷ್ಠಿಗೆ ಕಾರಣರಾಗಿರುವ ಇವರನ್ನು ಕೂಡಲೇ ಸಚಿವ ಸಂಪುಟದಿಂದ ಕೈಬಿಟ್ಟು 140 ಕೋಟಿ ಜನರನ್ನು ಬಹಿರಂಗ ಕ್ಷಮೆ ಕೇಳಬೇಕೆಂದು ಒತ್ತಾಯಿಸಿದರು.

ಕಟ್ಟಕಡೆಯ ಪ್ರಜೆಗೆ ಶಿಕ್ಷಣ ನೀಡುವ ಆಶಾದಾಯಕ ಮಹಿಳೆಯರಿಗೆ ಎಲ್ಲಾ ಕ್ಷೇತ್ರಗಳಲ್ಲಿ ಸಮಾನ ಹಕ್ಕುನ್ನು ನೀಡಿದ ಮಹಾನುಭವ ರೈತ, ಕೂಲಿಕಾರ್ಮಿಕರ ಹಕ್ಕುಗಳನ್ನು ಪಡೆಯಲು ನೀಡಿರುವ ಸಂವಿಧಾನವೂ ಪ್ರತಿಯೊಬ್ಬ ಭಾರತಿಯರಿಗೂ ಜಾತಿ,ಮತ, ಪಂಥಗಳ ಬೇದ ಬಾವ ಇಲ್ಲವೇ ಅಭಿವ್ಯಕ್ತಿ ಸ್ವಾತಂತ್ರ್ಯ, ವಾಕ್ ಸ್ವಾತಂತ್ರ್ಯ, ವಿಚಾರ ಸ್ವಾತಂತ್ರ್ಯ, ಮತ್ತು ವಿಚಾರ ಬಿನ್ನತೆಯ ಸ್ವತಂತ್ರ ನೀಡಿದ್ದು ಬಾಬಾ ಸಾಹೇಬ್ ರವರು ಕೊಟ್ಟಿರುವ ಸಂವಿಧಾನವೇ ಹೊರತು ಸಂವಿಧಾನದ ಹೆಸರಿನಲ್ಲಿ ಅಧಿಕಾರ ಹಿಡಿಯುವ ಸರ್ಕಾರಗಳಲ್ಲ ಎಂದು ಕಿಡಿ ಕಾರಿದರು.

ತಾಲ್ಲೂಕು ಪ್ರ.ಕಾರ್ಯದರ್ಶಿ ರಾಜೇಶ್ ಮಾತನಾಡಿ ಒಂದು ಕಡೆ ಸಂವಿಧಾನ ಬದಲಾವಣೆ ಮಾಡುತ್ತೇವೆಂದು ಬಿ.ಜೆ.ಪಿ ರವರು ಹೇಳಿಕೆ ನೀಡಿ ಅಶಾಂತಿ ಸೃಷ್ಠಿ ಮಾಡುತ್ತಾರೆ. ಮತ್ತೊಂದೆಡೆ ಸಂವಿಧಾನದ ಬಗ್ಗೆ ಗೌರವ ಇದೆ ಎಂದು ಮತ್ತೊಂದೆಡೆ ಅಪಮಾನದ ಮಾತುಗಳನ್ನು ಆಡುತ್ತಾರೆಂದು ರಾಜಕೀಯ ವ್ಯಕ್ತಿಗಳ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

ಸಮಾಜದಲ್ಲಿ ಎಲ್ಲಾ ಕ್ಷೇತ್ರಗಳಲ್ಲಿ ಕಟ್ಟಕಡೆಯ ವ್ಯಕ್ತಿಗೆ ನ್ಯಾಯ ಸಿಗುತ್ತದೆ ಎಂದರೆ ಅದು ದೇವರಿಂದಲ್ಲ ಬಾಬಾ ಸಾಹೇಬ್ ಆಂಬೇಡ್ಕರ್ ನೀಡಿರುವ ಸಂವಿಧಾನದಲ್ಲಿ ಎಂದು ಅಕ್ಷರಸ್ಥ ರಾಜಕಾರಣಿಗಳು ಮನವರಿಕೆ ಮಾಡಿಕೊಳ್ಳಬೇಕು ಇಲ್ಲವಾದರೆ ರಾಜಕೀಯ ವ್ಯಕ್ತಿಗಳ ವಿರುದ್ಧ ಜನಸಾಮಾನ್ಯರು ದಂಗೆ ಏಳುವ ಕಾಲ ದೂರವಿಲ್ಲ ಎಂದು ಎಚ್ಚರಿಕೆಯೊಂದಿಗೆ ಮನವಿ ನೀಡಿ ಒತ್ತಾಯಿಸಿದರು. ಮನವಿ ಸ್ವೀಕರಿಸಿ ಮಾತನಾಡಿದ ಉಪ ವಿಭಾಗಧಿಕಾರಿಗಳಾದ ಮೈತ್ರಿ ಹಾಗೂ ತಹಶೀಲ್ದಾರ್ ಗೀತಾ ರವರು ನಿಮ್ಮ ಮನವಿಯನ್ನು ಸರ್ಕಾರಕ್ಕೆ ಕಳುಹಿಸವ ಭರವಸೆ ನೀಡಿದರು.

ಮನವಿ ನೀಡುವಾಗ ಜಿಲ್ಲಾದ್ಯಕ್ಷ ಈಕಂಬಳ್ಳಿ ಮಂಜುನಾಥ್, ಪಾರುಕ್‌ಪಾಷ, ಸುನಿಲ್‌ಕುಮಾರ್, ಭಾಸ್ಕರ್, ಸುಪ್ರೀಂಚಲ, ಶ್ರೀನಿವಾಸ್, ಜುಬೇರ್‌ಪಾಷ, ಹೆಬ್ಬಣಿ ಆನಂದರೆಡ್ಡಿ, ಯಲುವಳ್ಳಿ ಪ್ರಭಾಕರ್, ಧರ್ಮ, ಗಿರೀಶ್, ಮುಂತಾದವರಿದ್ದರು.



# ಶಿಕ್ಷಣದಲ್ಲಿ ಮತ್ತಷ್ಟು ಕೋರ್ಸ್‌ಗಳನ್ನು ತರುವ ಯೋಜನೆ

**ಶಿಡ್ಲಘಟ್ಟ:** ಮುಂದಿನ ಪೀಳಿಗೆಗೆ ಶಿಕ್ಷಣದ ದೃಷ್ಟಿಯಲ್ಲಿಟ್ಟುಕೊಂಡು ಯೋಜನೆಗಳನ್ನು ರೂಪಿಸಿ ತರಗತಿ ಕೊಠಡಿಗಳನ್ನು ದೊಡ್ಡದಾಗಿ ಮಾಡಿ ಮತ್ತಷ್ಟು ಕೋರ್ಸ್‌ಗಳನ್ನು ತರಬೇಕೆಂದು ಯೋಜನೆ ಇದೆ ಎಂದು ಉನ್ನತ ಶಿಕ್ಷಣ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ ಸಿ ಸುಧಾಕರ್ ತಿಳಿಸಿದರು.

ನಗರದ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಹೆಚ್ಚುವರಿ ಕೊಠಡಿಗಳ ಸ್ಥಾಪನೆಗೆ 2023-24ನೇ ಸಾಲಿನಲ್ಲಿ ಸರ್ಕಾರ 3 ಕೋಟಿ ರೂ.ಗಳು ಅನುದಾನ ನೀಡಿದ್ದು ಟೆಂಡರ್ ಪ್ರಕ್ರಿಯೆ ತಡವಾಗಿತ್ತು ಇದೀಗ ಅದು ಪ್ರಾರಂಭವಾಗಿದ್ದು ಸ್ಥಳ ವೀಕ್ಷಣೆ ಮಾಡಿ ಅವರು ಮಾತನಾಡಿದರು.

ಈ ಹಿಂದೆ ಕಟ್ಟಡ ನಿರ್ಮಾಣ ಸಂದರ್ಭದಲ್ಲಿ ಅವೈಜ್ಞಾನಿಕವಾಗಿ ಕಟ್ಟಡಗಳನ್ನು ನಿರ್ಮಿಸಿದ್ದಾರೆ. ಆ ರೀತಿ ಆಗಬಾರದು ಎಂದು ವಾಸ್ತು ಸ್ಥಿತಿಯನ್ನು ಪರಿಶೀಲಿಸಿ ರೂಪು-ರೇಷಗಳನ್ನು ಪರಿಶೀಲಿಸಿದ್ದು ಮೊದಲೇ ಪೂರ್ವ ಯೋಜನೆ ತಯಾರಿಸಬೇಕು ಎಂದು ವಿನ್ಯಾಸಗಾರರನ್ನು ಕಳಿಸಿದ್ದೆ ಮಾಸ್ಟರ್ ಪ್ಲಾನ್ ಮಾಡಿ ಮುಂದಿನ ದಿನಗಳಲ್ಲಿ ಬರುವ ಅನುದಾನಗಳನ್ನು ಸೂಕ್ತ ರೀತಿಯಲ್ಲಿ ಉಪಯೋಗಿಸುವ ರೀತಿಯಲ್ಲಿ ಪಟ್ಟಿ ತಯಾರಿಸಲಾಗಿದೆ ಎಂದು ಹೇಳಿದರು.

ಇದೇ ವೇಳೆ ಉನ್ನತ ಶಿಕ್ಷಣ ಸಚಿವರಾದ ಡಾ.ಎಂ.ಸಿ.ಸುಧಾಕರ್ ಹಾಗು ಶಾಸಕರಾದ ಬಿ.ಎನ್.ರವಿ ಕುಮಾರ್ ಅವರು ಹಳೆಯ ಕೊಠಡಿಗಳನ್ನು ವೀಕ್ಷಿಸಿ ಅವುಗಳ ವಸ್ತು ಸ್ಥಿತಿಯನ್ನು ಪರಿಶೀಲಿಸಿದರು.



**ಶಿಡ್ಲಘಟ್ಟ ತಾಲ್ಲೂಕಿನಲ್ಲಿ ಬೆಂಗಳೂರು ಉತ್ತರ ವಿಶ್ವವಿದ್ಯಾಲಯವು ವೇಗವಾಗಿ 88 ಕೋಟಿ ರೂ.ಗಳ ಅನುದಾನದಿಂದ ಕಾಮಗಾರಿ ನಡೆಯುತ್ತಿದ್ದು, ಎರಡನೇ ಹಂತದ 110 ಕೋಟಿ ರೂ.ಗಳ ಅನುದಾನವನ್ನು ಸಂಪುಟ ಗಮನಕ್ಕೆ ತಂದು ಆಡಳಿತಾತ್ಮಕವಾಗಿಅನುಮೋದನೆ ಪಡೆದುಕೊಂಡು ಮೂರು-ನಾಲ್ಕು ತಿಂಗಳಲ್ಲಿ ಕಾಮಗಾರಿ ಪ್ರಾರಂಭ ಮಾಡಲಿದ್ದೇವೆ ಎಂದರು.**

ಯಾವುದೇ ಪಕ್ಷಭೇದ ಇಲ್ಲದೆ ನಮ್ಮ ಜಿಲ್ಲೆಗೆ ಹೆಚ್ಚಿನ ಅನುದಾನ ನೀಡಿ ಅಭಿವೃದ್ಧಿಗೆ ಸಹಕರಿಸುತ್ತೇನೆ ಹೈಟೆಕ್ ಗೂಡು ಮಾರುಕಟ್ಟೆ ನಿರ್ಮಿಸಲು ಮುಂದಿನ ದಿನಗಳಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸಮ್ಮುಖದಲ್ಲಿ ಶಂಕುಸ್ಥಾಪನೆ ಮಾಡಲು ಯೋಜನೆ ರೂಪಿಸಿದ್ದೇವೆ ಜತೆಗೆ ತಾಲ್ಲೂಕಿನಲ್ಲಿ ಹಲವು ಇಲಾಖೆಗಳ ಕಟ್ಟಡಗಳ ಉದ್ಘಾಟನೆ ಮಾಡಲು ಮುಂದಿನ ದಿನಗಳಲ್ಲಿ ದಿನಾಂಕ ನಿಗಧಿ ಮಾಡಿ ಅಂದೇ ಕಾಲೇಜು ಕಟ್ಟಡಗಳ ಶಂಕು ಸ್ಥಾಪನೆ ಮಾಡಲಿದ್ದೇವೆ ಎಂದರು.

ಈ ಸಂದರ್ಭದಲ್ಲಿ ಶಾಸಕರಾ ಬಿ.ಎನ್.ರವಿಕುಮಾರ್, ನಗರಸಭೆ ಅದ್ಯಕ್ಷ ಎಂ.ವಿ.ವೆಂಕಟಸ್ವಾಮಿ, ಮುಖಂಡರಾದ ಬಂಕ್ ಮುನಿಯಪ್ಪ,ಕೆಪಿಸಿಸಿ ಸಂಯೋಜಕರಾದ ರಾಜೀವ್ ಗೌಡ.ತಾದೂರು ರಘು, ತಾಲ್ಲೂಕು ಪಂಚಾಯತಿ ಇಒ ಆರ್. ಹೇಮಾವತಿ, ಪೌರಾಯುಕ್ತ ಮಂಜುನಾಥ್, ಸರ್ಕಲ್ ಇನ್ಸ್ ಪೆಕ್ಟರ್ ಶ್ರೀನಿವಾಸ್, ನಗರ ಠಾಣೆ ಪಿಎಸ್‌ಐ ವೇಣುಗೋಪಾಲ್, ಡಾ.ಜಿ.ಮುರಳಿಆನಂದ್, ಡಾ.ವೆಂಕಟೇಶ್, ಡಾ.ಶಫೀ, ಸ್ಥಳಿಯ ಮುಖಂಡರಾದ ಎಸ್.ಎಂ.ರಮೇಶ್, ನವೀನ್, ರಾಮಚಂದ್ರಪ್ಪ ಮುಂತಾದವರು ಹಾಜರಿದ್ದರು.

# ಕರಡು ಪ್ರಸ್ತಾವನೆ: ಮಕ್ಕಳ ಸಾಮಾಜಿಕ ಮಾಧ್ಯಮ ಖಾತೆಗಳಿಗೆ ಪೋಷಕರ ಒಪ್ಪಿಗೆ ಕಡ್ಡಾಯ

**ನವದೆಹಲಿ:** ಬಹು ನಿರೀಕ್ಷಿತ ಡಿಜಿಟಲ್ ಪರ್ಸನಲ್ ಡೇಟಾ ಪ್ರೊಟೆಕ್ಷನ್ (ಡಿಪಿಡಿಪಿ)–2025ರ ಕರಡನ್ನು ಕೇಂದ್ರ ಸರ್ಕಾರ ಬಿಡುಗಡೆ ಮಾಡಿದೆ. ಇದರಲ್ಲಿ ಅಪ್ರಾಪ್ತ ಮಕ್ಕಳು ಮತ್ತು ವಿಕಲಚೇತನರ ವೈಯಕ್ತಿಕ ಡೇಟಾದ ರಕ್ಷಣೆಗೆ ಒತ್ತು ನೀಡಲಾಗಿದೆ. ಆದರೂ ಅದರ ಉಲ್ಲಂಘನೆ ಕುರಿತು ದಂಡನಾತ್ಮಕ ಕ್ರಮದ ಬಗ್ಗೆ ಯಾವುದೇ ಉಲ್ಲೇಖವಿಲ್ಲ.

ಡ್ರಾಫ್ಟ್ ಪ್ರಕಾರ, ಮಕ್ಕಳ ಡೇಟಾದ ಯಾವುದೇ ಬಳಕೆಗೆ ಪೋಷಕರ ಒಪ್ಪಿಗೆ ಕಡ್ಡಾಯವಾಗಿರುತ್ತದೆ. ಅಂದರೆ ಪೋಷಕರ ಒಪ್ಪಿಗೆಯಿಲ್ಲದೆ, ಯಾವುದೇ ಡೇಟಾ ವಿಶ್ವಾಸಾರ್ಹರು (ವೈಯಕ್ತಿಕ ಡೇಟಾವನ್ನು ಸಂಗ್ರಹಿಸುವ ಮತ್ತು ಬಳಸುವ ಸಂಸ್ಥೆಗಳು) ಮಕ್ಕಳ ಡೇಟಾವನ್ನು ಬಳಸಲು ಸಾಧ್ಯವಾಗುವುದಿಲ್ಲ ಎಂದು ಹೇಳಿದೆ.

ಸುಮಾರು 14 ತಿಂಗಳ ಹಿಂದೆ ಡಿಜಿಟಲ್ ಪರ್ಸನಲ್ ಡೇಟಾ ಪ್ರೊಟೆಕ್ಷನ್ ಆಕ್ಟ್–2023 ಅನ್ನು ಸಂಸತ್ತು ಅನುಮೋದಿಸಿದ ನಂತರ ಕರಡು ನಿಯಮಗಳನ್ನು ಸಾರ್ವಜನಿಕ ಸಮಾಲೋಚನೆಗಾಗಿ ಬಿಡುಗಡೆ ಮಾಡಲಾಗಿದೆ. ಕರಡುಗಳು ಒಥಿಉಐಅ ವೆಬ್‌ಸೈಟ್‌ನಲ್ಲಿ ಲಭ್ಯವಿದೆ. ಡಿಜಿಟಲ್ ವೈಯಕ್ತಿಕ ಡೇಟಾದ ರಕ್ಷಣೆಗಾಗಿ ಕಾನೂನು ಚೌಕಟ್ಟನ್ನು ಬಲಪಡಿಸುವುದು ಇದರ ಉದ್ದೇಶವಾಗಿದೆ. ಕರಡು ನಿಯಮಗಳು ಡಿಜಿಟಲ್ ಡೇಟಾ ಪ್ರೊಟೆಕ್ಷನ್ ಆಕ್ಟ್, 2023ರ ಅಡಿಯಲ್ಲಿ ವ್ಯಕ್ತಿಗಳ ಒಪ್ಪಿಗೆ, ಡೇಟಾ ಸಂಸ್ಕರಣಾ ಸಂಸ್ಥೆಗಳು ಮತ್ತು ಪ್ರಾಧಿಕಾರಗಳ ಕಾರ್ಯನಿರ್ವಹಣೆಗೆ ಸಂಬಂಧಿಸಿದ ನಿಬಂಧನೆಗಳನ್ನು ರೂಪಿಸುತ್ತವೆ. ನಿಯಮಗಳು ವ್ಯಕ್ತಿಗಳಿಂದ ಸ್ಪಷ್ಟ ಒಪ್ಪಿಗೆಯನ್ನು ಪಡೆಯಲು ಯಾಂತ್ರಿಕ ವ್ಯವಸ್ಥೆಗೆ ಕರೆ ನೀಡುತ್ತವೆ. ಇದಕ್ಕೆ ಫೆಬ್ರವರಿ 18ರ ನಂತರ ಅಂತಿಮ ರೂಪ ಕೊಡಲಿದ್ದೇವೆ ಎಂದು ಡ್ರಾಫ್ಟ್ ಕಮಿಟಿ ಹೇಳಿದೆ.

ಶಿಕ್ಷಾರ್ಹ ಕ್ರಮಕ್ಕೆ ಅವಕಾಶವಿಲ್ಲ : ಕರಡು ಪ್ರತಿಯ ಪ್ರಕಾರ ಮಗುವಿನ ಪೋಷಕರೆಂದು ಗುರುತಿಸಿಕೊಳ್ಳುವ ವ್ಯಕ್ತಿಯು ವಯಸ್ಕ ಮತ್ತು ಭಾರತದಲ್ಲಿ ಜಾರಿಯಲ್ಲಿರುವ ಕಾನೂನಿಗೆ ಬದ್ಧನಾಗಿದ್ದಾನೆ ಎಂದು ಡೇಟಾ ವಿಶ್ವಾಸಾರ್ಹರು ಪರಿಶೀಲಿಸಬೇಕಾಗುತ್ತದೆ. ಡೇಟಾ ನಿಷ್ಠಾವಂತರು ಮಕ್ಕಳ ಡೇಟಾವನ್ನು ಒಪ್ಪಿಗೆ ನೀಡಿದ ಅವಧಿಗೆ ಮಾತ್ರ ಇರಿಸಿಕೊಳ್ಳಲು ಸಾಧ್ಯವಾಗುತ್ತದೆ. ಇದರ ನಂತರ ಅದನ್ನು ತೆಗೆದುಹಾಕಬೇಕಾಗುತ್ತದೆ.

ಕರಡು ನಿಯಮಗಳ ಕೆಲವು ಪ್ರಮುಖ ಅಂಶಗಳು : ಗ್ರಾಹಕರು ತಮ್ಮ ಡೇಟಾದ ಮೇಲೆ ಹೆಚ್ಚಿನ ನಿಯಂತ್ರಣವನ್ನು ಪಡೆಯುತ್ತಾರೆ. ಬಳಕೆದಾರರು ತಮ್ಮ ಡೇಟಾವನ್ನು ಡಿಲಿಟ್ ಮಾಡುವಂತೆ ಕೇಳಲು ಸಾಧ್ಯವಾಗುತ್ತದೆ. ಕಂಪನಿಗಳು ತಮ್ಮ ವೈಯಕ್ತಿಕ




ಡೇಟಾದ ಬಗ್ಗೆ ಹೆಚ್ಚು ಪಾರದರ್ಶಕವಾಗಿರಬೇಕು. ತಮ್ಮ ಡೇಟಾವನ್ನು ಏಕೆ ಸಂಗ್ರಹಿಸಲಾಗುತ್ತಿದೆ ಎಂದು ಕೇಳುವ ಹಕ್ಕನ್ನು ಗ್ರಾಹಕರು ಹೊಂದಿರುತ್ತಾರೆ. ಡೇಟಾ ಉಲ್ಲಂಘನೆಗಾಗಿ 250 ಕೋಟಿ ರೂ.ವರೆಗೆ ದಂಡ ವಿಧಿಸಬಹುದಾಗಿದೆ.

ನಿಯಮಗಳು ಹೇಳಿದ್ದೇನು?

ಗ್ರಾಹಕ ಸಂರಕ್ಷಣಾ ಕಾಯ್ದೆ, 2019ರ ಅಡಿಯಲ್ಲಿ ಡಿಜಿಟಲ್ ಪ್ಲಾಟ್‌ಫಾರ್ಮ್ ಅನ್ನು ಹೊಂದಿರುವ ಅಥವಾ ನಿರ್ವಹಿಸುವ ಯಾವುದೇ ವ್ಯಕ್ತಿಯನ್ನು 'ಇ–ಕಾಮರ್ಸ್ ಯುನಿಟ್' ಎಂದು ನಿಯಮಗಳು ವ್ಯಾಖ್ಯಾನಿಸುತ್ತವೆ. ಆದರೆ ಇಲ್ಲಿ ವಿವರಿಸಿದಂತೆ ಇ–ಕಾಮರ್ಸ್ ಯುನಿಟ್ ಮಾರುಕಟ್ಟೆಯಲ್ಲಿ ಮಾರಾಟಕ್ಕೆ ಅಲ್ಲ, ಸರಕು ಅಥವಾ ಸೇವೆಗಳಿಗೆ ಮಾತ್ರ ಎಂಬುದು ಗಮನಾರ್ಹ.

ಆನ್‌ಲೈನ್ ಗೇಮಿಂಗ್ ಮಧ್ಯವರ್ತಿಗಳು: ಕರಡು ನಿಯಮಗಳ ಪ್ರಕಾರ, 'ಆನ್‌ಲೈನ್ ಗೇಮಿಂಗ್ ಮಧ್ಯವರ್ತಿ' ಎಂದರೆ ಅದರ ಕಂಪ್ಯೂಟರ್ ಸಂಪನ್ಮೂಲದ ಬಳಕೆದಾರರಿಗೆ ಒಂದು ಅಥವಾ ಹೆಚ್ಚಿನ ಆನ್‌ಲೈನ್ ಆಟಗಳನ್ನು ಪ್ರವೇಶಿಸಲು ಅನುವು ಮಾಡಿಕೊಡುವ ಮಧ್ಯವರ್ತಿ ಎಂದರ್ಥ.

'ಸಾಮಾಜಿಕ ಮಾಧ್ಯಮ ಮಧ್ಯವರ್ತಿ' ಎಂದರೆ ಮಾಹಿತಿ ತಂತ್ರಜ್ಞಾನ ಕಾಯ್ದೆ, 2000 ರ (21 ರ 2000) ನಿಬಂಧನೆಗಳ ಪ್ರಕಾರ, ಇದು ಪ್ರಾಥಮಿಕವಾಗಿ ಅಥವಾ ಕೇವಲ ಎರಡು ಅಥವಾ ಹೆಚ್ಚಿನ ಬಳಕೆದಾರರ ನಡುವೆ ಆನ್‌ಲೈನ್ ಸಂವಹನವನ್ನು ಸಕ್ರಿಯಗೊಳಿಸುತ್ತದೆ ಮತ್ತು ಅದರ ಸೇವೆಗಳನ್ನು ಬಳಸಿಕೊಂಡು ಮಾಹಿತಿಯನ್ನು ರಚಿಸಲು, ಅಪ್‌ಲೋಡ್ ಮಾಡಲು, ಹಂಚಿಕೊಳ್ಳಲು, ರವಾನಿಸಲು ಅನುವು ಮಾಡಿಕೊಡುತ್ತದೆ.

ಕರಡು ಆಕಆಕ ಕಾಯ್ದೆಯಲ್ಲಿ ಏನಿದೆ? ಡಿಜಿಟಲ್ ವೈಯಕ್ತಿಕ ಡೇಟಾ ಸಂರಕ್ಷಣಾ ಕಾಯ್ದೆ, 2023 (22 ರ 2023) ರ ಉಪ–ವಿಭಾಗಗಳು (1) ಮತ್ತು (2) ಸೆಕ್ಷನ್ 40 ರ (2023 ರ 22) ರ ಮೂಲಕ ನೀಡಲಾದ ಅಧಿಕಾರಗಳ ಅನುಷ್ಠಾನದಲ್ಲಿ, ಕೇಂದ್ರ ಸರ್ಕಾರವು ಅನುಷ್ಠಾನಕ್ಕೆ ನಿಬಂಧನೆಗಳನ್ನು ಮಾಡುತ್ತದೆ. ಅಧಿನಿಯಮವು ಅಂತಹ ಪ್ರಾರಂಭದ ದಿನಾಂಕದಂದು ಅಥವಾ ನಂತರ ಮಾಡಬೇಕಾದ ಉದ್ದೇಶಿತ ನಿಯಮಗಳ ಕರಡನ್ನು ಅದರ ಅಡಿಯಲ್ಲಿ ಪೀಡಿತ ಎಲ್ಲಾ ವ್ಯಕ್ತಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ. ಕರಡು ನಿಯಮಗಳು ಡಿಜಿಟಲ್ ಡೇಟಾ ಪ್ರೊಟೆಕ್ಷನ್ ಆಕ್ಟ್, 2023 ರ ಅಡಿಯಲ್ಲಿ ವ್ಯಕ್ತಿಗಳ ಸಮ್ಮತಿಯನ್ನು ಪ್ರಕ್ರಿಯೆಗೊಳಿಸಲು, ಡೇಟಾ ಸಂಸ್ಕರಣಾ ಸಂಸ್ಥೆಗಳು ಮತ್ತು ಪ್ರಾಧಿಕಾರಗಳ ಕಾರ್ಯನಿರ್ವಹಣೆಗೆ ಸಂಬಂಧಿಸಿದ ನಿಬಂಧನೆಗಳನ್ನು ರೂಪಿಸುತ್ತವೆ.

ಕರಡು ನಿಯಮಗಳ ಪರಿಗಣನೆ ಯಾವಾಗ? ಫೆಬ್ರವರಿ 18, 2025 ರ ನಂತರ ಹೇಳಲಾದ ಕರಡು ನಿಯಮಗಳನ್ನು ಪರಿಗಣಿಸಲಾಗುವುದು ಎಂದು ಈ ಮೂಲಕ ತಿಳಿಸಲಾಗಿದೆ ಎಂದು ಅಧಿಸೂಚನೆಯಲ್ಲಿ ತಿಳಿಸಲಾಗಿದೆ. ಕರಡು ನಿಯಮಗಳು ಡಿಜಿಟಲ್ ಪರ್ಸನಲ್ ಡೇಟಾ ಪ್ರೊಟೆಕ್ಷನ್ ಆಕ್ಟ್, 2023 ರ ಅಡಿಯಲ್ಲಿ ಮಂಜೂರಾದ ಪೆನಾಲ್ಟಿಗಳನ್ನು ಉಲ್ಲೇಖಿಸುವುದಿಲ್ಲ. ವೈಯಕ್ತಿಕ ಡೇಟಾವನ್ನು ಪ್ರಕ್ರಿಯೆಗೊಳಿಸುವ ಉದ್ದೇಶಗಳು ಮತ್ತು ವಿಧಾನಗಳನ್ನು ನಿರ್ಧರಿಸಲು ಜವಾಬ್ದಾರರಾಗಿರುವ ಡೇಟಾ ವಿಶ್ವಾಸಾರ್ಹರಿಗೆ – ಘಟಕಗಳಿಗೆ 250 ಕೋಟಿ ರೂಪಾಯಿಗಳವರೆಗೆ ದಂಡವನ್ನು ವಿಧಿಸುವ ಅವಕಾಶವನ್ನು ಕಾಯ್ದೆ ಹೊಂದಿದೆ.

## ಕೇಂದ್ರದ ಅಧಿಕಾರಿಗಳ ವಿರುದ್ಧ ಎಫ್‌ಐಆರ್

### ಸಿಬಿಐಗೆ ರಾಜ್ಯಗಳ ಅನುಮತಿ ಬೇಕಿಲ್ಲ: ಸುಪ್ರೀಂ ಮಹತ್ವದ ಆದೇಶ

**ನವದೆಹಲಿ:** ವಿವಿಧ ರಾಜ್ಯಗಳ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕೇಂದ್ರ ಸರ್ಕಾರದ ಅಧಿಕಾರಿಗಳ ವಿರುದ್ಧ ಎಫ್‌ಐಆರ್ ದಾಖಲಿಸಲು ಸಿಬಿಐಗೆ ರಾಜ್ಯ ಸರ್ಕಾರಗಳ ಅನುಮತಿ ಪಡೆಯುವ ಅಗತ್ಯವಿಲ್ಲ ಎಂದು ಸುಪ್ರೀಂ ಕೋರ್ಟ್ ಮಹತ್ವದ ತೀರ್ಪು ನೀಡಿದೆ.

ಭ್ರಷ್ಟಾಚಾರದ ಆರೋಪ ಸಂಬಂಧ ಆಂಧ್ರ ಪ್ರದೇಶದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಇಬ್ಬರು ಕೇಂದ್ರದ ಅಧಿಕಾರಿಗಳ ವಿರುದ್ಧ ಸಿಬಿಐ ತನಿಖೆಯನ್ನು ಆಂಧ್ರಪ್ರದೇಶ ಹೈಕೋರ್ಟ್ ರದ್ದುಗೊಳಿಸಿತ್ತು. ಆದರೆ ಹೈಕೋರ್ಟ್ ಆದೇಶವನ್ನೇ ಈಗ ಸುಪ್ರೀಂ ಕೋರ್ಟ್ ರದ್ದುಪಡಿಸಿದೆ.

ಕೇಂದ್ರ ಸರ್ಕಾರಿ ನೌಕರರು ಮತ್ತು ಅಧಿಕಾರಿಗಳು ಗಂಭೀರ ಆರೋಪವನ್ನು ಎದುರಿಸುತ್ತಿರುವಾಗ ಅವರು ಯಾವ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂಬುದು ಮುಖ್ಯವಾಗುವುದಿಲ್ಲ ಎಂದು ನ್ಯಾಯಮೂರ್ತಿ ಸಿಟಿ ರವಿಕುಮಾರ್ ಮತ್ತು ರಾಜೇಶ್ ಬಿಂದಲ್ ಅವರಿದ್ದ ನ್ಯಾಯಪೀಠ ಹೇಳಿದೆ.

**ಏನಿದು ಪ್ರಕರಣ:** ಆಂಧ್ರಪ್ರದೇಶದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಕೇಂದ್ರ ಸರ್ಕಾರಿ ನೌಕರರ ವಿರುದ್ಧ ಸಿಬಿಐ ಎಫ್‌ಐಆರ್ ದಾಖಲಿಸಿದ್ದರಿಂದ ಚರ್ಚೆ ಮುನ್ನೆಲೆಗೆ ಬಂದಿತ್ತು.

ಆಂಧ್ರ ಪ್ರದೇಶ ವ್ಯಾಪ್ತಿಯಲ್ಲಿ ರಾಜ್ಯ ಸರ್ಕಾರದ ಅನುಮತಿ ಪಡೆಯದೆ ಸಿಬಿಐ ಎಫ್‌ಐಆರ್ ದಾಖಲಿಸುವ ಅಧಿಕಾರ ಪ್ರಶ್ನಿಸಿ ನೌಕರರು ಆಂಧ್ರಪ್ರದೇಶ ಹೈಕೋರ್ಟ್ ಮೆಟ್ಟಿಲೇರಿದ್ದರು.



1946ರ ಡೆಲ್ಲಿ ಸ್ಪೆಷಲ್ ಪೊಲೀಸ್ ಎಸ್ಟಾಬ್ಲಿಷ್ಮೆಂಟ್ ಆಕ್ಟ್ ಪ್ರಕಾರ, ಅವಿಭಜಿತ ಆಂಧ್ರಪ್ರದೇಶ ವ್ಯಾಪ್ತಿಯಲ್ಲಿದ್ದ ನೌಕರರ ಮೇಲೆ ಸಿಬಿಐ ರಾಜ್ಯದ ಅನುಮತಿ ಪಡೆಯದೇ ಪ್ರಕರಣ ದಾಖಲಿಸಿದ್ದು ಸರಿಯಲ್ಲ ಎಂದು ಹೈಕೋರ್ಟ್‌ನಲ್ಲಿ ಆರೋಪಿಗಳು ವಾದ ಮಂಡಿಸಿದ್ದರು.

**ಆಂಧ್ರ ಪ್ರದೇಶ ಹೈಕೋರ್ಟ್ ನೀಡಿದ್ದ ತೀರ್ಪು ಏನು:** ಆಂಧ್ರದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಕೇಂದ್ರದ ನೌಕರರ ವಾದ ಪುರಸ್ಕರಿಸಿದ್ದ ಹೈಕೋರ್ಟ್ ಭ್ರಷ್ಟಾಚಾರ ತಡೆ ಕಾಯಿದೆಯಡಿ ದಾಖಲಿಸಿದ ಎಫ್‌ಐಆರ್ ಅನ್ನು ಮಜಾಗೊಳಿಸಿತ್ತು. 32 ಪುಟಗಳ ತೀರ್ಪಿನಲ್ಲಿ, ಸಿಬಿಐ ಪ್ರಕರಣದ ಕಲಿಸುವುದಕ್ಕೆ ಮುನ್ನ ರಾಜ್ಯ ಸರ್ಕಾರದ ಅನುಮತಿ ಪಡೆಯಬೇಕು ಎಂದು ಉಲ್ಲೇಖಿಸಲಾಗಿತ್ತು.

ಆಂಧ್ರ ಪ್ರದೇಶ ಹೈಕೋರ್ಟ್ ತೀರ್ಪನ್ನು ಪ್ರಶ್ನಿಸಿ ಸಿಬಿಐ ಸುಪ್ರೀಂ ಕೋರ್ಟ್ ಮೆಟ್ಟಿಲೇರಿತ್ತು. ಇದೀಗ ಸುಪ್ರೀಂ ಕೋರ್ಟ್‌ನಲ್ಲಿ ಐತಿಹಾಸಿಕ ತೀರ್ಪು ಪ್ರಕಟವಾಗಿದೆ.

## 'ಇತಿಹಾಸದಲ್ಲೇ ಅತ್ಯಂತ ಕೆಟ್ಟ ಅಧ್ಯಕ್ಷ'

**ಅಮೆರಿಕ:** ಜೋ ಬೈಡನ್ ಅಮೆರಿಕದ ಇತಿಹಾಸದಲ್ಲೇ ಅತ್ಯಂತ ಕೆಟ್ಟ ಅಧ್ಯಕ್ಷ ಎಂದು ಅಮೆರಿಕದ ನಿಯೋಜಿತ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಶುಕ್ರವಾರ ಹಾಲಿ ಅಧ್ಯಕ್ಷರ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಸಾಮಾಜಿಕ ಮಾಧ್ಯಮ ಪ್ಲಾಟ್ ಫಾರ್ಮ್ ಎಕ್ಸ್‌ನಲ್ಲಿ ಸರಣಿ ಪೋಸ್ಟ್ ಮಾಡಿರುವ ಅವರು, ಅಮೆರಿಕದ ಸ್ಥಿತಿ ಇಂದು ವಿಪತ್ತಿನಲ್ಲಿದೆ ಮತ್ತು ದೇಶವು ವಿಶ್ವದಲ್ಲಿ ನಗೆಪಾಟಲಿಗೀಡಾಗಿದೆ ಎಂದು ವ್ಯಂಗ್ಯವಾಡಿದ್ದಾರೆ. ರಾಷ್ಟ್ರೀಯ ಭದ್ರತೆ, ಸುರಕ್ಷತೆ ಮತ್ತು ನಾಯಕತ್ವದ ಕುಸಿತಕ್ಕೆ ಅಧ್ಯಕ್ಷ ಬೈಡನ್ ಅವರೇ ಕಾರಣ ಎಂದು ಟ್ರಂಪ್ ದೂಷಿಸಿದ್ದಾರೆ.

ಅಧ್ಯಕ್ಷ ಬೈಡನ್ ಅವರ 'ಮುಕ್ತ ಗಡಿ ನೀತಿ'ಯಿಂದ ವಿನಾಶಕಾರಿ ಪರಿಣಾಮ ಎದುರಾಗುತ್ತಿವೆ ಎಂದು ಅಭಿಪ್ರಾಯ ಪಟ್ಟಿರುವ ಟ್ರಂಪ್ ಇದೇ ವಿಷಯವನ್ನು ಕೇಂದ್ರೀಕರಿಸಿ ಬೈಡನ್ ವಿರುದ್ಧ ಟೀಕೆ ಮಾಡಿದ್ದಾರೆ. ಮುಕ್ತ ಗಡಿ ನೀತಿಯಿಂದಾಗಿ ಅಮೆರಿಕದಲ್ಲಿ ಇಸ್ಲಾಮಿಕ್ ಭಯೋತ್ಪಾದನೆ ಮತ್ತು ಹಿಂಸಾತ್ಮಕ ಅಪರಾಧಗಳ ಮಟ್ಟ ಹೆಚ್ಚಾಗುತ್ತಿದೆ ಎಂದು ಎಚ್ಚರಿಸಿದ ಅವರು, ಈ ಹಿಂದೆಂದಿಗಿಂತಲೂ ಈಗ ದೇಶ ಕೆಟ್ಟ ಸಮಯವನ್ನು ದಾಟುತ್ತಿದೆ ಎಂದು ಹೇಳಿದರು. "ಅವರು ಮತ್ತು ಅವರ ಚುನಾವಣಾ ಹಸ್ತಕ್ಷೇಪದ ದುಷ್ಕರ್ಮಿಗಳ ಗುಂಪು ನಮ್ಮ ದೇಶಕ್ಕೆ ಏನು ಮಾಡಿದೆಯೋ ಅದನ್ನು ಬೇಗ ಮರೆಯಲಾಗುವುದಿಲ್ಲ!" ಎಂದು ಅವರು ಹೇಳಿದರು. ನ್ಯಾಯಾಂಗ ಇಲಾಖೆ (ಡಿಒಜೆ), ಫೆಡರಲ್ ಬ್ಯೂರೋ ಆಫ್ ಇನ್ವೆಸ್ಟಿಗೇಷನ್ (ಎಫ್ಬಿಐ) ಮತ್ತು ಡೆಮಾಕ್ರಟಿಕ್ ಸರ್ಕಾರಿ ಅಧಿಕಾರಿಗಳು ಸೇರಿದಂತೆ ವಿವಿಧ ಯುಎಸ್ ಸಂಸ್ಥೆಗಳು ತಮ್ಮ ಕರ್ತವ್ಯ ನಿರ್ವಹಿಸುವಲ್ಲಿ ವಿಫಲವಾಗಿವೆ ಎಂದು ಟ್ರಂಪ್ ಆರೋಪಿಸಿದರು.

"ಈ ಏಜೆನ್ಸಿಗಳು ಮತ್ತು ಅಧಿಕಾರಿಗಳು ಅಸಮರ್ಥ ಮತ್ತು ಭ್ರಷ್ಟರಾಗಿದ್ದಾರೆ. ದೇಶವನ್ನು ಆಂತರಿಕ ಮತ್ತು ಬಾಹ್ಯ ಅಪಾಯಗಳಿಂದ ರಕ್ಷಿಸುವ ಬದಲು ರಾಜಕೀಯವಾಗಿ ದಾಳಿ ಮಾಡುವತ್ತ ಗಮನ ಹರಿಸಿದ್ದಾರೆ. ನಮ್ಮ ದೇಶ ವಿಪತ್ತಿನಲ್ಲಿದೆ ಮತ್ತು ಪ್ರಪಂಚದಾದ್ಯಂತ ನಗೆಪಾಟಲಿಗೀಡಾಗಿದೆ. ದುರ್ಬಲ, ಪರಿಣಾಮಕಾರಿಯಲ್ಲದ ಮತ್ತು ವಾಸ್ತವಿಕವಾಗಿ ಅಸ್ತಿತ್ವದಲ್ಲಿಲ್ಲದ ನಾಯಕತ್ವ ಹಾಗೂ ಮುಕ್ತ ಗಡಿಗಳನ್ನು ಹೊಂದಿದಾಗ ಇಂಥ ವಿಪತ್ತು ಸಂಭವಿಸುತ್ತದೆ" ಎಂದು ಟ್ರಂಪ್ ಪೋಸ್ಟ್ ಮಾಡಿದ್ದಾರೆ. ಡಿಒಜೆ, ಎಫ್‌ಬಿಐ ಮತ್ತು ಸ್ಥಳೀಯ ಪ್ರಾಸಿಕ್ಯೂಟರ್‌ಗಳು ಯುಎಸ್ ಸರ್ಕಾರ ಮತ್ತು ರಾಷ್ಟ್ರಕ್ಕೆ ನುಸುಳಿರುವ ಅಪಾಯಕಾರಿ ವ್ಯಕ್ತಿಗಳನ್ನು ನಿಭಾಯಿಸುವ ಬದಲು ಬರೀ ನನ್ನನ್ನು ಟೀಕೆ ಮಾಡುವುದರಲ್ಲಿಯೇ ಸಮಯ ಹಾಳು ಮಾಡುತ್ತಿದ್ದಾರೆ. ಪರಿಸ್ಥಿತಿ ಮತ್ತಷ್ಟು ಹದಗೆಡುವ ಮುನ್ನ ಸಿಐಎ ಮಧ್ಯಪ್ರವೇಶಿಸುವುದು ಅಗತ್ಯ ಎಂದು ಅವರು ಹೇಳಿದರು.

## ಪತ್ನಿಯನ್ನು ಕೊಂದು ಸೀದಾ ಠಾಣೆಗೆ ಬಂದ ಪತಿ

**ಛತ್ತೀಸ್‌ಗಢ:** ವ್ಯಕ್ತಿಯೊಬ್ಬ ಕ್ಷುಲ್ಲಕ ಕಾರಣಕ್ಕೆ ತನ್ನ ಪತ್ನಿ ಕೊಲೆ ಮಾಡಿ ನೇರವಾಗಿ ಪೊಲೀಸ್ ಠಾಣೆ ಬಂದು ಶರಣಾಗಿರುವ ಘಟನೆ ಕನ್ವಾರ್ ಪೊಲೀಸ್ ಠಾಣೆ ವ್ಯಾಪ್ತಿಯ ಸಾಂಗ್ಲಿ ಗ್ರಾಮದಲ್ಲಿ ನಡೆದಿದೆ. ಈಶ್ವರಿ ಸಾಹು ಪತಿಯಿಂದ ಹತ್ಯೆಯಾದ ಪತ್ನಿ. ಕೇವಲ್ ಚಂದ್ ಸಾಹು ಕೊಲೆ ಮಾಡಿದ ಪತಿ ಎಂದು ಗುರುತಿಸಲಾಗಿದೆ.

ಸಣ್ಣಪುಟ್ಟ ವಿಷಯಗಳಿಗೆ ದಂಪತಿ ಪ್ರತಿದಿನ ಜಗಳವಾಡುತ್ತಿದ್ದರು. ಶುಕ್ರವಾರ ಒಂದು ಕಪ್ ಟೀ ತಯಾರಿಸುವ ವಿಚಾರಕ್ಕೆ ಇಬ್ಬರ ನಡುವೆ ಜಗಳ ನಡೆದಿದೆ. ಕೋಪದ ಭರದಲ್ಲಿ ಕೇವಲ್ ಅಡುಗೆ ಮನೆಯ ಬಾಗಿಲು ಲಾಕ್ ಮಾಡಿ ಈಶ್ವರಿ ಮೇಲೆ ಹಲ್ಲೆಗೆ ಮುಂದಾಗಿದ್ದಾನೆ. ಇದನ್ನು ಗಮನಿಸಿದ ಮಕ್ಕಳಿಬ್ಬರೂ ಬಾಗಿಲು ತೆರೆಯುವಂತೆ ಗೋಗರೆದಿದ್ದಾರೆ, ತಂದೆ ತೆಗೆಯದಿದ್ದಾಗ ಬಾಗಿಲು ಒಡೆಯಲು ಯತ್ನಿಸಿ, ವಿಫಲರಾಗಿದ್ದಾರೆ. ಅಷ್ಟರಲ್ಲಾಗಲೇ ಕೇವಲ್, ಈಶ್ವರಿಗೆ ಚಾಕುವಿನಿಂದ ಇರಿದಿದ್ದಾನೆ, ಇದರಿಂದ ಆಕೆಗೆ ತೀವ್ರ ರಕ್ತಸ್ರಾವವಾಗಿದೆ. ಕೃತ್ಯ ಎಸಗಿದ ಬಳಿಕ ಕೇವಲ್ ಮನೆಯಿಂದ ಪರಾರಿಯಾಗಿದ್ದಾನೆ

ನಂತರ ರಕ್ತದ ಮಡುವಿನಲ್ಲಿ ಬಿದ್ದಿದ್ದ ಈಶ್ವರಿಯನ್ನು ನೆರೆಹೊರೆಯವರು ಧಮ್ತಾರಿಯ ಆಸ್ಪತ್ರೆಗೆ ರವಾನಿಸಿದ್ದಾರೆ. ಆದರೆ ಚಿಕಿತ್ಸೆ ಫಲಿಸದೇ ಈಶ್ವರಿ ಸಾವನ್ನಪ್ಪಿದ್ದಾರೆ. ನಂತರ ಕೇವಲ್ ಕನ್ವಾರ್ ಪೊಲೀಸ್ ಠಾಣೆಗೆ ಬಂದು ಶರಣಾಗಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

" ಈಶ್ವರಿ ಸಾಹು ಮತ್ತು ಆಕೆಯ ಪತಿ ಕೇವಲ್ ಚಂದ್ ಸಾಹು ಕ್ಷುಲ್ಲಕ ವಿಚಾರಕ್ಕೆ ಜಗಳವಾಡಿದ್ದಾರೆ ಎಂದು ಪ್ರಾಥಮಿಕ ತನಿಖೆಯಿಂದ ತಿಳಿದು ಬಂದಿದೆ. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಲಾಗುತ್ತಿದೆ" ಎಂದು ಕನ್ವಾರ್ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಲತಾ ತಿವಾರಿ ತಿಳಿಸಿದ್ದಾರೆ.


## ಇಸ್ರೇಲ್‌ನಿಂದ ವೈಮಾನಿಕ ದಾಳಿ ಮಕ್ಕಳು ಸೇರಿ 18 ಜನ ಸಾವು

**ಗಾಜಾ:** ಹಮಾಸ್ ನಡೆಸುತ್ತಿರುವ ಪೊಲೀಸ್ ಪಡೆಗಳಲ್ಲಿ ಮೂವರು ಮಕ್ಕಳು ಮತ್ತು ಇಬ್ಬರು ಉನ್ನತ ಶ್ರೇಣಿಯ ಅಧಿಕಾರಿಗಳು ಸೇರಿದಂತೆ ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ ಗಾಜಾ ಪಟ್ಟಿಯಲ್ಲಿ 18 ಜನರು ಮೃತಪಟ್ಟಿದ್ದಾರೆ ಎಂದು ಪ್ಯಾಲೇಸ್ಟಿನಿಯನ್ ಮತ್ತು ಆಸ್ಪತ್ರೆಯ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ವೈಮಾನಿಕ ದಾಳಿ ಮುವಾಸಿ ಎಂದು ಕರೆಯಲ್ಪಡುವ ಪ್ರದೇಶದ ಟೆಂಟ್‌ಗೆ ಅಪ್ಪಳಿಸಿತು. ಬೇರೆಡೆಯಿಂದ ಸ್ಥಳಾಂತರಗೊಂಡ ನೂರಾರು ಜನರು ಅಲ್ಲಿ ಶೀತ ಮತ್ತು ಚಳಿಯಿಂದ ಡೇರೆಗಳಲ್ಲಿ ಆಶ್ರಯ ಪಡೆಯುತ್ತಿದ್ದರು.

ಮತ್ತೊಂದು ವೈಮಾನಿಕ ದಾಳಿಯಲ್ಲಿ ಸೆಂಟ್ರಲ್ ಗಾಜಾ ಪಟ್ಟಿಯಲ್ಲಿ ಕನಿಷ್ಠ 8 ಪ್ಯಾಲೆಸ್ಟೀನಿಯನ್ನರು ಸಾವನ್ನಪ್ಪಿದರು. ಮೃತರು ಸ್ಥಳೀಯ ಸಮಿತಿಗಳ ಸದಸ್ಯರಾಗಿದ್ದರು. ಈ ದಾಳಿಯ ಕುರಿತು ಇಸ್ರೇಲಿ ಸೇನೆಯಿಂದ ಯಾವುದೇ ಪ್ರತಿಕ್ರಿಯೆ ಬಂದಿಲ್ಲ.

ಹಮಾಸ್ ನೇತೃತ್ವದ ಉಗ್ರಗಾಮಿಗಳು ಅಕ್ಟೋಬರ್ 7, 2023ರಂದು ಇಸ್ರೇಲ್ ಮೇಲೆ ನಡೆಸಿದ ದಾಳಿಯಿಂದ ಈ ಯುದ್ಧವು ಆರಂಭವಾಯಿತು. ಅವರು ಸುಮಾರು 1,200 ಜನರನ್ನು ಕೊಂದರು



ಮತ್ತು ಸುಮಾರು 250 ಜನರನ್ನು ಅಪಹರಿಸಿದರು. ಗಾಜಾದಲ್ಲಿ ಸುಮಾರು 100 ಒತ್ತೆಯಾಳುಗಳು ಇನ್ನೂ ಇದ್ದಾರೆ. ಅವರಲ್ಲಿ ಕನಿಷ್ಠ ಮೂರನೇ ಒಂದು ಭಾಗದಷ್ಟು ಜನರು ಸತ್ತಿದ್ದಾರೆ ಎಂದು ಹೇಳಲಾಗುತ್ತಿದೆ.

ಇಸ್ರೇಲ್‌ನ ಆಕ್ರಮಣವು ಗಾಜಾದಲ್ಲಿ 45,000 ಪ್ಯಾಲೆಸ್ಟೀನಿಯಾದವರನ್ನು ಕೊಂದಿದೆ ಎನ್ನಲಾಗಿದೆ. ಇಂದು ಮುಂಜಾನೆ, ಇಸ್ರೇಲಿ ಮಿಲಿಟರಿಯು ಗಾಜಾ ಪಟ್ಟಿಯ ಮೇಲೆ ನಡೆಸಿದ ವೈಮಾನಿಕ ದಾಳಿಯಲ್ಲಿ ಹಮಾಸ್‌ನ ಆಂತರಿಕ ಭದ್ರತಾ ಉಪಕರಣದ ಹಿರಿಯ ಸದಸ್ಯರನ್ನು ಗುರಿಯಾಗಿಸಿಕೊಂಡಿದೆ ಎಂದು ಪ್ಯಾಲೇಸ್ಟಿನಿಯನ್ ಅಧಿಕಾರಿಗಳು ಹೇಳುತ್ತಾರೆ.

## ಲಡಾಖ್‌ನಲ್ಲಿ 2 ಕೌಂಟಿಗಳ ರಚನೆಗೆ ಭಾರತ ವಿರೋಧ


**ನವದೆಹಲಿ:** ಭಾರತದ ಗಡಿ ಭಾಗದಲ್ಲಿರುವ ಲಡಾಖ್‌ನಲ್ಲಿ ಚೀನಾ ಮತ್ತೆ ತಗಾದೆ ತೆಗೆದಿದೆ. ಲಡಾಖ್‌ನ ಅಕ್ಸಾಯ್ ಚಿನ್‌ನಲ್ಲಿ ಅಕ್ರಮವಾಗಿ ಚೀನಾ 2 ಕೌಂಟಿಗಳನ್ನು ನಿರ್ಮಾಣ ಮಾಡುವುದಾಗಿ ಘೋಷಿಸಿರುವುದರಿಂದ ಇದನ್ನು ಭಾರತ ಬಲವಾಗಿ ಖಂಡಿಸಿದೆ.

“ಈ ಪ್ರದೇಶದಲ್ಲಿ ಭಾರತೀಯ ಭೂಪ್ರದೇಶದ ಅಕ್ರಮ ಚೀನೀ ಆಕ್ರಮಣವನ್ನು ನಾವು ಎಂದಿಗೂ ಒಪ್ಪಿಕೊಂಡಿಲ್ಲ” ಎಂದು ಚೀನಾ ಹೋಟಾನ್ ಪ್ರಿಫೆಕ್ಚರ್‌ನಲ್ಲಿ ಎರಡು ಹೊಸ ಕೌಂಟಿಗಳನ್ನು ಸ್ಥಾಪಿಸುವ ಕುರಿತು ವಿದೇಶಾಂಗ ಸಚಿವಾಲಯ ಹೇಳಿದೆ. ಲಡಾಖ್‌ನ ಭಾಗವಾಗಿರುವ ಚೀನಾದ ಹೋಟಾನ್ ಪ್ರಿಫೆಕ್ಚರ್‌ನಲ್ಲಿ ಎರಡು ಹೊಸ ಕೌಂಟಿಗಳ ಘೋಷಣೆಯ ಕುರಿತು ಭಾರತವು ಚೀನಾದೊಂದಿಗೆ ಗಂಭೀರ ಪ್ರತಿಭಟನೆ ಸಲ್ಲಿಸಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ.

ಈ ಬಗ್ಗೆ ಮಾಧ್ಯಮಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, “ಚೀನಾದ ಹೋಟಾನ್ ಪ್ರಿಫೆಕ್ಚರ್‌ನಲ್ಲಿ ಎರಡು ಹೊಸ ಕೌಂಟಿಗಳ ಸ್ಥಾಪನೆಗೆ ಸಂಬಂಧಿಸಿದ ಪ್ರಕಟಣೆಯನ್ನು ನಾವು ನೋಡಿದ್ದೇವೆ. ಈ ಕೌಂಟಿಗಳ ಅಧಿಕಾರ ವ್ಯಾಪ್ತಿಯ ಭಾಗಗಳು ಭಾರತದ ಕೇಂದ್ರಾಡಳಿತ ಪ್ರದೇಶವಾದ ಲಡಾಖ್‌ನಲ್ಲಿವೆ” ಎಂದು ಹೇಳಿದ್ದಾರೆ. ಲಡಾಖ್‌ನಲ್ಲಿ ಚೀನಾದ ಅಕ್ರಮ ಆಕ್ರಮಣವನ್ನು ಭಾರತ ಎಂದಿಗೂ ಒಪ್ಪಿಕೊಂಡಿಲ್ಲ ಎಂದು ಜೈಸ್ವಾಲ್ ಹೇಳಿದ್ದಾರೆ. ಹೊಸ ಕೌಂಟಿಗಳ ರಚನೆಯು ಈ ಪ್ರದೇಶದ ಮೇಲೆ ನಮ್ಮ ಸಾರ್ವಭೌಮತ್ವದ ಬಗ್ಗೆ ಭಾರತದ ದೀರ್ಘಕಾಲೀನ ಮತ್ತು ಸ್ಥಿರವಾದ ನಿಲುವಿನ ಮೇಲೆ ಪ್ರಭಾವ ಬೀರುವುದಿಲ್ಲ. ಇದು ಚೀನಾದ ಅಕ್ರಮಕ್ಕೆ ಒಪ್ಪಿಗೆ ನೀಡುವುದಿಲ್ಲ. ರಾಜತಾಂತ್ರಿಕ ಮಾರ್ಗಗಳ ಮೂಲಕ ನಾವು ಚೀನಾದ ಕಡೆಯಿಂದ ಗಂಭೀರ ಪ್ರತಿಭಟನೆಯನ್ನು ಸಲ್ಲಿಸಿದ್ದೇವೆ ಎಂದು ಅವರು ಹೇಳಿದ್ದಾರೆ.

ಟಿಬೆಟ್‌ನ ಯಾರ್ಲುಂಗ್ ತ್ಸಾಂಗ್ಪೋ ನದಿಯಲ್ಲಿ ಚೀನಾ ಜಲವಿದ್ಯುತ್ ಯೋಜನೆಯನ್ನು ನಿರ್ಮಿಸುವ ಬಗ್ಗೆ ಸರ್ಕಾರಕ್ಕೆ ತಿಳಿದಿದೆ ಎಂದು ಜೈಸ್ವಾಲ್ ಹೇಳಿದ್ದಾರೆ. ಚೀನಾ ಸ್ಥಾಪಿಸುವುದಾಗಿ ಘೋಷಿಸಿರುವ ಈ ಕೌಂಟಿಗಳ ಕೆಲವು ಭಾಗಗಳು ಭಾರತದ ಕೇಂದ್ರಾಡಳಿತ ಪ್ರದೇಶವಾದ ಲಡಾಖ್‌ನಲ್ಲಿ ಬರುತ್ತವೆ. ಚೀನಾದ ಈ ಕ್ರಮವು ಅದರ ಸಾರ್ವಭೌಮತೆಗೆ ಸಂಬಂಧಿಸಿದಂತೆ ನವದೆಹಲಿಯ ಸ್ಥಿರವಾದ ಸ್ಥಾನದ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ ಎಂದು ಹೇಳಿದ್ದಾರೆ. ಸುಮಾರು 5 ವರ್ಷಗಳ ಕಾಲ ಸ್ಥಗಿತಗೊಂಡಿದ್ದ ಗಡಿ ಮಾತುಕತೆಯನ್ನು ಎರಡು ರಾಷ್ಟ್ರಗಳ ವಿಶೇಷ ಪ್ರತಿನಿಧಿಗಳು ಪುನರಾರಂಭಿಸಿದ ದಿನಗಳ ನಂತರ ಎರಡು ಕೌಂಟಿಗಳನ್ನು ಸ್ಥಾಪಿಸುವ ಕುರಿತು ಚೀನಾದ ಘೋಷಣೆ ಬಂದಿದೆ.

## ಮಹಾಕುಂಭ; 17 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣವಾಗುತ್ತಿವೆ 84 ಕಂಬಗಳು



**ಉತ್ತರ ಪ್ರದೇಶದ:** ಪ್ರಯಾಗ್‌ರಾಜ್‌ನಲ್ಲಿ 12 ವರ್ಷಗಳ ನಂತರ ನಡೆಯಲಿರುವ ಮಹಾಕುಂಭದ ಸಿದ್ಧತೆಗಳು ಭರದಿಂದ ಸಾಗಿವೆ. ಈ ಸರಣಿಯ ಅಡಿಯಲ್ಲಿ, ಉತ್ತರ ಪ್ರದೇಶ ಸರ್ಕಾರವು ವಿಮಾನ ನಿಲ್ದಾಣಕ್ಕೆ ಹೋಗುವ ರಸ್ತೆಯಲ್ಲಿ 84 ಪಿಲ್ಲರ್‌ಗಳನ್ನು ಸ್ಥಾಪಿಸುತ್ತಿದೆ. ಕೆಂಪು ಮರಳುಗಲ್ಲಿನಿಂದ ಮಾಡಿದ ಈ ಕಂಬಗಳಿಗೆ 'ಪಿಲ್ಲರ್ಸ್ ಆಫ್ ಫೇತ್' ಎಂದು ಹೆಸರಿಸಲಾಗಿದೆ.

ಸುಮಾರು 17 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ಈ ಕಂಬಗಳ ಮೇಲೆ ಶಿವನ 108 ನಾಮಗಳನ್ನು ಬರೆಯಲಾಗಿದೆ. ಹಾಗೆಯೇ ಸನಾತನದ ಪ್ರತೀಕವಾದ ಕಲಶವನ್ನು ಸಹ ಎಲ್ಲಾ ಕಂಬಗಳ ಮೇಲೆ ಇರಿಸಲಾಗಿದೆ.

ನಗರಾಭಿವೃದ್ಧಿ ಇಲಾಖೆಯ ಪ್ರಧಾನ ಕಾರ್ಯದರ್ಶಿ ಅಮೃತ್ ಅಭಿಜತ್ ಪ್ರಕಾರ, “ರಾಜಸ್ಥಾನದ ಬನ್ಸಿ ಪಹಾರ್‌ಪುರದಲ್ಲಿ ಈ ಕಂಬಗಳನ್ನು ನಿರ್ಮಿಸಲಾಗಿದೆ ಮತ್ತು ಪ್ರತಿಯೊಂದಕ್ಕೂ ಸುಮಾರು 20 ಲಕ್ಷ ರೂಪಾಯಿ ವೆಚ್ಚವಾಗಿದೆ. ಯಾವುದೇ ವ್ಯಕ್ತಿ ಈ ಕಂಬಗಳಿಗೆ ಪ್ರದಕ್ಷಿಣೆ ಹಾಕಿದಾಗ, ಅವರು 84 ಲಕ್ಷ ಜನ್ಮಗಳ ಯಾತ್ರೆಯನ್ನು ಪೂರ್ಣಗೊಳಿಸಿದ ಅನುಭವವನ್ನು ಹೊಂದುತ್ತಾರೆ” ಎಂದು ಹೇಳಿದ್ದಾರೆ.

ಮಹಾಕುಂಭದಿಂದ ವಿಮಾನ ನಿಲ್ದಾಣಕ್ಕೆ ಹೋಗುವ ಮಾರ್ಗದಲ್ಲಿ ಈ ಕಂಬಗಳನ್ನು ಅಳವಡಿಸಿರುವ ಸಂಸ್ಥೆಯ ಅಧಿಕಾರಿಗಳ ಪ್ರಕಾರ, ಈ ಕಂಬಗಳನ್ನು ಜೋಡಿಸುವುದರಲ್ಲಿ ನಿಜವಾದ ಕುಶಲತೆ ಇದೆ. ವಾಸ್ತವವಾಗಿ ಈ 84 ಕಂಬಗಳನ್ನು ನಾಲ್ಕು ಭಾಗಗಳಲ್ಲಿ ಅಳವಡಿಸಲಾಗುತ್ತಿದೆ. ಈ ನಾಲ್ಕು ಭಾಗಗಳು ಸನಾತನ ಧರ್ಮದ ನಾಲ್ಕು ವೇದಗಳು, ನಾಲ್ಕು ಆಶ್ರಮಗಳು, ನಾಲ್ಕು ವರ್ಣಗಳು ಮತ್ತು ನಾಲ್ಕು ದಿಕ್ಕುಗಳನ್ನು ಪ್ರತಿನಿಧಿಸುತ್ತವೆ. ಇಂತಹ ಪರಿಸ್ಥಿತಿಯಲ್ಲಿ ಒಮ್ಮೆ ಈ ಕಂಬಗಳ ಪ್ರದಕ್ಷಿಣೆ ಮುಗಿದರೆ 84 ಲಕ್ಷ ಜನ್ಮಗಳ ಯಾತ್ರೆ ಪೂರ್ಣಗೊಳ್ಳಲಿದೆ. ಪ್ರತಿ ಕಂಬದ ಮೇಲೆ ಶಿವನ 108 ಹೆಸರುಗಳನ್ನು ದಾಖಲಿಸಲಾಗಿದೆ ಮತ್ತು ಈ ಹೆಸರುಗಳನ್ನು ನಾಲ್ಕು ಭಾಗಗಳಲ್ಲಿ ಬರೆಯಲಾಗಿದೆ ಎಂದು ಹೇಳಲಾಗುತ್ತದೆ. ಹೀಗಾಗಿ ಈ 84 ಸ್ತಂಭಗಳ ಕ್ರಾಂತಿ ಬ್ರಹ್ಮಾಂಡದ ಕ್ರಾಂತಿಗೆ ಸಮಾನವಾಗಿರುತ್ತದೆ. ವಾಸ್ತವವಾಗಿ, ಆತ್ಮವು ಯಾವಾಗಲೂ ತನ್ನದೇ ಆದ ಅಸ್ತಿತ್ವವನ್ನು ಹುಡುಕುತ್ತದೆ. ಇದಕ್ಕಾಗಿ ಅವರು ವಿವಿಧ ಅವತಾರಗಳಲ್ಲಿ 84 ಲಕ್ಷ ಬಾರಿ ಭೂಮಿಗೆ ಬರಬೇಕು. ಪುರಾಣದ ನಂಬಿಕೆಗಳ ಪ್ರಕಾರ, ಈ ಸಂಪೂರ್ಣ ಚಕ್ರವನ್ನು 21 ಲಕ್ಷದ ನಾಲ್ಕು ವರ್ಗಗಳಾಗಿ ವಿಂಗಡಿಸಲಾಗಿದೆ. ಹಾಗೆಯೇ, ಆತ್ಮವು ಮಾನವ ದೇಹವನ್ನು ಪ್ರವೇಶಿಸಿದಾಗ, ಅದು ನಾಲ್ಕು ಪುರುಷಾರ್ಥಗಳನ್ನು ಪಡೆಯಲು ಬ್ರಹ್ಮಚಾರಿ, ಗೃಹಸ್ಥ, ವಾನಪ್ರಸ್ಥ ಮತ್ತು ಸಂನ್ಯಾಸದಂತಹ ಆಶ್ರಮಗಳ ಮೂಲಕ ಹಾದುಹೋಗಬೇಕು ಧರ್ಮ, ಅರ್ಥ, ಕಾಮ ಮತ್ತು ಮೋಕ್ಷ. ಅಂತೆಯೇ, ಈ ನಂಬಿಕೆಯ ಸ್ತಂಭಗಳು ಆತ್ಮಕ್ಕೆ ಶಿವನ ಕೃಪೆಯಿಂದ, ಅದು ವಿಘಟನೆಗಳಿಂದ ಮುಕ್ತವಾಗುತ್ತದೆ ಮತ್ತು ಅಂತಿಮ ಗಮ್ಯಸ್ಥಾನವನ್ನು ತಲುಪುತ್ತದೆ ಎಂದು ಭರವಸೆ ನೀಡುತ್ತದೆ.

## ಯೂನಿಯನ್ ಕಾರ್ಬೈಡ್ ತ್ಯಾಜ್ಯದ ವಿರುದ್ಧ ಭುಗಿಲೆದ್ದ ಪ್ರತಿಭಟನೆ

ಪಿತಾಂಪುರ: ಯೂನಿಯನ್ ಕಾರ್ಬೈಡ್‌ನಿಂದ 337 ಟನ್ ಅಪಾಯಕಾರಿ ತ್ಯಾಜ್ಯ ವಿಲೇವಾರಿ ವಿರೋಧಿಸಿ ಪ್ರತಿಭಟನೆ ತೀವ್ರಗೊಳ್ಳುತ್ತಿದ್ದಂತೆ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ಸೆಕ್ಷನ್ 163 (ಹಿಂದಿನ ಸೆಕ್ಷನ್ 144) ವಿಧಿಸಲು ಜಿಲ್ಲಾಡಳಿತ ನಿರ್ಧರಿಸಿದ್ದು, ನಿರ್ಬಂಧಗಳು ತಕ್ಷಣವೇ ಜಾರಿಗೆ ಬರುತ್ತವೆ ಎಂದು ಪ್ರಿಯಾಂಕ್ ಮಿಶ್ರಾ ತಿಳಿಸಿದ್ದಾರೆ.

ಸಿಎಂ ನಿರ್ದೇಶನದ ಮೇರೆಗೆ ಸಾರ್ವಜನಿಕರೊಂದಿಗೆ ಸಂವಹನ ನಡೆಸುವುದು ನಮ್ಮ ಆದ್ಯತೆಯಾಗಿದೆ. ನಾವು ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಪಾರದರ್ಶಕತೆಯಿಂದ ಎಲ್ಲಾ ನಿರ್ಧಾರಗಳನ್ನು ತೆಗೆದುಕೊಳ್ಳಬೇಕು. ಆ ನಿಟ್ಟಿನಲ್ಲಿ ಕಾರ್ಯೋನ್ಮುಖರಾಗಿದ್ದೇವೆ ಎಂದಿದ್ದಾರೆ.

ಈ ಪ್ರದೇಶದಲ್ಲಿ ತ್ಯಾಜ್ಯ ವಿಲೇವಾರಿ ವಿರೋಧಿಸಿ ಇಬ್ಬರು ವ್ಯಕ್ತಿಗಳು ಆತ್ಮಹತ್ಯೆಗೆ ಯತ್ನಿಸಿದರು. ಆದರೆ, ಅವರನ್ನು ಸ್ಥಳೀಯ ಆಸ್ಪತ್ರೆಯಿಂದ ಇಂದೋರ್‌ನಲ್ಲಿರುವ ಖಾಸಗಿ ಆಸ್ಪತ್ರೆಗೆ ಸ್ಥಳಾಂತರಿಸಿದ್ದರಿಂದ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ. ಅವರು ಸದ್ಯಕ್ಕೆ ಅಪಾಯದಿಂದ ಪಾರಾಗಿದ್ದಾರೆ ಎಂದು ವೈದ್ಯರು ಖಚಿತಪಡಿಸಿದ್ದಾರೆ.



ಇಂದೋರ್‌ನಿಂದ ಸುಮಾರು 30 ಕಿಲೋಮೀಟರ್‌ಗಳಷ್ಟು ದೂರದಲ್ಲಿರುವ ಟೌನ್‌ಶಿಪ್‌ಗೆ ಅಪಾಯಕಾರಿ ವಸ್ತುಗಳನ್ನು ಸ್ಥಳಾಂತರಿಸುವುದರಿಂದ ಪರಿಸರದ ಪರಿಣಾಮಗಳ ಬಗ್ಗೆ ಜನರ ಕಳವಳದಿಂದ ಪ್ರತಿಭಟನೆಗಳು ಪ್ರಾರಂಭವಾದವು. ಪಿತಾಂಪುರ ಬಚಾವೋ ಸಮಿತಿ ಬಂದ್‌ಗೆ ಕರೆ ನೀಡಿದೆ.

ಪಿತಾಮ್‌ಪುರ ಬಚಾವೋ ಸಮಿತಿ ನೀಡಿದ ಬಂದ್ ಕರೆ ನಡುವೆಯೇ ಪಟ್ಟಣದ ಹಲವು ಭಾಗಗಳಲ್ಲಿ ದಿನವಿಡೀ ಪ್ರತಿಭಟನೆ ಮುಂದುವರಿದಿದ್ದು, ತ್ಯಾಜ್ಯ ದಹನ ಮಾಡಲು ಉದ್ದೇಶಿಸಿರುವ ಕೈಗಾರಿಕಾ ಘಟಕಕ್ಕೆ ಗುಂಪೊಂದು ಮೆರವಣಿಗೆ ನಡೆಸಿತು. ಬಂದ್ ಕರೆ ನೀಡಿದ ಹಿನ್ನೆಲೆಯಲ್ಲಿ ಅಂಗಡಿ–ಮುಂಗಟ್ಟುಗಳು ಮುಚ್ಚಿದ್ದವು.

ಪ್ರತಿಭಟನೆಯ ಸಮಯದಲ್ಲಿ, ಐಷರ್ ಮೋಟಾರ್ಸ್ ಬಳಿ ಒಂದು ಗುಂಪು ರಸ್ತೆಯನ್ನು ನಿರ್ಬಂಧಿಸಿತು. ಆದರೆ, ಪೊಲೀಸರು ಪರಿಸ್ಥಿತಿಯನ್ನು ನಿಯಂತ್ರಿಸಿದರು.

500–600 ಜನರ ಗುಂಪು ರಾಮ್ಕಿ ಗ್ರೂಪ್‌ನ ಕೈಗಾರಿಕಾ ತ್ಯಾಜ್ಯ ನಿರ್ವಹಣಾ ಪ್ರೈವೇಟ್ ಲಿಮಿಟೆಡ್ ಆವರಣಕ್ಕೆ ಮೆರವಣಿಗೆ ನಡೆಸಿತು. ಅಲ್ಲಿ ಕೈಗಾರಿಕಾ ತ್ಯಾಜ್ಯವನ್ನು ಸುಡಲಾಗುತ್ತದೆ.

ಪ್ರತಿಭಟನೆಗೆ ಕಾರಣ:

ಭೋಪಾಲ್ ಅನಿಲ ದುರಂತ ನಡೆದ 4 ದಶಕಗಳ ನಂತರ, ಮಧ್ಯಪ್ರದೇಶದಲ್ಲಿ ನಿಷ್ಕ್ರಿಯಗೊಂಡ ಯೂನಿಯನ್ ಕಾರ್ಬೈಡ್ ಇಂಡಿಯಾ ಲಿಮಿಟೆಡ್ ಕಾರ್ಖಾನೆಯ ವಿಷಕಾರಿ ತ್ಯಾಜ್ಯವನ್ನು ವೈಜ್ಞಾನಿಕ ವಿಲೇವಾರಿಗಾಗಿ ಪಿತಾಂಪುರಕ್ಕೆ ಸ್ಥಳಾಂತರಿಸಲಾಯಿತು. ಈ ಅಪಾಯಕಾರಿ ತ್ಯಾಜ್ಯದ 12 ಕಂಟೈನರ್‌ಗಳು ಇಲ್ಲಿಗೆ ಬಂದವು. 40 ವರ್ಷಗಳ ಹಿಂದೆ ಸಂಭವಿಸಿದ ಯೂನಿಯನ್ ಕಾರ್ಬೈಡ್ ದುರಂತದ ಅವಶೇಷಗಳು ಇನ್ನೂ ಇದ್ದು, ಭೋಪಾಲ್‌ನಲ್ಲಿ ಕನಿಷ್ಠ 5,479 ಜನರು ಸಾವನ್ನಪ್ಪಿ ಸಾವಿರಾರು ಜನರು ಗಂಭೀರ ಮತ್ತು ದೀರ್ಘಕಾಲೀನ ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿದ್ದಾರೆ. ತ್ಯಾಜ್ಯವನ್ನು ಪಿತಾಂಪುರಕ್ಕೆ ಸ್ಥಳಾಂತರಿಸಿದ್ದರಿಂದ ಜನರು ಪ್ರತಿಭಟನೆ ಆರಂಭಿಸಿ ಪಟ್ಟಣದಲ್ಲಿ ಕಾರ್ಬೈಡ್ ತ್ಯಾಜ್ಯವನ್ನು ಸುಡುವುದರಿಂದ ಸ್ಥಳೀಯ ಜನರ ಆರೋಗ್ಯ ಹಾಗೂ ಪರಿಸರಕ್ಕೆ ಹಾನಿಯಾಗಲಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.



# ಡಯಟ್ ಮಾಡೋದೇ ಇಲ್ಲ... ಆದ್ರೂ ರಾಧಿಕಾ ಫಿಟ್

ರಾಧಿಕಾ ಪಂಡಿತ್ ಸಿನಿಮಾದಿಂದ ದೂರ ಉಳಿದಿದ್ದರೂ ಸಹ ಇಂದಿಗೂ ಅವರನ್ನ ಸ್ಯಾಂಡಲ್'ವುಡ್ ಸಿಂಡ್ರೆಲ್ಲಾ ಅಂತಾನೆ ಕರಿತಾರೆ ಜನ.

ಸೀರಿಯಲ್ ಮೂಲಕ ತಮ್ಮ ಜರ್ನಿ ಆರಂಭಿಸಿ, ಚಂದನವನಕ್ಕೆ ಎಂಟ್ರಿ ಕೊಟ್ಟು, ಮೆರೆದ ನಾಯಕಿ ಇವರು. ಇವರು ನಟಿಸಿದ ಸಿನಿಮಾಗಳೆಲ್ಲಾ ಹಿಟ್, ಹಾಗಾಗಿ ರಾಧಿಕಾರನ್ನು ಮತ್ತೆ ತೆರೆ ಮೇಲೆ ನೋಡಲು ಕಾಯುತ್ತಿದ್ದಾರೆ ಜನ. ಜೊತೆಗೆ ರಾಧಿಕಾ ಫಿಟ್ನೆಸ್ ಗೆ ಫಿದಾ ಆಗಿದ್ದಾರೆ

ಇಬ್ಬರು ಮಕ್ಕಳ ತಾಯಿಯಾಗಿದ್ದರೂ ಇವರು ಫಿಟ್ನೆಸ್ ಕಾಯ್ದುಕೊಂಡಿರೋದು ಹೇಗೆ ಅನ್ನೋದೇ ಜನರಿಗೆ ಅಚ್ಚರಿ.

ರಾಧಿಕಾ ಪಂಡಿತ್ ಮತ್ತು ಯಶ್ ಲವ್ ಸ್ಟೋರಿ, ಮ್ಯಾರೇಜ್ ಸ್ಟೋರಿ ಎಲ್ಲನೂ ಗೊತ್ತಿದೆ ಅಲ್ವಾ? ಅದ್ರ ಬಗ್ಗೆ ಮತ್ತೆ ಹೇಳಬೇಕಾದ ಅವಶ್ಯಕತೆ ಇಲ್ಲ. ಈಗಾಗಲೇ ಈ ಜೋಡಿ ಇಬ್ಬರು ಮಕ್ಕಳು ಇದ್ದಾರೆ. ಆಯ್ರ ಮತ್ತು ಯಥರ್ವ ಎನ್ನುವ ಪುಟಾಣಿ ಮಕ್ಕಳ ಪೋಷಕರು ಇವರು. ರಾಧಿಕಾ ಪಂಡಿತ್ ಹೆಚ್ಚಾಗಿ ತಮ್ಮ ಸೋಶಿಯಲ್ ಮೀಡೀಯಾದಲ್ಲಿ ಮಕ್ಕಳ ಜೊತೆಗಿನ ಫೋಟೊಗಳನ್ನು ಪೋಸ್ಟ್ ಮಾಡುತ್ತಲೇ ಇರುತ್ತಾರೆ, ಅಷ್ಟೇ ಅಲ್ಲದೇ ಫ್ಯಾಮಿಲಿ ಫೋಟೊ ಹಾಗೂ ತಮ್ಮ ಫೋಟೊ ಕೂಡ ಪೋಸ್ಟ್ ಮಾಡ್ತಾರೆ.

ಇತ್ತೀಚೆಗೆ ಜ್ಯುವೆಲ್ಲರಿ ಒಂದರ ಉದ್ಘಾಟನಾ ಸಮಾರಂಭದಲ್ಲಿ ರಾಧಿಕಾ ಪಂಡಿತ್ ಕಾಣಿಸಿಕೊಂಡಿದ್ದರು. ಜೊತೆಗೆ ಹಲವಾರು ಫೊಟೊಗಳನ್ನು ಸಹ ರಾಧಿಕಾ ಪೋಸ್ಟ್ ಮಾಡಿದ್ದರು. ತುಂಬಾ ವರ್ಷಗಳ ನಂತರ ರಾಧಿಕಾ ಫೋಟೊ ಶೂಟ್ ಮಾಡಿ ಶೇರ್ ಮಾಡಿದ್ದರು. ಇದನ್ನ ನೋಡಿ ಅಭಿಮಾನಿಗಳು ಶಾಕ್ ಆಗಿದ್ದರು. ಯಾಕಂದ್ರೆ ರಾಧಿಕಾ ಬ್ಯೂಟಿ, ಫಿಟ್ನೆಸ್ ನೋಡಿ ಮನಸೋತಿದ್ದರು. ರಾಧಿಕಾ ಪಂಡಿತ್ ಗೆ ವಯಸ್ಸು ಈಗ 40, ಇಬ್ಬರು ಮಕ್ಕಳ ತಾಯಿ ಕೂಡ ಹೌದು. ಆದರೆ ಈ ವಯಸ್ಸಲ್ಲೂ ಇವರು ಇಷ್ಟೊಂದು ಫಿಟ್ ಆಗಿರೋದಕ್ಕೆ ಕಾರಣ ಏನು? ಇಷ್ಟೊಂದು ಫಿಟ್ ಆಗಿರೋದಕ್ಕೆ ರಾಧಿಕಾ ಡಯಟ್ ಮಾಡ್ತಾರೆ ಅಂತ ಅಂದುಕೊಂಡ್ರೆ, ಅದು ತಪ್ಪು. ಯಾಕಂದ್ರೆ ರಾಧಿಕಾ ಸಿನಿಮಾಗಳಲ್ಲಿ ನಟನೆ ಮಾಡುತ್ತಿರುವಾಗಿನಿಂದ ಆರಂಭಿಸಿ, ಈವರೆಗೆ ಯಾವತ್ತೂ ಡಯೆಟ್ ಮಾಡಿಯೇ ಇಲ್ಲ. ಜೊತೆಗೆ



ಯಾವತ್ತೂ ಹೊಟ್ಟೆ ಹಸಿದುಕೊಂಡು ಇದ್ದವರೂ ಅಲ್ಲ. ತುಂಬಾನೆ ಫುಡಿಯಾಗಿರುವ ರಾಧಿಕಾ ಪಂಡಿತ್, ಚೆನ್ನಾಗಿ ತಿಂದೂ ಈ ಲೆವೆಲ್‌ಗೆ ಬಾಡಿ ಮೈಂಟೇನ್ ಮಾಡಿದ್ದಾರೆ ಅಂದರೆ ಅದಕ್ಕೆ ಕಾರಣ ಅವರ ಮೆಟಬಾಲಿಸಂ. ಏನು ತಿಂದರೂ ಕರಗಿಸಿಕೊಳ್ಳೋ ಮೆಟಬಾಲಿಸಂ ಅವರಿಗೆ ಇದೆ. ಹಾಗಾಗಿಯೇ ಈ ವಯಸ್ಸಲ್ಲೂ ಫಿಟ್ ಆಗಿದ್ದಾರೆ ರಾಧಿಕಾ. ಇದರ ಜೊತೆಗೆ ಮತ್ತೊಂದಿಷ್ಟು ವ್ಯಾಯಾಮಗಳನ್ನೂ ಮಾಡ್ತಾರೆ.

ಇಂಡಸ್ಟ್ರಿಗೆ ಬಂದ ಆರಂಭದಲ್ಲಿ ತುಂಬಾನೆ ಸಣ್ಣಗಿದ್ದ ರಾಧಿಕಾರನ್ನು ಹಲವಾರು ಸಿನಿಮಾಗಳಿಂದ ರಿಜೆಕ್ಟ್ ಮಾಡಿದ್ರಂತೆ. ಇದನ್ನು ರಾಧಿಕಾ ಅವರೇ ಹೇಳ್ಕೊಂಡಿದ್ದರು. ರಾಧಿಕಾ ಇಷ್ಟು ಫಿಟ್ ಆಗಿರೋದಕ್ಕೆ ಮತ್ತೊಂದು ಕಾರಣ ಯೋಗ ಮತ್ತು ನಿತ್ಯ ಅವರು ಮಾಡುವ ಒಂದಿಷ್ಟು ಎಕ್ಸರ್‌ಸೈಜ್‌ಗಳು. ರಾಧಿಕಾ ಪಂಡಿತ್ ಹಿಂದೆ ಝುಂಬಾ ಡ್ಯಾನ್ಸ್ ಮಾಡ್ತಿದ್ರು. ಈಗಲೂ ಟೈಮ್ ಸಿಕ್ಕಾಗ ಮಾಡುತ್ತಾರೆ. ಯೋಗ ಮತ್ತು ಡ್ಯಾನ್ಸ್ ಜೊತೆಗೆ ಪುಟ್ಟ ಮಕ್ಕಳ ಹಿಂದೆ ದಿನವಿಡೀ ಓಡಾಡ್ತನೇ ಇರೋದು ಅವರ ಫಿಟ್‌ನೆಸ್ ಹೆಚ್ಚಿಸಿದೆ. ಸೂರ್ಯನಮಸ್ಕಾರ ಹಾಗೂ ಪ್ರತಿನಿತ್ಯ ವಾಕ್ ಮಾಡೋದನ್ನು ಮಿಸ್ ಮಾಡೋದಿಲ್ವಂತೆ ರಾಧಿಕಾ.

ರಾಧಿಕಾ ತಮ್ಮ ಉಪಹಾರದಲ್ಲಿ ಹೆಚ್ಚಾಗಿ ಇಡ್ಲಿ ಮತ್ತು ಪೋಹಾ ಸೇವಿಸುತ್ತಾರೆ, ಊಟದಲ್ಲಿ ಅನ್ನ, ತರಕಾರಿ, ದಾಲ್ ತಿನ್ನುತ್ತಾರೆ, ಇನ್ನು ರಾತ್ರಿ ಊಟದಲ್ಲಿ ಹೆಚ್ಚಾಗಿ ತರಕಾರಿಯಿಂದ ಮಾಡಿದಂತಹ ತಿಂಡಿ ತಿನ್ನುತ್ತಾರಂತೆ. ಅಷ್ಟೇ ಅಲ್ಲ ಇವರ ಸ್ನಾಕ್ಸ್ ಕೂಡ ಹೆಲ್ತಿಯಾಗಿರುತ್ತೆ, ಇವರು ಹೆಚ್ಚಾಗಿ ಡ್ರೈ ಫ್ರುಟ್ಸ್ ಗಳಾದ ಗೋಡಂಬಿ, ಬಾದಾಮ್, ಖರ್ಜೂರ ಜೊತೆಗೆ ಒಂದಷ್ಟು ಫ್ರೆಶ್ ಹಣ್ಣುಗಳನ್ನು ಸಹ ಸೇವಿಸುತ್ತಾರೆ. ಇದೇ ಅವರ ಫಿಟ್ನೆಸ್ ಸೀಕ್ರೆಟ್.

# ಮಂತ್ರವಾದಿ ಗೋಲ್ಡನ್ ಸ್ಟಾರ್




ಗೋಲ್ಡನ್ ಸ್ಟಾರ್ ಗಣೇಶ್. ಪ್ರೀತ್ಸೋ ಯೂತ್ಸ್‌ಗೆ ಬ್ರ್ಯಾಂಡ್ ಅಂಬಾಸಿಡರ್.. ಸ್ಯಾಂಡಲ್ವುಡ್‌ನಲ್ಲಿ ಲವ್ ಸ್ಟೋರಿ ಸಿನಿಮಾಗಳಿಗೆ ಇವರೇ ಕೇರ್ ಆಫ್ ಅಡ್ರೆಸ್ಸೇ. ಗಣೇಶ್ ಸಿನಿಮಾಗಳನ್ನ ಯಾವ ಪ್ರೇಮಿಗಳು ಮಿಸ್ ಮಾಡಿಕೊಳ್ಳೋಕೆ ಸಾಧ್ಯವೇ ಇಲ್ಲ.

ಗಣಿಗೆ ಈ ಗೋಲ್ಡನ್ ಸ್ಟಾರ್ ಪಟ್ಟ ಬಂದಿದ್ದು ಪ್ಯೂರ್ ಲವ್ ಸ್ಟೋರಿಗೆ ಜೀವ ತುಂಬಿದ್ದಕ್ಕೆ. ಪ್ರೇಮಿಗಳ ನಾಡಿ ಮಿಡಿತ ಅರ್ಥ ಮಾಡಿಕೊಂಡು ಅದಕ್ಕೆ ತಕ್ಕನಾದ ಕಥೆ ಆಯ್ಕೆ ಮಾಡಿ ಅಭಿನಯಿಸೋ ಕಲೆಗಾರ ಗಣೇಶ್. ಆದ್ರೆ ಗಣಿ ಈಗ ಕೊಂಚ ಬದಲಾಗಿದ್ದಾರೆ. ಬದಲಾಗಿದ್ದಾದ್ರು ಹಂಗಿಂಗಲ್ಲ.

ಗಣಿ ಈಗ ಶಿವನ ಬಿಲ್ಲನ್ನ ಹಿಡಿದು ಮಾಹಾಸುರರ ವಿರುದ್ಧ ಮಂತ್ರ ಹಾಕಿ ರೌದ್ರಾವತಾರ ತಾಳಿದ್ದಾರೆ. ಯೆಸ್, ಗಣೇಶ್ ಹೊಸ ಸಿನಿಮಾ ಅನೌನ್ಸ್ ಮಾಡಿದ್ದಾರೆ. ತೆಲುಗು ನಿರ್ಮಾಣ ಸಂಸ್ಥೆ ಪೀಪಲ್ ಮೀಡಿಯಾಂ ಫ್ಯಾಕ್ಟರಿ ಗಣೇಶ್‌ರ ಪಿನಾಕ ಚಿತ್ರಕ್ಕೆ ಬಂಡವಾಳ ಹೂಡುತ್ತಿದೆ.

ಧನಂಜಯ್ ಎಂಬುವವರು ಆಕ್ಷನ್ ಕಟ್ ಹೇಳಲಿದ್ದಾರೆ. ಟೈಟಲ್ ಸಮೇತ ಚಿತ್ರದ ಟೀಸರ್ ರಿಲೀಸ್ ಆಗಿದೆ. ಪಿನಾಕ ಗಣೇಶ್ ನಟನೆಯ 49ನೇ ಸಿನಿಮಾ. ಫ್ಯಾಂಟಸಿ ಆಕ್ಷನ್ ಸಿನಿಮಾ.. ಇದುವರೆಗೂ ನೋಡಿರದ ಲುಕ್‌ನಲ್ಲಿ ಗಣೇಶ್ ಮಿಂಚಿದ್ದಾರೆ. ಜನರಿಗಾಗಿ ಬದುಕಿದ ಧೀರನ ದಂತಕಥೆ ಚಿತ್ರ ಪಿನಾಕ.. ಕ್ಷುದ್ರಶಕ್ತಿಯ ಎದುರು ರುದ್ರಶಕ್ತಿಯ ಹೋರಾಟದ ಸ್ಟೋರಿ ಪಿನಾಕ. 'ಪಿನಾಕ' ಎಂದರೆ ಸಂಸ್ಕೃತದಲ್ಲಿ ತ್ರಿಶೂಲ, ಶಿವನ ಬಿಲ್ಲು ಎನ್ನುವ ಅರ್ಥ ಇದೆ. ಹೀಗಾಗೆ ಇಷ್ಟು ದಿನ ಲವ್ ಸ್ಟೋರಿಗೆ ಕೇರ್ ಆಫ್ ಅಡ್ರೆಸ್ ಆಗಿದ್ದ ಗಣೇಶ್, ಈಗ ಅತೀಂದ್ರಿಯ ಶಕ್ತಿಯ ಕಥೆಯಲ್ಲಿ ಅದಿನ್ನೇಗೆ ಮೋಡಿ ಮಾಡ್ತಾರೆ ಕಾದು ನೋಡ್ಬೇಕು.

॥ ಶ್ರೀಮತೇ ರಾಮಾನುಜಾಯ ನಮಃ ॥



ಬಂಧು-ಮಿತ್ರರಲ್ಲಿ ವಿನಂತಿ,
ನಮ್ಮ ಪೂಜ್ಯ ತಂದೆಯವರಾದ
ಶ್ರೀ S.T ರಾಜಗೋಪಾಲಾಚಾರ್ಯ ರವರು
ತಾ॥ 27-12-2024 ಶುಕ್ರವಾರದಂದು ಭಗವಂತನ
ತಿರುವಡಿಗಳಲ್ಲಿ ಐಕ್ಯರಾದರು ತತ್ಸಭಂದ ಕಾರ್ಯಗಳು
ದಿನಾಂಕ : 07/01/2025ನೇ ಮಂಗಳವಾರ
ಶೋಡಷ ಆಮಶ್ರಾದ್ಧ ಸಪಿಂಡೀಕರಣ ಹಾಗೂ
ದಿನಾಂಕ : 08-01-2025ನೇ ಬುಧವಾರ
ಶುಭಸ್ವೀಕಾರ (ಪರಮಪದೋತ್ಸವ) ವನ್ನು ಏರ್ಪಡಿಸಿರುತ್ತೇವೆ.
ಈ ಎಲ್ಲಾ ಧಾರ್ಮಿಕ ವಿಧಿವಿಧಾನಗಳಿಗೆ
ತಾವುಗಳೆಲ್ಲರೂ ತಪ್ಪದೇ ಆಗಮಿಸಿ
ಮೃತರ ಆತ್ಮಕ್ಕೆ ಶಾಂತಿ ಕೋರಬೇಕಾಗಿ ಪ್ರಾರ್ಥನೆ.
ಸ್ಥಳ : ಮೃತರ ಸ್ವಗೃಹ, ಶಿವಕೋಟೆ.
ಇಂತಿ ದುಃಖಿತಪ್ತರು
S.R. ಭಾಸ್ಕರ್, S.R. ದಯಾನಂದ
ಹಾಗೂ ಕುಟುಂಬಸ್ಥರು, ಶಿವಕೋಟೆ.

# ಧುರಂಧರ ಚಿತ್ರದ ರಣವೀರ್ ಸಿಂಗ್ ಲುಕ್ ಲೀಕ್



**ನವದೆಹಲಿ:** ರಣವೀರ್ ಸಿಂಗ್ ಅವರ ಹೊಸ ಲುಕ್ ಇತ್ತೀಚೆಗೆ ಆನ್‌ಲೈನ್‌ನಲ್ಲಿ ಲೀಕ್ ಆಗಿದ್ದು, ಮನರಂಜನಾ ಜಗತ್ತಿನಲ್ಲಿ ತೀವ್ರ ಕುತೂಹಲ ಮೂಡಿಸಿದೆ.

ಉದ್ದನೆಯ ಕೂದಲು, ದಪ್ಪ ಗಡ್ಡ ಮತ್ತು ಪೇಟವನ್ನು ಧರಿಸಿರುವ ರಣವೀರ್ ಅವರನ್ನು ನೋಡಿದ ಅಭಿಮಾನಿಗಳು ತಕ್ಷಣವೇ 2018 ರ ಪದ್ಮಾವತ್ ಚಲನಚಿತ್ರದಲ್ಲಿ ಅವರು ನಿರ್ವಹಿಸಿದ ಅಲಾವುದ್ದೀನ್ ಖಿಲ್ಜಿ ಪಾತ್ರವನ್ನು ನೆನಪಿಸಿಕೊಳ್ಳಲು ಪ್ರಾರಂಭಿಸಿದ್ದಾರೆ.

ಸೋರಿಕೆಯಾದ ಚಿತ್ರಗಳಲ್ಲಿ, ಆದಿತ್ಯ ಧರ್ ನಿರ್ದೇಶನದ ಚಿತ್ರದ ಸೆಟ್‌ಗಳಲ್ಲಿ ರಣವೀರ್ ಸಾಹಸ ದೃಶ್ಯಗಳಲ್ಲಿ ಪಾಲ್ಗೊಂಡಿದ್ದಾರೆ.ಈ ಚಿತ್ರಗಳು ಆದಿತ್ಯ ಧರ್ ಅವರ ಧುರಂಧರ ಚಿತ್ರಕ್ಕೆ ಸಂಬಂಧಿಸಿವೆ ಎನ್ನಲಾಗಿದೆ.

ರಣವೀರ್ ಅವರ ಖಿಲ್ಜಿ ಲುಕ್ ಹಿಂತಿರುಗಿದೆ, ಅವರು ಅದ್ಭುತವಾಗಿ ಕಾಣುತ್ತಿದ್ದಾರೆ ಅವರ ಶಕ್ತಿಯನ್ನು ಮತ್ತೆ ನೋಡಲು ಉತ್ಸುಕವಾಗಿದೆ ಎಂದಿದ್ದಾರೆ.

ಸಂಜಯ್ ದತ್, ಆರ್ ಮಾಧವನ್, ಅಕ್ಷಯ್ ಖನ್ನಾ ಮತ್ತು ಅರ್ಜುನ್ ರಾಂಪಾಲ್ ಅವರಂತಹ ದೊಡ್ಡ ತಾರೆಯರನ್ನು ಒಳಗೊಂಡಿರುವ ಚಿತ್ರದ ಪಾತ್ರವರ್ಗದ ಕಪ್ಪು-ಬಿಳುಪು ಚಿತ್ರವನ್ನು ರಣವೀರ್ ತಮ್ಮ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದಾರೆ. ಇದು ನನ್ನ ಅಭಿಮಾನಿಗಳಿಗೆ ಒಂದು ದೊಡ್ಡ ಮೋಷನ್ ಪಿಕ್ಚರ್ ಸಾಹಸವಾಗಿದೆ, ಉತ್ಸಾಹ ಮತ್ತು ಶುದ್ಧ ಮನೋರಂಜನೆ ತುಂಬಿದೆ ಎಂದು ರಣವೀರ್ ಪೋಸ್ಟ್‌ನಲ್ಲಿ ಬರೆದಿದ್ದಾರೆ.

ವರದಿಗಳ ಪ್ರಕಾರ, ಅವರು ಈ ಚಿತ್ರದಲ್ಲಿ ರಾ ಏಜೆಂಟ್ ಪಾತ್ರವನ್ನು ನಿರ್ವಹಿಸುತ್ತಿದ್ದಾರೆ ಮತ್ತು ಚಿತ್ರವು ಸತ್ಯ ಘಟನೆಗಳನ್ನು ಆಧರಿಸಿದೆ. ಇದರೊಂದಿಗೆ, ಅಕ್ಷಯ್ ಖನ್ನಾ ಅವರ ಲುಕ್ ಕೂಡ ಸೋರಿಕೆಯಾಗಿದೆ, ಇದರಲ್ಲಿ ಅವರು ಜೀಪಿನೊಳಗೆ ಕುಳಿತುಕೊಂಡಿದ್ದಾರೆ ಮತ್ತು ಅವರ ಹಣೆಯ ಮೇಲೆ ರಕ್ತದ ಗುರುತುಗಳಿವೆ.

ಚಿತ್ರದ ಎರಡನೇ ಶೆಡ್ಯೂಲ್ ಪ್ರಾರಂಭವಾಗುವ ಮೊದಲು, ರಣವೀರ್ ಸಿಂಗ್ ಆದಿತ್ಯ ಧರ್ ಜೊತೆಗೆ ಅಮೃತಸರದ ಗೋಲ್ಡನ್ ಟೆಂಪಲ್‌ಗೆ ಪೂಜೆ ಸಲ್ಲಿಸಿದರು. ರಣವೀರ್ ಜೊತೆಗೆ ಸಂಜಯ್ ದತ್, ಅಕ್ಷಯ್ ಖನ್ನಾ, ಆರ್ ಮಾಧವನ್ ಮತ್ತು ಅರ್ಜುನ್ ರಾಂಪಾಲ್ ಅವರಂತಹ ದೊಡ್ಡ ತಾರೆಯರು ಧುರಂಧರ ಚಿತ್ರದಲ್ಲಿ ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಳ್ಳಲಿದ್ದಾರೆ.

# ತೂಫಾನ್ ಬ್ಯಾಟಿಂಗ್



ಆಸ್ಟ್ರೇಲಿಯಾ ವಿರುದ್ಧ 5ನೇ ಟೆಸ್ಟ್ ಪಂದ್ಯದಲ್ಲಿ ರಿಷಭ್ ಪಂತ್ ಅಬ್ಬರಿಸಿದ್ದಾರೆ. ಈ ಪಂದ್ಯದ ದ್ವಿತೀಯ ಇನಿಂಗ್ಸ್‌ನಲ್ಲಿ 5ನೇ ಕ್ರಮಾಂಕದಲ್ಲಿ ಬ್ಯಾಟ್ ಬೀಸಿದ್ದಾರೆ.

ಟೆಸ್ಟ್ ಕ್ರಿಕೆಟ್‌ನಲ್ಲಿ ಟೀಮ್ ಇಂಡಿಯಾ ಪರ ಎರಡು ಬಾರಿ ಅತೀ ವೇಗದ ಅರ್ಧಶತಕ ಬಾರಿಸಿದ ದಾಖಲೆ ರಿಷಭ್ ಪಂತ್ ಪಾಲಾಗಿದೆ. ಸಿಡ್ನಿಯಲ್ಲಿ ನಡೆಯುತ್ತಿರುವ ಆಸ್ಟ್ರೇಲಿಯಾ ವಿರುದ್ಧದ ಪಂದ್ಯದಲ್ಲಿ ಸ್ಫೋಟಕ ಅರ್ಧಶತಕ ಸಿಡಿಸುವ ಮೂಲಕ ರಿಷಭ್ ಪಂತ್ ಈ ವಿಶೇಷ ದಾಖಲೆ ನಿರ್ಮಿಸಿದ್ದಾರೆ.

ಸಿಡ್ನಿ ಕ್ರಿಕೆಟ್ ಗ್ರೌಂಡ್‌ನಲ್ಲಿ ನಡೆಯುತ್ತಿರುವ ಆಸ್ಟ್ರೇಲಿಯಾ ವಿರುದ್ಧದ 5ನೇ ಟೆಸ್ಟ್ ಪಂದ್ಯದ 2ನೇ ಇನಿಂಗ್ಸ್‌ನಲ್ಲಿ ರಿಷಭ್ ಪಂತ್ 5ನೇ ಕ್ರಮಾಂಕದಲ್ಲಿ ಕಣಕ್ಕಿಳಿದಿದ್ದರು. ಮೊದಲ ಎಸೆತದಲ್ಲೇ ಸಿಕ್ಸ್ ಸಿಡಿಸುವ ಮೂಲಕ ರನ್ ಖಾತೆ ತೆರೆದ ಪಂತ್ ಆಸ್ಟ್ರೇಲಿಯಾ ಬೌಲರ್‌ಗಳ ಬೆಂಡೆತ್ತಲಾರಂಭಿಸಿದರು.

ಪರಿಣಾಮ ಸಿಡ್ನಿ ಮೈದಾನದ ಮೂಲೆ ಮೂಲೆಗೂ ಸಿಕ್ಸ್-ಫೋರ್‌ಗಳ ಸುರಿ ಮಳೆಯಾಯಿತು. ಈ ಮೂಲಕ ಕೇವಲ 29 ಎಸೆತಗಳಲ್ಲಿ ರಿಷಭ್ ಪಂತ್ ಅರ್ಧಶತಕ ಪೂರೈಸಿದರು. ಈ ಅರ್ಧಶತಕದೊಂದಿಗೆ ಟೆಸ್ಟ್‌ನಲ್ಲಿ ಟೀಮ್ ಇಂಡಿಯಾ 30 ಕ್ಕಿಂತ ಕಡಿಮೆ ಎಸೆತಗಳಲ್ಲಿ ಎರಡು ಬಾರಿ ಹಾಫ್ ಸೆಂಚುರಿ ಸಿಡಿಸಿದ ದಾಖಲೆ ಬರೆದರು. ಟೆಸ್ಟ್ ಕ್ರಿಕೆಟ್‌ನಲ್ಲಿ ಭಾರತದ ಪರ ಅತೀ ವೇಗದ ಅರ್ಧಶತಕ ಬಾರಿಸಿದ ದಾಖಲೆ ರಿಷಭ್ ಪಂತ್ ಹೆಸರಿನಲ್ಲಿದೆ. 2022 ರಲ್ಲಿ ಶ್ರೀಲಂಕಾ ವಿರುದ್ಧ 28 ಎಸೆತಗಳಲ್ಲಿ ಹಾಫ್ ಸೆಂಚುರಿ ಬಾರಿಸಿದ್ದರು. ಇದೀಗ ಆಸ್ಟ್ರೇಲಿಯಾ ವಿರುದ್ಧ 29 ಎಸೆತಗಳಲ್ಲಿ ಅರ್ಧಶತಕ ಸಿಡಿಸಿದ್ದಾರೆ.

ಈ ಮೂಲಕ ಟೀಮ್ ಇಂಡಿಯಾ ಪರ ಟೆಸ್ಟ್ ಕ್ರಿಕೆಟ್‌ನಲ್ಲಿ ಅತೀ ವೇಗದಲ್ಲಿ ಅರ್ಧಶತಕ ಸಿಡಿಸಿದ ಬ್ಯಾಟರ್‌ಗಳ ಪಟ್ಟಿಯಲ್ಲಿ ಮೊದಲೆರಡು ಸ್ಥಾನಗಳನ್ನು ರಿಷಭ್ ಪಂತ್ ತಮ್ಮದಾಗಿಸಿಕೊಂಡಿದ್ದಾರೆ. ಇನ್ನು ಮೂರನೇ ಸ್ಥಾನದಲ್ಲಿ 30 ಎಸೆತಗಳಲ್ಲಿ ಅರ್ಧಶತಕ ಬಾರಿಸಿದ ಕಪಿಲ್ ದೇವ್ ಇದ್ದಾರೆ.

ಪ್ರಕಾಶಕ- ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು-560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿನಕುಂಟೆ(ಪೋ.), ನೆಲಮಂಗಲ, ಬೆಂಗಳೂರು-562123 ಇಲ್ಲಿ ಮುದ್ರಿಸಲ್ಪಟ್ಟಿದೆ. **RNI.KAR/KAN/2009/31934,** ದೂರವಾಣಿ: **9448074878**
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
**RNI.KAR/KAN/2009/31934.**VOLUME-16/ISSUE-42 Email-mussanje2010@gmail.com, Phone: **9448074878**